24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 127 | ನವದೆಹಲಿ | ಬೆಲೆ ₹10 | ನವಂಬರ್ 2, 2026, ಸೋಮವಾರ

ಒಳಪುಟಗಳಲ್ಲಿ

ಗೋವಾದಲ್ಲಿ ಕನ್ನಡಿಗರಿಗಾಗಿ ಕನ್ನಡ ಭವನ ನಿರ್ಮಾಣ: ಡಾ.ಸಂತೋಷ್ ಹಾನಗಲ್ ಘೋಷಣ - ಪು.4

ಇಂದಿನಿಂದ ಐದು ದಿನಗಳ ಕಾಲ ರಾಜ್ಯದ ಹಲವೆಡೆ ಸಾಧಾರಣ ಮಳೆ ಸಾಧ್ಯತೆ: ಹವಾಮಾನ ಇಲಾಖೆ ಎಚ್ಚರಿಕೆ - ಪು.5

ಸ್ಟಿಂಗ್ ಆಪರೇಷನ್ ದೂರು ನೀಡಲು ಸಿದ್ದರಾಮಯ್ಯ ದೆಹಲಿಗೆ ಹೋಗಿಲ್ಲ: ಜಮೀರ್ ಅಹ್ಮದ್ ಖಾನ್ ಸ್ಪಷ್ಟನೆ - ಪು.6



ಕರ್ನಾಟಕ ರಾಜ್ಯೋತ್ಸವ ನಿಮಿತ್ತ ಭಾನುವಾರ ವಿಧಾನಸೌಧದ ಆವರಣದಲ್ಲಿರುವ ಭುವನೇಶ್ವರಿ ದೇವಿಯ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿದ ಸಿಎಂ ಡಿ.ಕೆ.ಶಿವಕುಮಾರ್, ಸಚಿವ ಮಧು ಬಂಗಾರಪ್ಪ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್.

ಕನ್ನಡ ಬಾವುಟಕ್ಕೆ ಅಧಿಕೃತ ನಾಡಧ್ವಜದ ಸ್ಥಾನಮಾನಕ್ಕೆ ಚಿಂತನೆ: ಸಿಎಂ ಡಿ.ಕೆ.ಶಿವಕುಮಾರ್

ಗ್ರಾಮೀಣ ಸರ್ಕಾರಿ ಶಾಲಾ ಮಕ್ಕಳಿಗೆ ವೃತ್ತಿಪರ ಶಿಕ್ಷಣದಲ್ಲಿ ಶೇ.7ರಷ್ಟು ಮೀಸಲಾತಿ

ಬೆಂಗಳೂರು, ನ.01: ಕನ್ನಡ ಬಾವುಟಕ್ಕೆ ಅಧಿಕೃತ ನಾಡಧ್ವಜ ಸ್ಥಾನಮಾನ ನೀಡಲು ಸರ್ಕಾರ ಚಿಂತನೆ ನಡೆಸಿದ್ದು, ಈ ವಿಚಾರವಾಗಿ ಬೆಳಗಾವಿ ಅಧಿವೇಶನದಲ್ಲಿ ಚರ್ಚೆ ನಡೆಸಲಾಗುವುದು ಎಂದು ಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು. ಕಂಠೀರವ ಕ್ರೀಡಾಂಗಣದಲ್ಲಿ ಭಾನುವಾರ ನಡೆದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಹಾಗೂ ಸದಾಶಿವನಗರ ನಿವಾಸ ಮತ್ತು ವಿಧಾನಸೌಧದ ಭುವನೇಶ್ವರಿ ಪ್ರತಿಮೆ ಬಳಿ ಸಿಎಂ ಡಿ.ಕೆ.ಶಿವಕುಮಾರ್ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿ ಈ ವಿಚಾರ ತಿಳಿಸಿದರು.

ನಾನು ಈಗಷ್ಟೇ ರಾಷ್ಟ್ರಧ್ವಜದ ಪಕ್ಕ ಕನ್ನಡ ಧ್ವಜ ಹಾರಿಸಿದ್ದೇನೆ. ಈ ಕನ್ನಡ ಬಾವುಟಕ್ಕೆ ಅಧಿಕೃತ ಸ್ಥಾನಮಾನ ನೀಡಲು ಮುಂದಾಗಿದ್ದೇವೆ. ಈ ಹಿಂದೆ ಸಂಪುಟದಲ್ಲಿ ಈ ಬಗ್ಗೆ ತೀರ್ಮಾನ ಮಾಡಿ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೆವು. ಆದರೆ ನಮಗೆ ಈವರೆಗೂ ಮಾನ್ಯತೆ ಸಿಕ್ಕಿಲ್ಲ ಎಂದರು.

ಅಧಿಕೃತ ನಾಡಧ್ವಜಕ್ಕೆ ಕಾನೂನುಬದ್ಧ ಅಡಿಪಾಯ:

"ನಾಡಧ್ವಜಕ್ಕೆ ಅಧಿಕೃತ ಮಾನ್ಯತೆ ನೀಡಿ, ರಾಷ್ಟ್ರಧ್ವಜದ ಪಕ್ಕದಲ್ಲೇ ಗೌರವಯುತವಾಗಿ ಹಾರಿಸಲು ಅಗತ್ಯವಿರುವ ಕಾನೂನು, ನೀತಿ ನಿಯಮಗಳ ರೂಪುರೇಷೆ ಸಿದ್ಧಪಡಿಸಿ, ಬೆಳಗಾವಿ ಅಧಿವೇಶನದಲ್ಲಿ ಚರ್ಚೆ ನಡೆಸಲಾಗುವುದು. ಆ ಮೂಲಕ ನಾಡಧ್ವಜಕ್ಕೆ ಕಾನೂನಾತ್ಮಕ ಅಡಿಪಾಯ ಹಾಕಲಾಗುವುದು" ಎಂದರು.

ಕನ್ನಡ ಬಾವುಟಕ್ಕೆ ನೀಡಬೇಕಾದ ಗೌರವ, ರಾಷ್ಟ್ರಧ್ವಜದ ಪಕ್ಕದಲ್ಲಿ ಅದನ್ನು ಹಾರಿಸುವಾಗ ಪಾಲಿಸಬೇಕಾದ ನಿಯಮಗಳು ಹಾಗೂ ಅದಕ್ಕೆ ಅಗತ್ಯವಿರುವ ಕಾನೂನು ಅವಕಾಶಗಳ ಕುರಿತು ಸರ್ಕಾರ ಸಿದ್ಧತೆ ನಡೆಸುತ್ತಿದೆ. ಕನ್ನಡಿಗರು ಕನ್ನಡ ಬಾವುಟವನ್ನು ಯಾವ ರೀತಿಯಲ್ಲಿ ಗೌರವದಿಂದ ಕಾಣಬೇಕು ಎಂಬುದಕ್ಕೆ ಮಾರ್ಗಸೂಚಿ ಸಿದ್ಧಪಡಿಸುತ್ತೇವೆ" ಎಂದು ಹೇಳಿದರು. ಮತ್ತೊಮ್ಮೆ ಸಂಪುಟದಲ್ಲಿ ತೀರ್ಮಾನ ಮಾಡಿ ಕಾನೂನು ತಂದು ರಾಷ್ಟ್ರಧ್ವಜದ ಪಕ್ಕ ಕನ್ನಡ ಧ್ವಜವನ್ನು ಹಾರಿಸಲು ತೀರ್ಮಾನ ಮಾಡಲು ನಮ್ಮ ಸರ್ಕಾರ ಬದ್ಧವಾಗಿದೆ. ಈ ಬಗ್ಗೆ ಮುಖ್ಯಮಂತ್ರಿ ಕಚೇರಿ ಒಳಗಡೆ ಮಾತ್ರವಲ್ಲ, ವಿಧಾನಸೌಧದಲ್ಲೂ ಈ ಧ್ವಜವನ್ನು ಹಾರಿಸಲು ಸಾರ್ವಜನಿಕ ಚರ್ಚೆಗೆ, ಶಾಸಕರ ಚರ್ಚೆಗೆ ಇನ್ನು ಮುಂದೆ ಅವಕಾಶ ಮಾಡಿಕೊಟ್ಟು ಚಳಿಗಾಲದ ಅಧಿವೇಶನದಲ್ಲಿ ಇದಕ್ಕೆ ಹೊಸ ರೂಪ ಕೊಡಲು ಮತ್ತು ಕೇಂದ್ರ ಸರ್ಕಾರಕ್ಕೆ ನಿರ್ಣಯ ಮಾಡಿ ಕಾನೂನುಬದ್ಧವಾಗಿ ಏನೆಲ್ಲ ರಕ್ಷಣೆ ಮಾಡಬೇಕು ಆ ಕೆಲಸ ಮಾಡಲು ನಮ್ಮ ಸರ್ಕಾರ ಬದ್ಧವಾಗಿದೆ. ಇದು ನಮ್ಮದಲ್ಲ, ನಿಮ್ಮ ಸರ್ಕಾರ. ಕನ್ನಡಿಗರ ಭಾವನೆಯ ಹೆಗ್ಗುರುತಾಗಿರುವ ಕೆಂಪು ಹಳದಿ ಬಾವುಟಕ್ಕೆ ಗೌರವ ನೀಡಲಾಗುವುದು. ಕನ್ನಡದ ಜ್ಞಾನ, ಪರಂಪರೆ, ಸಂಸ್ಕೃತಿ, ಸರ್ವಧರ್ಮ ಪರಂಪರೆ ಸಮಾನತೆ, ಶಾಂತಿಯ ಸಂದೇಶ ಸಾರುವ ಈ ಬಾವುಟವನ್ನು ನಾಡಧ್ವಜವಾಗಿ ಅಧಿಕೃತಗೊಳಿಸಲು ಮುಂದಾಗಿದ್ದೇವೆ. ಭಾರತದ ಒಕ್ಕೂಟ ವ್ಯವಸ್ಥೆಯಲ್ಲಿ ಕರ್ನಾಟಕದ ಹೆಗ್ಗುರತನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯುವುದಕ್ಕೆ ಈ ತೀರ್ಮಾನ ಮಾಡಲಾಗುವುದು ಎಂದು ವಿವರಿಸಿದರು.

ಕನ್ನಡ ಬಾವುಟ ಹಾರಿಸುವುದನ್ನು ಕಡ್ಡಾಯಗೊಳಿಸುವ ಚಿಂತನೆ:

ಕನ್ನಡ ರಾಜ್ಯೋತ್ಸವದ 71ನೇ ವರ್ಷದಿಂದ ಮುಂದಿನ ಒಂದು ವರ್ಷದ ಅವಧಿಯಲ್ಲಿ ವಿವಿಧ ಕಾರ್ಯಕ್ರಮಗಳ ಮೂಲಕ ಕನ್ನಡದ ಹಿರಿಮೆ ಸಾರಲು ಸರ್ಕಾರ ಸಿದ್ಧತೆ ಮಾಡಿಕೊಂಡಿದೆ. ಎಲ್ಲ ಸರ್ಕಾರಿ ಕಚೇರಿಗಳ ಮೇಲೆ ಕನ್ನಡ ಧ್ವಜ ಹಾರಿಸುವುದರ ಜತೆಗೆ, ಸರ್ಕಾರದ ಬೆಂಬಲ ಹೊಂದಿರುವ ಸಂಸ್ಥೆಗಳಲ್ಲೂ ಕನ್ನಡ ಬಾವುಟ ಹಾರಿಸುವುದನ್ನು ಕಡ್ಡಾಯಗೊಳಿಸುವ ಚಿಂತನೆ ಇದೆ. ಖಾಸಗಿ ಸಂಸ್ಥೆಗಳೂ ಕನ್ನಡ ಧ್ವಜ ಹಾರಿಸುವಂತೆ ಈ ತಿಂಗಳಲ್ಲೇ ಸರ್ಕಾರದ ಆದೇಶ ಹೊರಡಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.



ಕಂಠೀರವ ಕ್ರೀಡಾಂಗಣದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಶಾಸಕರಾದ ಎ.ಪಿ.ರಂಗನಾಥ್, ಗಣೇಶ್ ಹುಕ್ಕೇರಿ, ಡಾ.ಕೆ.ಗೋವಿಂದರಾಜು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಮಧು ಬಂಗಾರಪ್ಪ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ವಿ. ರಶ್ಮೀ ಮಹೇಶ್, ಶಿಕ್ಷಣ ಇಲಾಖೆ ಆಯುಕ್ತೆ ವಿದ್ಯಾಕುಮಾರಿ, ಡಿಜಿಪಿ ಸಲೀಮ್, ಪೊಲೀಸ್ ಕಮೀಷನರ್ ಸೀಮಂತ್ ಕುಮಾರ್ ಸಿಂಗ್ ಹಾಜರಿದ್ದರು.

ಭಾಷೆ ಸಂಸ್ಕೃತಿ, ಜ್ಞಾನದ ಪ್ರತಿಬಿಂಬ:

ನಮ್ಮ ಉಸಿರು, ಹೆಸರು, ಕಸುಬು ಕನ್ನಡ. ನಮ್ಮ ನುಡಿ ಬಹಳ ಚೆಂದ, ಅದರಲ್ಲಿ ಏನೇ ಗೀಚಿದರೂ ಆಗುವುದು ಶ್ರೀಗಂಧ. ತನು ಕನ್ನಡ, ಮನ ಕನ್ನಡ, ನುಡಿ ಕನ್ನಡ, ನಡೆ ಕನ್ನಡ. ಅದನ್ನು ಆಚರಿಸಲು ನಾವು ಸೇರಿದ್ದೇವೆ. ಜಗದ ಏಳಿಗೆಗೆ ದಾ ರಾ ಬೇಂದ್ರೆ ಅವರು ಕನ್ನಡ ಕರ್ನಾಟಕದ ದಿಕ್ಸೂಚಿ, ಕರ್ನಾಟಕ ಭಾರತದ ಭವಿಷ್ಯ. ಮಾತೃಭಾಷೆ ಮೂಲಕ ಜ್ಞಾನದ ಸಂಸ್ಕೃತಿ ಹರಿಯುತ್ತಿದೆ ಎಂದು ಪ್ರತಿಪಾದಿಸಿದ್ದಾರೆ. ಭಾಷೆ ಸಂಸ್ಕೃತಿ, ಜ್ಞಾನದ ಪ್ರತಿಬಿಂಬ, ಹೆತ್ತ ತಾಯಿ, ಹುಟ್ಟಿದ ನಾಡು ಸ್ವರ್ಗಕ್ಕಿಂತ ಮಿಗಿಲು ಎಂದು ನಮಗೆ ಮಾರ್ಗದರ್ಶನ ನೀಡಿದ್ದಾರೆ. ನಾವು ಬೇರೆಯವರ ಮನಸ್ಸನ್ನು ಕನ್ನಡದಿಂದಲೇ ಗೆಲ್ಲಬೇಕು. ನಾವು ಯಾವುದೇ ದೇಶದಲ್ಲಿದ್ದರೂ ನಮ್ಮ ಉಸಿರು ಕನ್ನಡವಾಗಿರಬೇಕು ಎಂದು ಕರೆಕೊಟ್ಟರು.

ಮಾತೃಭಾಷೆಯಲ್ಲಿ ಕಲಿಯುವ ಜ್ಞಾನ ಗಟ್ಟಿಯಾಗಿರುತ್ತದೆ:

ಈ ದೇಶದಿಂದ ಹೊರಗಿರುವ ಕನ್ನಡಿಗರು ಕನ್ನಡ ಸಂಘಟನೆ ಕಟ್ಟಿಕೊಂಡು ಮಾತೃಭಾಷೆ ಉಳಿಸಲು ಶ್ರಮಿಸುತ್ತಿದ್ದಾರೆ. ಅವರಿಗೆ ನಾನು ಸಾಷ್ಟಾಂಗ ನಮಸ್ಕಾರ ಸಲ್ಲಿಸುತ್ತೇನೆ. ನುಡಿ ಉಳಿದರೆ ನಾಡು ಉಳಿಯುತ್ತದೆ. ನಾಡು ಉಳಿದರೆ ನುಡಿ ಉಳಿಯುತ್ತದೆ. ನಾವು ಇಲ್ಲಿ ರಾಜ್ಯೋತ್ಸವ ಮಾತ್ರ ಆಚರಿಸುತ್ತಿಲ್ಲ. ಕನ್ನಡ ತಾಯಿ ಭುವನೇಶ್ವರಿ ಸೇವೆ. ಇದು ಮಾತೃಭಾಷೆಯ ಪೂಜೆ. ತಾಯಿ ನುಡಿ ಸೇವೆಗಿಂತ ದೊಡ್ಡ ಧರ್ಮ ಮತ್ತೊಂದಿಲ್ಲ. ಮಗು ಹುಟ್ಟಿದಾಗ ತಾಯಿ ಮಗುವನ್ನು ಪ್ರೀತಿಸಿದಂತೆ ನಾವು ನಮ್ಮ ತಾಯಿ ಭಾಷೆಯನ್ನು ಪ್ರೀತಿಸಬೇಕು. ಕನ್ನಡವನ್ನು ಪ್ರೀತಿಸುವುದು, ತಾಯಿಯನ್ನು ಪ್ರೀತಿಸಿದಂತೆ. ಮಾತೃಭಾಷೆಯಲ್ಲಿ ಕಲಿಯುವ ಜ್ಞಾನ ಗಟ್ಟಿಯಾಗಿರುತ್ತದೆ. ಕನ್ನಡಕಕ್ಕೆ ಕಿರುಬೆರಳು ಎತ್ತಿದರೂ ಸಾಕು, ಅದು ಗೋವರ್ಧನಗಿರಿಯಾಗುತ್ತದೆ ಎಂದು ಕುವೆಂಪು ಅವರು ಹೇಳಿದ್ದಾರೆ. ಕುವೆಂಪು ಅವರು ಕನ್ನಡದಲ್ಲಿ ವಿಶ್ವಮಾನವ ಸಂದೇಶ ಸಾರಿದ್ದಾರೆ. ಕನ್ನಡ ಭಾಷೆಗೆ 2 ಸಾವಿರ ವರ್ಷಗಳ ಇತಿಹಾಸವಿದ್ದು, ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ಸಿಕ್ಕಿದೆ. ನಮ್ಮ ಭಾಷೆಗೆ 8 ಜ್ಞಾನಪೀಠ ಪ್ರಶಸ್ತಿ ಸಂದಿದೆ ಎಂದು ತಿಳಿಸಿದರು.

ಪಂಪ, ರನ್ನ, ಜನ್ನ, ಕುಮಾರವ್ಯಾಸ, ಕನಕದಾಸರು, ಪುರಂದರದಾಸರು, ಸರ್ವಜ್ಞ, ಬಸವಣ್ಣ ಹುಟ್ಟಿದ ನಾಡು. ಕುವೆಂಪು, ಬೇಂದ್ರೆ, ಶಿವರಾಮ ಕಾರಂತ, ಗೋಕಾಕ್, ಅನಂತಮೂರ್ತಿ, ತೇಜಸ್ವಿ, ಸಿದ್ದಲಿಂಗಯ್ಯ, ನಿಸಾರ್ ಅಹ್ಮದ್ ರಂತಹ ದಿಗ್ಗಜರು ಮಾಡಿರುವ ಸೇವೆ, ನಮ್ಮ ಶ್ರೀಮಂತ ಭಾಷೆಗೆ ಕೊಟ್ಟಿರುವ ಗೌರವವನ್ನು ನಾವು ಸ್ಮರಿಸಬೇಕು. ಭಾರತ ಜನನಿಯ ತನುಜಾತೆ ಕನ್ನಡಮ್ಮನ ನಾಡಗೀತೆ ಕನ್ನಡಿಗನ ಸ್ವಾಭಿಮಾನ ಗೀತೆಯನ್ನು ಪ್ರತಿ ಕಾರ್ಯಕ್ರಮದಲ್ಲಿ ಹಾಡುತ್ತೇವೆ ಎಂದರು. ವಿಶ್ವಕ್ಕೆ ಪ್ರಜಾಪ್ರಭುತ್ವದ ಪರಿಕಲ್ಪನೆ ಕೊಟ್ಟಿದ್ದು ಕನ್ನಡನಾಡು. ಈ ನಾನು ನುಡಿಯನ್ನು ಪ್ರೀತಿಸುವಂತೆ ನಾವು ಮಕ್ಕಳಿಗೆ ಕಲಿಸಬೇಕಿದೆ. ನಾವು ಭಾಷೆ ಪ್ರೀತಿಸಿದರೆ ಭಾಷೆ ನಮ್ಮನ್ನು ಕಾಪಾಡುತ್ತದೆ. ಭಾಷೆಗೆ ಗಡಿಯಿಲ್ಲ. ಡಿಜಿಟಲ್ ಯುಗದಲ್ಲಿ ಮೊಬೈಲ್‌ನಲ್ಲಿ ನಾವು ಎಲ್ಲಾ ಭಾಷೆ ಬಳಸಬಹುದು. ಕಲಿಕೆ ಬಹಳ ವಿಸ್ತಾರವಾಗಿದೆ. ಭಾಷೆಗಳ ಸ್ಪರ್ಧೆಗಳ ಮಧ್ಯೆ ಕನ್ನಡ ಬೆಳೆಯಬೇಕು. ಅದಕ್ಕಾಗಿ ನಮ್ಮ ಮಕ್ಕಳು ಮೊದಲು ಕನ್ನಡ ಕಲಿಯಬೇಕು. ಕಲಿತರಷ್ಟೇ ಸಾಲದು, ದಿನನಿತ್ಯ ಕನ್ನಡ ಭಾಷೆ ಬಳಸಬೇಕು ಎಂದು ಸಂದೇಶ ನೀಡಿದರು. (3ನೇ ಪುಟಕ್ಕೆ)



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಭಾನುವಾರ ಬೆಂಗಳೂರಿನ ಶ್ರೀಕಂಠೀರವ ಕ್ರೀಡಾಂಗಣದಲ್ಲಿ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು ಉದ್ಘಾಟಿಸಿ, ನಗರದ ವಿವಿಧ ಶಾಲೆಗಳ ವಿದ್ಯಾರ್ಥಿಗಳ ಪಥಸಂಚಲನ ವೀಕ್ಷಿಸಿ ಗೌರವ ಸ್ವೀಕರಿಸಿದರು..



ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಭಾನುವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸಿದ್ದ ಸಮಾರಂಭದಲ್ಲಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ರವೀಂದ್ರ ಕಲಾಕ್ಷೇತ್ರದಲ್ಲಿ ಭಾನುವಾರ ನಡೆದ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ, ನಾಡಿನ 71 ಸಾಧಕರಿಗೆ ಪ್ರಶಸ್ತಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗಳನ್ನು ಪ್ರದಾನ ಮಾಡಿದ ನಂತರ ಸಮೂಹಿಕ ಛಾಯಾಚಿತ್ರದ ವಿಹಂಗಮ ನೋಟ.

ದೆಹಲಿ ಕರ್ನಾಟಕ ಭವನದಲ್ಲಿ ಹೆಮ್ಮೆಯ ಕನ್ನಡ ರಾಜ್ಯೋತ್ಸವ ಆಚರಣೆ

ನವದೆಹಲಿ, ನ.1: ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಕನ್ನಡದ ಹೆಮ್ಮೆಯಿಂದ ಕಂಗೊಳಿಸಿತು. ಭಾನುವಾರ ಕರ್ನಾಟಕ ಭವನದಲ್ಲಿ ಕರ್ನಾಟಕ ರಾಜ್ಯೋತ್ಸವ ವನ್ನು ಅತ್ಯಂತ ವೈಭವಯುತವಾಗಿ ಆಚರಿಸಲಾಯಿತು. ರಾವ್ ತುಲಾ ರಾಮ್ ಮಾರ್ಗದಲ್ಲಿರುವ ದೆಹಲಿ ಕರ್ನಾಟಕ ಸಂಘ'ದಲ್ಲಿ ನೂರಾರು ಕನ್ನಡಿಗರು, ಹಿರಿಯರು, ಯುವಕರು ಮತ್ತು ಮಕ್ಕಳು ಒಗ್ಗೂಡಿದರು. ಅಲ್ಲಿಂದ ಚಾಣಕ್ಯಪುರಿಯ ಕೌಟಿಲ್ಯ ಮಾರ್ಗದಲ್ಲಿರುವ ಕರ್ನಾಟಕ ಭವನದ ವರೆಗೆ ವರ್ಣರಂಜಿತ ಮೆರವಣಿಗೆ ನಡೆಯಿತು. ಹಳದಿ ಮತ್ತು ಕೆಂಪು ಬಣ್ಣದ ಕನ್ನಡ ಧ್ವಜಗಳನ್ನು ಎತ್ತಿ ಹಿಡಿದು. ಈ ಉತ್ಸಾಹಭರಿತ ಮೆರವಣಿಗೆಯು, ಹಬ್ಬದ ವಾತಾವರಣ ದಲ್ಲಿ ಸಿಂಗರಿಸಲ್ಪಟ್ಟಿದ್ದ ಕರ್ನಾಟಕ ಭವನದಲ್ಲಿ ಅಂತ್ಯಗೊಂಡಿತು. ಹಳದಿ ಮತ್ತು ಕೆಂಪು ದೀಪಗಳಿಂದ ಕಂಗೊಳಿಸುತ್ತಿದ್ದ ಈ ಕಟ್ಟಡವು, ಅಂದು ಒಂದು ಪುಟ್ಟ ಕರ್ನಾಟಕವನ್ನೇ ನೆನಪಿಸುವಂತಿತ್ತು. ಕಾರ್ಯಕ್ರಮದ ಸ್ಥಳದಲ್ಲಿ, ಗಣ್ಯರು ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪುಷ್ಪಾಂಜಲಿ ಅರ್ಪಿಸಿದರು...

ಕಾರ್ಯಕ್ರಮದ ಸ್ಥಳದಲ್ಲಿ, ಗಣ್ಯರು ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪುಷ್ಪಾಂಜಲಿ ಅರ್ಪಿಸಿದರು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ದೆಹಲಿಯಲ್ಲಿನ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಮತ್ತು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಶಾಸಕ ಕೋನರೆಡ್ಡಿ ಹಾಜರಿದ್ದರು. ಈ ವರ್ಷದ ಕಾರ್ಯಕ್ರಮವನ್ನು ವಿಭಿನ್ನ ರೀತಿಯಲ್ಲಿ ಆಯೋಜಿಸುವಲ್ಲಿ ನಿವಾಸಿ ಆಯುಕ್ತ ಸಮೀರ್ ಶುಕ್ಲಾ ಪ್ರಮುಖ ಪಾತ್ರ ವಹಿಸಿದರು. ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷ ಆರ್. ರೇಣುಕುಮಾರ್ ಸೇರಿದಂತೆ ಹಲವರು ಈ ಸಂದರ್ಭದಲ್ಲಿ ಹಾಜರಿದ್ದು, ಸಮುದಾಯದೊಂದಿಗೆ ಸೇರಿ ಹೆಮ್ಮೆ ಮತ್ತು ಹಬ್ಬದ ಉತ್ಸಾಹದಿಂದ ಈ ದಿನವನ್ನು ಆಚರಿಸಿದರು.



ಸಿಇಸಿ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ

ರಾಮಲೀಲಾ ಮೈದಾನದಲ್ಲಿ ಶಕ್ತಿ ಪ್ರದರ್ಶನ

ರಾಹುಲ್ ಗಾಂಧಿ, ಖರ್ಗೆ ಸೇರಿದಂತೆ ಇಂಡಿಯಾ ಮೈತ್ರಿಕೂಟದ ನಾಯಕರಿಂದ ಚುನಾವಣಾ ಆಯೋಗದ ವಿರುದ್ಧ ವಾಗ್ದಾಳಿ

ನವದೆಹಲಿ: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿವೆ ಮತ್ತು ಮತದಾರರ ಹೆಸರುಗಳನ್ನು ಉದ್ದೇಶಪೂರ್ವಕವಾಗಿ ತೆಗೆದು ಹಾಕಲಾಗಿದೆ ಎಂದು ಆರೋಪಿಸಿ ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟ ಭಾನುವಾರ ದೆಹಲಿಯ ರಾಮಲೀಲಾ ಮೈದಾನದಲ್ಲಿ ಬೃಹತ್ ಪ್ರತಿಭಟನೆ ನಡೆಸಿತು. ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ನಡೆದ ಈ ಪ್ರತಿಭಟನೆಯಲ್ಲಿ ಕಾಂಗ್ರೆಸ್ ಸೇರಿದಂತೆ ವಿವಿಧ ಪ್ರತಿಪಕ್ಷಗಳ ಪ್ರಮುಖ ನಾಯಕರು ಭಾಗವಹಿಸಿದ್ದರು.

'ಮತ ಉಳಿಸಿ, ದೇಶ ಉಳಿಸಿ' ಅಭಿಯಾನದ ಭಾಗವಾಗಿ ಆಯೋಜಿಸಲಾಗಿದ್ದ ಈ ಸಮಾವೇಶದಲ್ಲಿ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್, ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಪಿಡಿಪಿ ನಾಯಕಿ ಮೆಹಬೂಬಾ ಮುಫ್ತಿ ಸೇರಿದಂತೆ ಹಲವು ನಾಯಕರು ಪಾಲ್ಗೊಂಡಿದ್ದರು.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದಿಂದ ಹಲವು ಪ್ರತಿಪಕ್ಷ ನಾಯಕರು ತೆರೆದ ಬಸ್ಸಗಳಲ್ಲಿ ಮಿಂಟೋ ರಸ್ತೆ ಜಂಕ್ಷನ್ವರೆಗೆ ಪ್ರಯಾಣಿಸಿದರು. ಅಲ್ಲಿಂದ ಕನ್ನಾಟ್ ಪ್ಲೇಸ್ ಮಾರ್ಗವಾಗಿ ಅಜ್ಮೀರಿ ಗೇಟ್ ಮೂಲಕ ರಾಮಲೀಲಾ ಮೈದಾನದವರೆಗೆ ಮೆರವಣಿಗೆ ನಡೆಸಿದರು. ವಿವಿಧ ರಾಜ್ಯಗಳಿಂದ ಆಗಮಿಸಿದ್ದ ಕಾಂಗ್ರೆಸ್ ಹಾಗೂ ಮೈತ್ರಿಕೂಟದ ಕಾರ್ಯಕರ್ತರು ಪಕ್ಷದ ಧ್ವಜಗಳು ಮತ್ತು ರಾಷ್ಟ್ರಧ್ವಜಗಳನ್ನು ಹಿಡಿದು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡುವವರೆಗೆ ಹೋರಾಟ: ಖರ್ಗೆ

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಹಿಳೆಯರು, ಯುವಕರು ಹಾಗೂ ದಲಿತರ ಮತಗಳನ್ನು ಕಸಿದುಕೊಳ್ಳಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು. ಚುನಾವಣಾ ವ್ಯವಸ್ಥೆಯ ವಿಶ್ವಾಸಾರ್ಹತೆಯನ್ನು ಕಾಪಾಡುವ ಉದ್ದೇಶದಿಂದ ಪ್ರತಿಪಕ್ಷಗಳು ಒಂದಾಗಿವೆ ಎಂದು ಹೇಳಿದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಹುದ್ದೆಯಿಂದ ಕೆಳಗಿಳಿಯುವವರೆಗೂ ಹೋರಾಟ ಮುಂದುವರಿಯಲಿದೆ ಎಂದು ಖರ್ಗೆ ಸ್ಪಷ್ಟಪಡಿಸಿದರು. ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಪ್ರತಿಪಕ್ಷಗಳ ಅಸಮಾಧಾನವನ್ನು ಅವರು ವ್ಯಕ್ತಪಡಿಸಿದರು.

ಚುನಾವಣಾ ಆಯೋಗ ಕೈಗೊಂಡಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯೇ ಪ್ರತಿಭಟನೆಯ ಪ್ರಮುಖ ವಿಷಯವಾಗಿತ್ತು. ಈ ಪ್ರಕ್ರಿಯೆಯಲ್ಲಿ ದೊಡ್ಡ ಪ್ರಮಾಣದಲ್ಲಿ ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ ಎಂಬುದು ಪ್ರತಿಪಕ್ಷಗಳ ಆರೋಪ. ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಮೂಲಕ ಚುನಾವಣಾ ಪ್ರಕ್ರಿಯೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿವೆ.

ಇವಿಎಂ ಬಳಕೆಯ ಬಗ್ಗೆಯೂ ಪ್ರತಿಪಕ್ಷಗಳು ಪ್ರಶ್ನೆ ಎತ್ತಿದ್ದು, ಮತಪತ್ರಗಳ ಮೂಲಕ ಚುನಾವಣೆ ನಡೆಸುವಂತೆ ಒತ್ತಾಯಿಸಿವೆ. ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ಪಾರದರ್ಶಕತೆ ಇರಬೇಕು ಮತ್ತು ಮತದಾನದ ಹಕ್ಕು ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಖಚಿತವಾಗಬೇಕು ಎಂಬುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿತ್ತು.

ಮೈತ್ರಿಕೂಟದ ಹಲವು ನಾಯಕರಿಂದ ಕೇಂದ್ರದ ವಿರುದ್ಧ ವಾಗ್ದಾಳಿ:

ಸಮಾವೇಶದಲ್ಲಿ ಅಖಿಲೇಶ್ ಯಾದವ್, ಮಮತಾ ಬ್ಯಾನರ್ಜಿ, ಮೆಹಬೂಬಾ ಮುಫ್ತಿ ಸೇರಿದಂತೆ ಹಲವು ಪ್ರತಿಪಕ್ಷ ನಾಯಕರು ಮಾತನಾಡಿ, ಚುನಾವಣಾ ಆಯೋಗದ ಕಾರ್ಯವೈಖರಿ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಟೀಕೆಗಳನ್ನು ವ್ಯಕ್ತಪಡಿಸಿದರು. ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಹಾಗೂ ಕಾಂಗ್ರೆಸ್ ಸಂಸದ ಶಶಿ ತರೂರ್ ಕೂಡ ಸಮಾವೇಶವನ್ನುದ್ದೇಶಿಸಿ ಮಾತನಾಡಿದರು.

ಬಿಗಿ ಪೊಲೀಸ್ ಭದ್ರತೆ:

ಪ್ರತಿಭಟನೆಯ ಹಿನ್ನೆಲೆಯಲ್ಲಿ ರಾಮಲೀಲಾ ಮೈದಾನ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿತ್ತು. ಸುಮಾರು 3,000ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ಹಾಗೂ 10,000 ಅರೆಸೇನಾ ಪಡೆ ಸಿಬ್ಬಂದಿಯನ್ನು ನಿಯೋಜಿಸುವ ನಿರೀಕ್ಷೆ ಇತ್ತು. ಪ್ರತಿಭಟನಾಕಾರರು ಮೆರವಣಿಗೆಯ ಬಳಿಕ ಜಂತರ್ ಮಂತರ್ ಕಡೆಗೆ ತೆರಳದಂತೆ ಪೊಲೀಸರು ನಿಗಾ ವಹಿಸಿದ್ದರು.

ಪ್ರತಿಭಟನೆಯಲ್ಲಿ ಭಾಗವಹಿಸುವವರು ಬಿಳಿ ಬಟ್ಟೆ ಧರಿಸುವಂತೆ ಯುವ ಕಾಂಗ್ರೆಸ್ ಕರೆ ನೀಡಿತ್ತು. ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಿ ಅವರನ್ನು ಮೃತಪಟ್ಟವರಂತೆ ತೋರಿಸಲಾಗಿದೆ ಎಂಬ ಆರೋಪವನ್ನು ಸಂಕೇತಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿತ್ತು.



ನಿತ್ಯ ಪಂಚಾಂಗ 2.11.2026 ಸೋಮವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಆಶ್ವಯುಜ ಬಹುಳ, ಅಷ್ಟಮಿ, ಪುಷ್ಯ ನಕ್ಷತ್ರ, ಕಾಲಾಷ್ಟಮಿ, ಗೋಕರ್ಣ ಗಂಗಾ ಜಯಂತ್ಯುತ್ಸವ, ಸರ್ವ ಆತ್ಮ ದಿನ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	ಸ. 5.04– 6.33	12.00– 1.30	3.00– 4.00
ಸೋಮ	ಬೆ. 7.20– 9.04	10.30–12.00	1.30– 3.00
ಮಂಗಳ	ಮ. 3.25– 4.59	9.00–10.30	12.00– 1.30
ಬುಧ	ಮ.12.16– 1.50	7.30– 9.00	10.30– 12.00
ಗುರು	ಮ. 1.50– 3.29	6.00– 7.30	9.00– 10.30
ಶುಕ್ರ	ಬೆ.10.42–12.16	3.00– 4.30	7.30– 9.00
ಶನಿ	ಬೆ. 9.07–10.41	1.30– 3.00	6.00– 7.30

ಕರ್ನಾಟಕದಲ್ಲಿ ಇರುವವರು ಈ ಭೂಮಿಗೆ ಗೌರವ ನೀಡಬೇಕು: ಸಿಎಂ ತಾಕೀತು

ಬೆಳಗಾವಿಯಲ್ಲಿ ಎಂಇಎಸ್ ಕರಾಳ ದಿನ ಆಚರಣೆಗೆ ಸಿಎಂ ಪ್ರತಿಕ್ರಿಯೆ

ಕನ್ನಡ ಹೋರಾಟಗಾರರ ಕೇಸ್ ವಾಪಸ್ ಗೆ ಸೂಚನೆ

ನಮ್ಮ ಸರ್ಕಾರ ಕನ್ನಡ ಹಾಗೂ ಕನ್ನಡಿಗರ ರಕ್ಷಣೆ ಮಾಡಲು ಬದ್ಧ

ಬೆಂಗಳೂರು, ನ. 01: "ಈ ನೆಲದಲ್ಲಿ ವಾಸಿಸುವ ಪ್ರತಿಯೊಬ್ಬರೂ ಇಲ್ಲಿನ ಕಾನೂನು ಮತ್ತು ನೆಲದ ಗೌರವವನ್ನು ಕಾಪಾಡಬೇಕು. ನಮ್ಮ ಭೂಮಿಯಲ್ಲಿ ಇದ್ದ ಮೇಲೆ ನಮ್ಮ ಭೂಮಿಗೆ ಗೌರವ ಕೊಡಬೇಕು. ಕಾನೂನು ಎಲ್ಲರಿಗೂ ಒಂದೇ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ನಗರದ ವಿವಿಧ ಕಡೆ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಭಾನುವಾರ ಪ್ರತಿಕ್ರಿಯೆ ನೀಡಿದರು. ಕನ್ನಡಿಗರು, ಮರಾಠಿಗರು ಕಾನೂನು ಕೈಗೆತ್ತಿಕೊಳ್ಳಬಾರದು. ಬೆಳಗಾವಿಯಲ್ಲಿ ಎಂಇಎಸ್ ಸಂಘಟನೆ ಕರಾಳ ದಿನಾಚರಣೆ ಆಚರಿಸಿರುವ ಕುರಿತು ಕೇಳಿದಾಗ, "ಕನ್ನಡಿಗರು ಹಾಗೂ ಮರಾಠಿಗರು ಕಾನೂನನ್ನು ಕೈಗೆತ್ತಿಕೊಳ್ಳಬಾರದು. ಈ ನೆಲದಲ್ಲಿ ವಾಸಿಸುವ ಪ್ರತಿಯೊಬ್ಬರೂ ಇಲ್ಲಿನ ಗೌರವವನ್ನು ಕಾಪಾಡಬೇಕು" ಎಂದರು.

ನೈತಿಕ ಪೊಲೀಸ್‌ಗಿರಿ ಮಾಡಬೇಡಿ:

"ಯಾವುದೇ ಕನ್ನಡಪರ ಸಂಘಟನೆಗಳು, ಐಟಿ ಸಂಸ್ಥೆಗಳ ಮೇಲೆ ದಾಳಿ ಮಾಡಲು ಹೋಗಬಾರದು. ಕಾನೂನನ್ನು ಕೈಗೆತ್ತಿಕೊಳ್ಳುವುದು ಸರಿಯಲ್ಲ. ನೈತಿಕ ಪೊಲೀಸ್ ಗಿರಿ ನಡೆಸಲು ಅವಕಾಶವಿಲ್ಲ. ಸರ್ಕಾರ ಮತ್ತು ಪೊಲೀಸ್ ಇಲಾಖೆ ಇದೆ. ಯಾವುದೇ ದೂರು ಅಥವಾ ಸಮಸ್ಯೆಗಳಿದ್ದರೆ ಸರ್ಕಾರದ ಗಮನಕ್ಕೆ ತನ್ನಿ. ಪೊಲೀಸರು ಕಾನೂನು ಪ್ರಕಾರ ಕ್ರಮ ಕೈಗೊಳ್ಳುತ್ತಾರೆ" ಎಂದು ತಿಳಿಸಿದರು.



ಕನ್ನಡ ಹೋರಾಟಗಾರರ ಮೇಲಿನ ಪ್ರಕರಣ ವಾಪಸ್ ಪಡೆಯಲು ಸೂಚನೆ:

ಕನ್ನಡ ಹೋರಾಟಗಾರರ ಮೇಲಿನ ಪ್ರಕರಣಗಳನ್ನು ಹಿಂಪಡೆಯುವ ಕುರಿತು ಈಗಾಗಲೇ ಸೂಚನೆ ನೀಡಲಾಗಿದೆ ಎಂದು ತಿಳಿಸಿದ ಅವರು, ನಿಮ್ಮ ಮೇಲಿರುವ ಪ್ರಕರಣಗಳನ್ನೆಲ್ಲ ವಾಪಸ್ ಪಡೆಯಬೇಕು ಎಂದು ಈಗಾಗಲೇ ಸೂಚನೆ ನೀಡಿದ್ದೇನೆ. ಈ ಸಂಬಂಧ ಕಡತಗಳು ಸಿದ್ಧವಾಗುತ್ತಿವೆ. ಇಂತಹ ಪ್ರಕರಣಗಳಿಂದ ಹೋರಾಟಗಾರರಿಗೆ ಮುಕ್ತಿ ನೀಡಬೇಕು ಎಂಬ ತೀರ್ಮಾನಕ್ಕೆ ಸರ್ಕಾರ ಬಂದಿದೆ. ಇಂತಹ ಸಂದರ್ಭದಲ್ಲಿ ನೀವು ಮತ್ತೆ ಈ ರೀತಿ ಮಾಡಿದರೆ ಪೊಲೀಸರು ಪ್ರಕರಣ ವಾಪಸ್ ಪಡೆಯಲು ಆಕ್ಷೇಪ ವ್ಯಕ್ತಪಡಿಸುತ್ತಾರೆ. ಹೀಗಾಗಿ ದಯವಿಟ್ಟು ಕಾನೂನು ಕೈಗೆತ್ತಿಕೊಳ್ಳದೆ ಸರ್ಕಾರಕ್ಕೆ ಸಹಕಾರ ನೀಡಿ" ಎಂದು ಮನವಿ ಮಾಡಿದರು. "ಕನ್ನಡ ಭಾಷೆ, ಕರ್ನಾಟಕದ ಜನರ ರಕ್ಷಣೆಗೆ ಸರ್ಕಾರ ಬದ್ಧವಾಗಿದೆ. ಈ ಜವಾಬ್ದಾರಿಯನ್ನು ಸರ್ಕಾರವೇ ನಿರ್ವಹಿಸಲಿದೆ. ಹೀಗಾಗಿ ಯಾರೂ ಕಾನೂನು ಉಲ್ಲಂಘಿಸುವ ಮೂಲಕ ಸಮಸ್ಯೆ ಸೃಷ್ಟಿಸಬಾರದು" ಎಂದು ಹೇಳಿದರು.

ಮತದಾರರ ಹಕ್ಕುಗಳನ್ನು ರಕ್ಷಿಸಲು ಕಾಂಗ್ರೆಸ್ ಬದ್ಧ:

ದೆಹಲಿಯಲ್ಲಿ ಕಾಂಗ್ರೆಸ್ ನೇತೃತ್ವದಲ್ಲಿ ನಡೆಯುತ್ತಿರುವ ಪ್ರತಿಭಟನೆ ಬಗ್ಗೆ ಕೇಳಿದಾಗ, ಮತದಾನದ ಹಕ್ಕು ಎಂದರೆ ಅದು ಬದುಕುವ ಹಕ್ಕಿದ್ದಂತೆ. ಆದರೆ, ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಲಕ್ಷಾಂತರ ಜನರ ಮತಗಳನ್ನು ವ್ಯವಸ್ಥಿತವಾಗಿ ಅಳಿಸಿಹಾಕಲಾಗಿದೆ. ದೇಶದ ಪ್ರತಿಯೊಬ್ಬ ಮತದಾರರಿಗೆ ಮತದಾನದ ಹಕ್ಕು ನೀಡುವುದು ನಮ್ಮ ಕರ್ತವ್ಯವಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ರಕ್ಷಿಸಲು ಶ್ರಮಿಸುತ್ತಿರುವ ಪಕ್ಷವು ಪ್ರತಿ ಮತದಾರರ ಹಕ್ಕುಗಳನ್ನು ರಕ್ಷಿಸಲು ಬದ್ಧವಾಗಿದೆ. ಪ್ರಸ್ತುತ ಹಮ್ಮಿಕೊಳ್ಳಲಾಗಿರುವ ದೆಹಲಿಯಲ್ಲಿ ಹಮ್ಮಿ ಕೊಳ್ಳಲಾಗಿದ್ದ ಪ್ರತಿಭಟನೆ ಯಶಸ್ವಿಯಾಗಿದೆ. ಪ್ರತಿಯೊಬ್ಬ ಮತದಾರರ ಹಕ್ಕನ್ನು ರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

"ಕರ್ನಾಟಕದಲ್ಲಿ ಯಾವ ರೀತಿಯಲ್ಲಿ ಅಕ್ರಮಗಳನ್ನು ಸೃಷ್ಟಿಸಲಾಯಿತು ಎಂಬುದು ಎಲ್ಲರಿಗೂ ತಿಳಿದಿರುವ ಸಂಗತಿಯಾಗಿದೆ. ಲಕ್ಷಾಂತರ ಮತದಾರರ ಹೆಸರುಗಳನ್ನು ಉದ್ದೇಶಪೂರ್ವಕವಾಗಿ ಮತದಾರರ ಹೆಸರನ್ನು ಮತ ಪಟ್ಟಿಯಿಂದ ತೆಗೆದುಹಾಕಲಾಗಿದೆ. ಈ ಅನ್ಯಾಯದ ವಿರುದ್ಧ ನಮ್ಮ ಹೋರಾಟ ಮುಂದುವರಿಯಲಿದೆ" ಎಂದು ಸಿಎಂ ಹೇಳಿದರು.

ತುಮಕೂರಿನಲ್ಲಿ 71ನೇ ಕನ್ನಡ ರಾಜ್ಯೋತ್ಸವ ಸಂಭ್ರಮ

ನಾಡಧ್ವಜಕ್ಕೆ ಅಧಿಕೃತ ಮಾನ್ಯತೆ ನೀಡಿ: ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ ಸಚಿವ ಕೃಷ್ಣ ಬೈರೇಗೌಡ



ಸ್ವಾತಂತ್ರ್ಯ ಹೋರಾಟ, ಕನ್ನಡ ಏಕೀಕರಣ ಹಾಗೂ ಕನ್ನಡ ಸಾರಸ್ವತ ಲೋಕಕ್ಕೆ ಕಲ್ಪತರುನಾಡು ತುಮಕೂರಿನ ಕೊಡುಗೆ ಅಪಾರವಾಗಿದೆ ಎಂದರು.ಕಲ್ಪವೃಕ್ಷಗಳ ನಾಡಾಗಿರುವ ತುಮಕೂರು ರೈತರ ಬದುಕನ್ನು ಹಸನುಗೊಳಿಸುವುದರ ಜತೆಗೆ ಕನ್ನಡ ಸಾಹಿತ್ಯ ಲೋಕಕ್ಕೂ ದೊಡ್ಡ ಕೊಡುಗೆ ನೀಡಿದೆ – ಸಚಿವ ಕೃಷ್ಣಬೈರೇಗೌಡ

ತುಮಕೂರು, ನ,1: ಕನ್ನಡಿಗರ ಅಸ್ಮಿತೆಯಾಗಿರುವ ನಾಡಧ್ವಜಕ್ಕೆ ಅಧಿಕೃತ ಮಾನ್ಯತೆ ನೀಡಬೇಕು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣ ಬೈರೇಗೌಡ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು. ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದ ವತಿಯಿಂದ ಆಯೋಜಿಸಿದ್ದ 71ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರಧ್ವಜ ಹಾಗೂ ನಾಡ ಧ್ವಜಾರೋಹಣ ನೆರವೇರಿಸಿ, ಗೌರವ ರಕ್ಷೆ ಸ್ವೀಕರಿಸಿ ಅವರು ಮಾತನಾಡಿದರು. ನ್ನಡ ಭಾಷೆ ಮತ್ತು ಕರ್ನಾಟಕದ ಸಂಸ್ಕೃತಿಯ ಸಂಕೇತವಾಗಿರುವ ನಾಡಧ್ವಜಕ್ಕೆ ಅಧಿಕೃತ ಸ್ಥಾನಮಾನ ನೀಡುವುದು ರಾಜ್ಯ ಸರ್ಕಾರದ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕದ ಬಾವುಟಕ್ಕೆ ಮಾನ್ಯತೆ ನೀಡುವಂತೆ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆದರೆ, ಈವರೆಗೆ ಕೇಂದ್ರದಿಂದ ಯಾವುದೇ ಸ್ಪಂದನೆ ದೊರೆತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕನ್ನಡ ಬಾವುಟಕ್ಕೆ ಕಾನೂನುಬದ್ಧ ಮಾನ್ಯತೆ ನೀಡಿ ಅಧಿಕೃತ ಸ್ಥಾನಮಾನ ಕಲ್ಪಿಸಬೇಕು ಎಂಬುದು ರಾಜ್ಯ ಸರ್ಕಾರದ ಒತ್ತಾಯವಾಗಿದೆ. ಕೇಂದ್ರ ಸರ್ಕಾರ ನಾಡಧ್ವಜಕ್ಕೆ ಅಧಿಕೃತ ಸ್ಥಾನಮಾನ ನೀಡಿದರೆ ಅದು ನಮ್ಮ ನಾಡು, ನುಡಿ ಹಾಗೂ ಭಾಷೆಗೆ ನೀಡುವ ಗೌರವವಾಗಲಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿ ಕನ್ನಡ ಭಾಷೆ, ಬಾವುಟ ಹಾಗೂ ಕನ್ನಡಿಗರ ಆಶೋತ್ತರಗಳಿಗೆ ಗೌರವ ನೀಡಲಿದೆ ಎಂಬ ಆಶಯವಿದೆ ಎಂದರು. ಕರ್ನಾಟಕದ ಜನರ ಮೇಲೆ ಬಲವಂತವಾಗಿ ಹಿಂದಿ ಭಾಷೆ ಹೇರುವ ಪ್ರಯತ್ನ ನಡೆಯುತ್ತಿದೆ. ಒಂದು ಭಾಷೆಯನ್ನು ತುಳಿದು ಮತ್ತೊಂದು ಭಾಷೆಯನ್ನು ಹೇರುವುದರ ವಿರುದ್ಧ ನಾವೆಲ್ಲರೂ ಹೋರಾಡಬೇಕು. ಭಾರತ ಬಹುಸಂಸ್ಕೃತಿಗಳ ಒಕ್ಕೂಟವಾಗಿದ್ದು, ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಎಲ್ಲ ಭಾಷೆ ಮತ್ತು ಸಂಸ್ಕೃತಿಗಳಿಗೆ ಸಮಾನ ಅವಕಾಶ ನೀಡಿದಾಗ ಮಾತ್ರ ಭಾರತದ ಐಕ್ಯತೆಯನ್ನು ಕಾಪಾಡಲು ಸಾಧ್ಯ. ಭಾರತ ಮತ್ತಷ್ಟು ಸುಭದ್ರವಾಗಿರಬೇಕಾದರೆ ಸರ್ವಜನರ ಶಾಂತಿಯ ತೋಟವಾಗಬೇಕು ಎಂದು ಅಭಿಪ್ರಾಯಪಟ್ಟರು.ಕನ್ನಡ ಸೇವೆ ಮಾಡಲು ಹಾಗೂ ಭಾಷೆಯನ್ನು ಬೆಳೆಸಲು ನಾವೆಲ್ಲರೂ ಕನ್ನಡವನ್ನು ಸ್ಪಷ್ಟವಾಗಿ ಮಾತನಾಡಿ, ಅರ್ಥೈಸಿ ಕೊಳ್ಳಬೇಕು. ಈ ಕಾರ್ಯ ನಮ್ಮಿಂದಲೇ ಆರಂಭವಾಗಲಿ ಎಂದು ತಿಳಿಸಿದರು.

ರಾಜ್ಯ ಸರ್ಕಾರವು ನಾಡಿನ ಜನರ ಆಶೋತ್ತರಗಳಿಗೆ ಸ್ಪಂದಿಸುತ್ತಿದ್ದು, ಸಾಂಸ್ಕೃತಿಕವಾಗಿ ಹಾಗೂ ಸಾಹಿತ್ಯಿಕವಾಗಿ ಕನ್ನಡ ಭಾಷೆಯನ್ನು ಮತ್ತಷ್ಟು ಸಮೃದ್ಧಗೊಳಿಸಲು ಕ್ರಮ ಕೈಗೊಂಡಿದೆ. ನಾಡಿನ ನೆಲ–ಜಲ ಸಂರಕ್ಷಣೆ, ಜನರಿಗೆ ಸುರಕ್ಷಿತ ವಾತಾವರಣ ಕಲ್ಪಿಸುವುದು, ಗುಣಮಟ್ಟದ ಶಿಕ್ಷಣ ನೀಡುವುದು ಹಾಗೂ ಕಟ್ಟಕಡೆಯ ವ್ಯಕ್ತಿಗೂ ಸಾಮಾಜಿಕ ನ್ಯಾಯ ಒದಗಿಸುವುದು ಸರ್ಕಾರದ ಪ್ರಥಮ ಆದ್ಯತೆಯಾಗಿದೆ ಎಂದರು. ಕನ್ನಡ ನಿತ್ಯೋತ್ಸವವಾಗಿ ಮೆರೆಯಬೇಕಾದರೆ ನಾಡಿನಲ್ಲಿ ನೆಲೆಸಿರುವ ಪ್ರತಿಯೊಬ್ಬ ಪ್ರಜೆಗೂ ಕಾನೂನಿನ ರಕ್ಷಣೆ, ಸಾಮಾಜಿಕ ನ್ಯಾಯ ಹಾಗೂ ನೆಮ್ಮದಿಯ ಬದುಕು ದೊರೆಯಬೇಕು ಎಂಬುದು ಸರ್ಕಾರದ ಸಂಕಲ್ಪವಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ನಿರಂತರವಾಗಿ ಜನಪರ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಮೂಲಕ ನಾಡಿನ ಜನತೆಗೆ ರಕ್ಷೆಯಾಗಿ ನಿಂತಿದೆ ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಶಾಸಕ ಜ್ಯೋತಿಗಣೇಶ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶುಭಾ ಕಲ್ಯಾಣ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಪಾಲಿಕೆ ಆಯುಕ್ತೆ ಶುಭ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಸಿ. ಗೋಪಾಲ್, ಟೂಡಾ ಆಯುಕ್ತ ಉಮೇಶ್ಚಂದ್ರ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ, ಡಿಡಿಪಿಐ ರಘುಚಂದ್ರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.



ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರು ಸಿಎಂ ಡಿ.ಕೆ ಶಿವಕುಮಾರ್ ಅವರನ್ನು ಬೆಂಗಳೂರಿನಲ್ಲಿ ಭಾನುವಾರ ಭೇಟಿಯಾಗಿ ಮಾತುಕತೆ ನಡೆಸಿದರು.

ಛಾಯಾಗ್ರಾಹಕರಿಗೆ ರಾಜ್ಯೋತ್ಸವ ಪ್ರಶಸ್ತಿ: ಸಿಎಂಗೆ ಶಾಸಕ ದಿನೇಶ್ ಗೂಳಿಗೌಡ ಅಭಿನಂದನೆ

- ಛಾಯಾಗ್ರಾಹಕರ ಬಹುದಿನಗಳ ಬೇಡಿಕೆಗೆ ಮನ್ನಣೆ
- ದಿನೇಶ್ ಗೂಳಿಗೌಡರ ಮನವಿಗೆ ಸಿಎಂ ಸ್ಪಂದನೆ
- ಛಾಯಾಗ್ರಹಣ ಕ್ಷೇತ್ರಕ್ಕೂ ರಾಜ್ಯೋತ್ಸವ ಪ್ರಶಸ್ತಿಯಲ್ಲಿ ಪ್ರಾತಿನಿಧ್ಯ



ಬೆಂಗಳೂರು, ನ.1: ಮಾಧ್ಯಮ ಕ್ಷೇತ್ರದಲ್ಲಿ ದಣಿವರಿಯದೆ ಕರ್ತವ್ಯ ನಿರ್ವಹಿಸುವ ಛಾಯಾಗ್ರಾಹಕರ ಬಹುದಿನಗಳ ಬೇಡಿಕೆಗೆ ಸ್ಪಂದಿಸಿ, ಪ್ರಪ್ರಥಮ ಬಾರಿಗೆ ಛಾಯಾಗ್ರಾಹಕರೊಬ್ಬರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿರುವ ಮುಖ್ಯಮಂತ್ರಿ ಅವರಿಗೆ ವಿಧಾನ ಪರಿಷತ್ ಶಾಸಕ ದಿನೇಶ್ ಗೂಳಿಗೌಡ ಅಭಿನಂದನೆ ಸಲ್ಲಿಸಿದ್ದಾರೆ.

ಮಾಧ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿರುವ 60 ವರ್ಷ ಮೇಲ್ಪಟ್ಟ ಅನುಭವಿ ಹಾಗೂ ಅರ್ಹ ಹಿರಿಯ ಪತ್ರಿಕಾ ಛಾಯಾಗ್ರಾಹಕರಿಗೆ ಪ್ರತಿವರ್ಷ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಬೇಕು ಎಂದು ದಿನೇಶ್ ಗೂಳಿಗೌಡ ಅವರು ಈ ಹಿಂದೆ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದರು.

ಈ ಮನವಿಯನ್ನು ಪರಿಗಣಿಸಿದ್ದ ಮುಖ್ಯಮಂತ್ರಿಗಳು, ಹಿರಿಯ ಛಾಯಾಗ್ರಾಹಕರೊಬ್ಬರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡುವಂತೆ ಸೂಚನೆ ನೀಡಿದ್ದರು. ಅದರಂತೆ ಈ ಬಾರಿಯ ರಾಜ್ಯೋತ್ಸವ ಪ್ರಶಸ್ತಿ ಪಟ್ಟಿಯಲ್ಲಿ ಛಾಯಾಗ್ರಹಣ ಕ್ಷೇತ್ರಕ್ಕೂ ಪ್ರಾತಿನಿಧ್ಯ ಕಲ್ಪಿಸಿ, ಹಿರಿಯ ಛಾಯಾಗ್ರಾಹಕರನ್ನು ಗೌರವಿಸಲಾಗಿದೆ.

ಛಾಯಾಗ್ರಾಹಕರ ಬಹುದಿನಗಳ ಬೇಡಿಕೆಗೆ ಸ್ಪಂದಿಸಿ, ಅವರ ಸೇವೆಯನ್ನು ಗುರುತಿಸಿ ಗೌರವಿಸಿರುವ ಮುಖ್ಯಮಂತ್ರಿ ಅವರ ನಿರ್ಧಾರ ಸ್ವಾಗತಾರ್ಹವಾಗಿದೆ. ಈ ಮೂಲಕ ಮಾಧ್ಯಮ ಕ್ಷೇತ್ರದ ಅವಿಭಾಜ್ಯ ಅಂಗವಾಗಿರುವ ಛಾಯಾಗ್ರಾಹಕರ ವೃತ್ತಿಪರ ಸೇವೆಗೆ ಸೂಕ್ತ ಮನ್ನಣೆ ದೊರೆತಂತಾಗಿದೆ. ಈ ಹಿನ್ನೆಲೆಯಲ್ಲಿ ಸಮಸ್ತ ಛಾಯಾಗ್ರಾಹಕರ ಪರವಾಗಿ ಹಾಗೂ ವೈಯಕ್ತಿಕವಾಗಿ ಮುಖ್ಯಮಂತ್ರಿ ಅವರಿಗೆ ದಿನೇಶ್ ಗೂಳಿಗೌಡ ಧನ್ಯವಾದ ಅರ್ಪಿಸಿದ್ದಾರೆ.

ಕನ್ನಡ ಭಾಷೆಯನ್ನು ಶ್ರೀಮಂತಗೊಳಿಸುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯ: ಶರಣಪ್ಪ ಕೊಟಗಿ ಪ್ರತಿಪಾದನೆ



ಸತ್ತೂರಿ, ನ.1: ಧಾರವಾಡದ ಸತ್ತೂರಿನ ಶ್ರೀ ಬಸವೇಶ್ವರ್ ರೂರಲ್ ಎಜುಕೇಶನ್ ಆಂಡ್ ಡೆವಲಪ್ಮೆಂಟ್ ಟ್ರಸ್ಟ್ ನ ಅಂಗ ಸಂಸ್ಥೆಗಳಲ್ಲಿ 71ನೇ ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ಸಡಗರ, ಸಂಭ್ರಮ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಡಾ. ಶರಣಪ್ಪ ಎಂ ಕೊಟಗಿ ಅವರು ಮಾತನಾಡಿ, ಕನ್ನಡ ಭಾಷೆ ನಮ್ಮ ನಾಡಿನ ಸಂಸ್ಕೃತಿ, ಪರಂಪರೆ, ಇತಿಹಾಸ ಹಾಗೂ ಸ್ವಾಭಿಮಾನದ ಪ್ರತೀಕವಾಗಿದೆ. ಕನ್ನಡ ಭಾಷೆಯನ್ನು ಕೇವಲ ಮಾತನಾಡುವುದಕ್ಕೆ ಸೀಮಿತಗೊಳಿಸದೆ, ದೈನಂದಿನ ಜೀವನದಲ್ಲಿ ಬಳಸುವುದರ ಜೊತೆಗೆ ಮುಂದಿನ ಪೀಳಿಗೆಗೆ ಕನ್ನಡದ ಶ್ರೀಮಂತ ಸಾಹಿತ್ಯ, ಸಂಸ್ಕೃತಿ ಮತ್ತು ಪರಂಪರೆಯನ್ನು ಪರಿಚಯಿಸುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯವಾಗಿದೆ ಎಂದು ತಿಳಿಸಿದರು. ಕನ್ನಡ ನಾಡಿನ ಏಕೀಕರಣಕ್ಕಾಗಿ ಶ್ರಮಿಸಿದ ಮಹನೀಯರ ತ್ಯಾಗ, ಹೋರಾಟ ಮತ್ತು ಕೊಡುಗೆಗಳನ್ನು ಸ್ಮರಿಸಲಾಯಿತು. ಕನ್ನಡಭಾಷೆಯ ಬೆಳವಣಿಗೆಗೆ ಶಿಕ್ಷಣ ಸಂಸ್ಥೆಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ಪಾತ್ರಮಹತ್ವಾದ್ದಾಗಿದೆ

ಪ್ರತಿಯೊಬ್ಬರೂ ಕನ್ನಡದಲ್ಲಿಯೇ ವ್ಯವಹರಿಸುವ ಮೂಲಕ ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಬಿ.ಇಡಿ, ಎಂ.ಇಡಿ ಕಾಲೇಜಿನ ಪ್ರಾಚಾರ್ಯ ಡಾ ಮಹಾಂತೇಶ್ ಹಿರೇಮಠ ಪ್ರಾಸ್ತಾವಿಕ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಟ್ರಸ್ಟಿ ನಾಗರಾಜ ಕೊಟಗಿ, ಬಿಎಚ್‌ಎಂಎಸ್ ಕಾಲೇಜಿನ ಪ್ರಾಚಾರ್ಯ ಡಾ. ಸೋಹನ್ ಮನಗುತ್ತಿ ಫಾರ್ಮಸಿ ಕಾಲೇಜಿನ ಪ್ರಾಚಾರ್ಯ ಡಾ. ನವೀನ ಕರೇರ್, ಬಿಸಿಎ ಕಾಲೇಜಿನ ಪ್ರಾಚಾರ್ಯ ಅಪೂರ್ವ ದೇಸಾಯಿ, ಡಿಗ್ರಿ ಕಾಲೇಜಿನ ಸಂಯೋಜಕ ಪ್ರವೀಣ್ ಪೂಜಾರ, ಪಿಯುಸಿ ಕಾಲೇಜಿನ ಸಂಯೋಜಕ ಉಮೇಶ್ ಜಾವೋರ್, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಉಮೇಶ್ ಜಾವುರು ನಿರೂಪಿಸಿ ಸ್ವಾಗತಿಸಿದರು. ಪ್ರವೀಣ ಪೂಜಾರ್ ವಂದಿಸಿದರು. ವಿದ್ಯಾರ್ಥಿಗಳು ಪ್ರಾರ್ಥನೆ ಗೀತೆ ಹಾಡಿದರು.

ಮಂಗಳೂರಿನಲ್ಲಿ ವಿಜೃಂಭಣೆಯ ಕನ್ನಡ ರಾಜ್ಯೋತ್ಸವ

ಪ್ರತಿವರ್ಷ ಸೆ.18 ಅಧಿಕೃತ 'ತುಳು ದಿನಾಚರಣೆ': ಸಚಿವ ಖಾದರ್ ಘೋಷಣೆ

ಮಂಗಳೂರು, ನ.1: "ಕರಾವಳಿಯ ಕಡಲನಗರಿ ಮಂಗಳೂರಿನಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ತುಳುಭಾಷೆಯನ್ನು ರಾಜ್ಯದ ಹೆಚ್ಚುವರಿ ಆಡಳಿತ ಭಾಷೆಯನ್ನಾಗಿ ಅಂಗೀಕರಿಸಿ ಮಹತ್ವದ ನಿರ್ಧಾರ ಕೈಗೊಂಡಿರುವ ಸೆಪ್ಟೆಂಬರ್ 18 ದಿನಾಂಕವನ್ನೇ ಇನ್ನು ಮುಂದೆ ಪ್ರತಿ ವರ್ಷ 'ತುಳು ದಿನ' (ತುಳು ದಿವಸ) ಎಂದು ಅಧಿಕೃತವಾಗಿ ಆಚರಿಸಲು ಸರ್ಕಾರ ತೀರ್ಮಾನಿಸಿದೆ" ಎಂದು ಆರೋಗ್ಯ, ಕುಟುಂಬ ಕಲ್ಯಾಣ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ. ಖಾದರ್ ಘೋಷಿಸಿದರು.ನಗರದ ನೆಹರು ಮೈದಾನದಲ್ಲಿ ಭಾನುವಾರ ಜರುಗಿದ ಜಿಲ್ಲಾಮಟ್ಟದ 71ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಆಕರ್ಷಕ ಪಥಸಂಚಲನದ ಗೌರವ ವಂದನೆ ಸ್ವೀಕರಿಸಿ ಅವರು ರಾಜ್ಯೋತ್ಸವ ಸಂದೇಶ ನೀಡಿದರು.

"ಕನ್ನಡ ತಾಯಿಯಾದರೆ, ತುಳು ಮಗಳು": "ಕರಾವಳಿಯ ಜನರ ಬಹುಕಾಲದ ಬೇಡಿಕೆಯಾಗಿದ್ದ ತುಳು ಭಾಷೆಯನ್ನು ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳ ಹೆಚ್ಚುವರಿ ಅಧಿಕೃತ ಆಡಳಿತ ಭಾಷೆಯನ್ನಾಗಿ ಮಾನ್ಯತೆ ನೀಡಿ ಮಂಗಳೂರಿನಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ. ಕನ್ನಡ ನಮಗೆ ತಾಯಿಯಾದರೆ ತುಳು ಮಗಳಿದ್ದಂತೆ. "ಕನ್ನಡವೆಂದರೆ ನಮ್ಮ ಅಸ್ಮಿತೆ, ಮಣ್ಣಿನ ಕಂಪು ಮಾತ್ರವಲ್ಲ, ನಮ್ಮ ಬದುಕಿನ ಪ್ರತಿ ಹೆಜ್ಜೆಯಲ್ಲೂ ಬೆಸೆದುಕೊಂಡಿರುವ ಆತ್ಮೀಯತೆಯ ನಂಟು ಎಂದರು.

ದಕ್ಷಿಣ ಕನ್ನಡ ಜಿಲ್ಲೆಯ ಅಭಿವೃದ್ಧಿಗೆ 32,611 ಕೋಟಿ ಯೋಜನೆಗಳು:

"ಮಂಗಳೂರು ಸಂಪುಟ ಸಭೆಯಲ್ಲಿ ಕರಾವಳಿ ಮತ್ತು ಗ್ರಾಮೀಣ ಭಾಗಗಳ ಸಮಗ್ರ ಅಭಿವೃದ್ಧಿಗಾಗಿ ಒಟ್ಟು 32,611 ಕೋಟಿ ವೆಚ್ಚದ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಪುತ್ತೂರು ತಾಲೂಕಿನ ಬನ್ನೂರು ಗ್ರಾಮದ ಸೇಡಿಯಾಪು ಬಳಿ 549.79 ಕೋಟಿ ವೆಚ್ಚದಲ್ಲಿ ನೂತನ ಸರ್ಕಾರಿ ವೈದ್ಯಕೀಯ ಕಾಲೇಜು, ಬೋಧನಾ ಆಸ್ಪತ್ರೆ ಹಾಗೂ ಹಾಸ್ಟೆಲ್ ನಿರ್ಮಾಣಕ್ಕೆ ಅನುಮೋದನೆ ದೊರೆತಿದೆ. ಮಹಾನಗರ ಪಾಲಿಕೆ ವ್ಯಾಪ್ತಿಯ ರಸ್ತೆಗಳ ಕಾಂಕ್ರೀಟೀಕರಣ ಹಾಗೂ ಸಮಗ್ರ ಮೂಲಸೌಕರ್ಯ ಅಭಿವೃದ್ಧಿಗೆ 400 ಕೋಟಿ ವಿಶೇಷ ಅನುದಾನ ನೀಡಲಾಗಿದೆ" ಎಂದರು."ವೆನ್ಲಾಕ್ ಜಿಲ್ಲಾ ಆಸ್ಪತ್ರೆಯಲ್ಲಿ ಮೊದಲ ಹಂತದಲ್ಲಿ 200 ಹಾಸಿಗೆ ಹೆಚ್ಚಳ ಮಾಡಲಾಗಿದ್ದು, ಇಲ್ಲಿನ ಕ್ಯಾಥ್‌ಲ್ಯಾಬ್‌ನಲ್ಲಿ



1,000ಕ್ಕೂ ಹೆಚ್ಚು ಯಶಸ್ವಿ ಹೃದಯ ಚಿಕಿತ್ಸೆಗಳು ನಡೆದಿವೆ. ಮಂಗಳಾ ಕ್ರೀಡಾಂಗಣವನ್ನು 20 ಕೋಟಿ ವೆಚ್ಚದಲ್ಲಿ ಅಂತಾರಾಷ್ಟ್ರೀಯ ದರ್ಜೆಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು. ಉಳ್ಳಾಲ ಕೋಟೆಪುರದಿಂದ ಬೋಳಾರದವರೆಗೆ ನೇತ್ರಾವತಿ ನದಿಗೆ 200 ಕೋಟಿ ವೆಚ್ಚದ ಸೇತುವೆ, ಮರವೂರು ಸೇತುವೆ (40 ಕೋಟಿ), ಕಟೀಲು ಸೇತುವೆ (33 ಕೋಟಿ) ಹಾಗೂ ಬೆಂಗ್ರೆ ಮತ್ತು ಕೋಟೆಪುರದಲ್ಲಿ ಸಾಂಪ್ರದಾಯಿಕ ಮೀನುಗಾರರ ದೋಣಿಗಳಿಗೆ ಬರ್ತಿಂಗ್ ಜೆಟ್ಟಿ ನಿರ್ಮಾಣಕ್ಕೆ ಕ್ರಮ ವಹಿಸಲಾಗಿದೆ" ಎಂದು ತಿಳಿಸಿದರು."ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 3.82 ಲಕ್ಷ ಮಹಿಳೆಯರಿಗೆ 2,001 ಕೋಟಿ, ಗೃಹಜ್ಯೋತಿಯಡಿ 5.52 ಲಕ್ಷ ಮನೆಗಳಿಗೆ 1,238 ಕೋಟಿ ಸಬ್ಸಿಡಿ, ಶಕ್ತಿ ಯೋಜನೆಯಡಿ 14 ಕೋಟಿ ಮಹಿಳಾ ಪ್ರಯಾಣಿಕರಿಗೆ 511 ಕೋಟಿ ಮೌಲ್ಯದ ಉಚಿತ ಪ್ರಯಾಣ ಹಾಗೂ ಯುವನಿಧಿ ಯೋಜನೆಯಡಿ 7,542 ಯುವಕರಿಗೆ 21 ಕೋಟಿ ಆರ್ಥಿಕ ನೆರವು ಒದಗಿಸಲಾಗಿದೆ" ಎಂದು ವಿವರಿಸಿದರು.

ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಸನ್ಮಾನಿತರ ವಿವರ:

ವಿವಿಧ ಕ್ಷೇತ್ರಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿ ಸಮಾಜದ ಏಳಿಗೆಗೆ ಕೊಡುಗೆ ನೀಡಿದ 119 ಮಂದಿ ಸಾಧಕರಿಗೆ ಹಾಗೂ 54 ಸಂಘ–ಸಂಸ್ಥೆಗಳಿಗೆ 2026ನೇ ಸಾಲಿನ 'ದಕ್ಷಿಣ ಕನ್ನಡ ಜಿಲ್ಲಾ ಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ' ನೀಡಿ ಸನ್ಮಾನಿಸಲಾಯಿತು. ಸಮಾರಂಭದಲ್ಲಿ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ಶಾಸಕರಾದ ಡಿ. ವೇದವ್ಯಾಸ ಕಾಮತ್, ಜಿಲ್ಲಾಧಿಕಾರಿ ದರ್ಶನ್ ಎಚ್.ವಿ., ಮಂಗಳೂರು ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಅರುಣ್ ಕೆ., ಜಿ.ಪಂ ಸಿಇಒ ನರ್ವಡೆ ವಿನಾಯಕ್ ಕಾರ್ಭಾರಿ, ಮಹಾನಗರ ಪಾಲಿಕೆ ಆಯುಕ್ತ ರಾಹುಲ್ ರತ್ನಂ ಪಾಂಡೆ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಬಾಗಲಕೋಟೆ: 71ನೇ ಕನ್ನಡ ರಾಜ್ಯೋತ್ಸವ ಅದ್ದೂರಿ ಆಚರಣೆ



ಬಾಗಲಕೋಟೆ, ನ.1: ನಗರದ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ 71ನೇ ಕನ್ನಡ ರಾಜ್ಯೋತ್ಸವ ಸಮಾರಂಭ ಅದ್ದೂರಿಯಾಗಿ ನಡೆಯಿತು.

ಜಿಲ್ಲಾ ಉಸ್ತುವಾರಿ ಹಾಗೂ ಸಣ್ಣ ಕೈಗಾರಿಕಾ ಸಚಿವ ವಿಜಯಾನಂದ ಕಾಶಪ್ಪನವರ್ ಧ್ವಜಾರೋಹಣ ನೆರವೇರಿಸಿ, ಕನ್ನಡಾಂಬೆಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ರಾಜ್ಯದಲ್ಲಿ ಪ್ರಜಾ ಆಂದೋಲನ ಸೇವೆಗೆ ಚಾಲನೆ ನೀಡುವ ಮೂಲಕ ಜನರ ಸಮಸ್ಯೆಗಳಿಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ವಿವಿಧ ಕ್ಷೇತ್ರಗಳಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಆಕರ್ಷಕ ಪಥಸಂಚಲನ ನಡೆಯಿತು. ಶಾಲಾ ಮಕ್ಕಳಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು. ಬಳಿಕ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಸಂಸದ ಪಿ.ಸಿ. ಗದ್ದಿಗೌಡರ್, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಶಾಸಕ ಉಮೇಶ ಮೇಟಿ, ಜಿಲ್ಲಾಧಿಕಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

ಬೆಂಗಳೂರು–ಮುಂಬೈ ವಂದೇಭಾರತ್ ಸ್ಲೀಪರ್ ಎಕ್ಸ್‌ಪ್ರೆಸ್ ರೈಲಿಗೆ ಚಾಲನೆ

ಬೆಂಗಳೂರು,ನ.1: 'ದೇಶದಲ್ಲಿ ರೈಲ್ವೆ ಕ್ರಾಂತಿಯಾಗುತ್ತಿದ್ದು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಬಾಂಬ್, ಗುಂಡುಗಳ ಸದ್ದಡಗಿಸಿ ಬುಲೆಟ್ ರೈಲುಗಳ ಯುಗಕ್ಕೆ ನಾಂದಿ ಹಾಡಿದೆ" ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಪ್ರತಿಪಾದಿಸಿದರು. ಬೆಂಗಳೂರಿನ ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ ನಿಲ್ದಾಣದಲ್ಲಿ ಭಾನುವಾರ, ಬೆಂಗಳೂರು–ಮುಂಬೈ ವಂದೇಭಾರತ್ ಸ್ಲೀಪರ್ ಹೊಸ ಎಕ್ಸ್‌ಪ್ರೆಸ್ ರೈಲಿಗೆ ಚಾಲನೆ ನೀಡಿದ ವೇಳೆ ಮಾತನಾಡಿದರು. ರೈಲು ಪ್ರಯಾಣದ ಸುರಕ್ಷತೆಗಾಗಿ 'ಕವಚ್' ಸ್ವಯಂಚಾಲಿತ ರೈಲು ರಕ್ಷಣಾ ತಂತ್ರಜ್ಞಾನ ಅಳವಡಿಸಲಾಗುತ್ತಿದೆ. ರೈಲು ಅಪಘಾತ ತಡೆಯುವ ನಿಟ್ಟಿನಲ್ಲಿ ಈ ತಂತ್ರಜ್ಞಾನ ಮಹತ್ವದ ಪಾತ್ರ ವಹಿಸಲಿದೆ ಎಂದು ಹೇಳಿದರು. ದೇಶಾದ್ಯಂತ ವಂದೇ ಭಾರತ್ ರೈಲುಗಳ ಸೇವೆ ವಿಸ್ತರಣೆಯಾಗಿದ್ದು, ಈಗಾಗಲೇ 150ಕ್ಕೂ ಹೆಚ್ಚು ರೈಲುಗಳು ಸಂಚರಿಸುತ್ತಿವೆ. ರೈಲ್ವೆ ಸಾರಿಗೆಯಲ್ಲಿ ವೇಗ, ಸುರಕ್ಷತೆ ಮತ್ತು ಆಧುನಿಕ ಸೌಲಭ್ಯಗಳಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದರು.



ಭಾರತದ ಎರಡು ಪ್ರಮುಖ ಆರ್ಥಿಕ ಕೇಂದ್ರಗಳಾದ ಬೆಂಗಳೂರು ಮತ್ತು ಮುಂಬೈ ನಗರಗಳ ಸಂಪರ್ಕಕ್ಕೆ 'ವಂದೇಭಾರತ್ ಸ್ಲೀಪರ್ ರೈಲು' ಮಹತ್ವದ ಸೇರ್ಪಡೆಯಾಗಲಿದೆ. ದಕ್ಷಿಣ ಭಾರತದ ಮೊದಲ ವಂದೇಭಾರತ್ ಸ್ಲೀಪರ್ ರೈಲು 1,118 ಕಿ.ಮೀ. ದೂರವನ್ನು ಕೇವಲ 16 ಗಂಟೆಗಳಲ್ಲಿ ಕ್ರಮಿಸಲಿದೆ. ಅರ್ಧದಷ್ಟು ಸಮಯ ಉಳಿಯುತ್ತದೆ ಎಂದು ಹೇಳಿದರು.

ಕರ್ನಾಟಕಕ್ಕೆ ಹೈಸ್ಪೀಡ್ ಕಾರಿಡಾರ್

ರಾಜ್ಯದಲ್ಲಿ ಹೈಸ್ಪೀಡ್ ರೈಲು ಕಾರಿಡಾರ್ಗಳ ಅಭಿವೃದ್ಧಿಗೂ ಕೇಂದ್ರ ಸರ್ಕಾರ ಯೋಜನೆ ರೂಪಿಸಿದ್ದು, ತುಮಕೂರು, ಹಾವೇರಿ, ರಾಣೆಬೆನ್ನೂರು, ಬೆಳಗಾವಿ ಸೇರಿದಂತೆ ಹಲವು ಪ್ರದೇಶಗಳಿಗೆ ಸಂಪರ್ಕ ಕಲ್ಪಿಸುವ ಪ್ರಸ್ತಾವನೆಗಳಿವೆ ಎಂದು ತಿಳಿಸಿದರು.

ರಾಜ್ಯದ ರೈಲ್ವೆ ವಲಯಕ್ಕೆ ಹೆಚ್ಚಿನ ಆದ್ಯತೆ:

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಕರ್ನಾಟಕದ ರೈಲ್ವೆ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದೆ. 2008ರಲ್ಲಿ ರಾಜ್ಯಕ್ಕೆ ಸುಮಾರು 700 ಕೋಟಿ ರೈಲ್ವೆ ಅನುದಾನ ನೀಡಲಾಗುತ್ತಿತ್ತು. ಆದರೆ ಈಗ ವಾರ್ಷಿಕವಾಗಿ 7,000ರಿಂದ 8,000 ಕೋಟಿ ವರೆಗೆ ಅನುದಾನ ನೀಡಲಾಗುತ್ತಿದೆ ಎಂದು ಹೇಳಿದರು.

ರಾಜ್ಯಕ್ಕೆ 7748 ಕೋಟಿ ಹಂಚಿಕೆ

ಕೇಂದ್ರ ಸರ್ಕಾರ 2026–27ರಲ್ಲಿ ರಾಜ್ಯಕ್ಕೆ 7,748 ಕೋಟಿ ಹಂಚಿಕೆ ಮಾಡಿದೆ. ರಾಜ್ಯದ ರೈಲ್ವೆ ಸಂಪರ್ಕ ಅಭಿವೃದ್ಧಿಗೆ ನಿರಂತರವಾಗಿ ಸಹಕಾರ ನೀಡುತ್ತಿದೆ. ಇದಕ್ಕಾಗಿ ಪ್ರಧಾನಿ ಮೋದಿ ಅವರಿಗೆ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ರಾಜ್ಯ ಸಚಿವ ವಿ.ಸೋಮಣ್ಣಗೆ ಸಮಸ್ತ ಕನ್ನಡಿಗರ ಪರವಾಗಿ ಹೃತ್ಪೂರ್ವಕ ಧನ್ಯವಾದಗಳು ಅರ್ಪಿಸುತ್ತೇನೆ ಎಂದರು.

ಇದೇ ವೇಳೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರ ಕಾರ್ಯವೈಖರಿಯನ್ನು ಶ್ಲಾಘಿಸಿದರು. ಇವರು ತಾಂತ್ರಿಕ ಹಿನ್ನೆಲೆ ಮತ್ತು ಆಡಳಿತಾತ್ಮಕ ಅನುಭವ ಹೊಂದಿದ್ದು, ರೈಲ್ವೆ ಕ್ಷೇತ್ರದಲ್ಲಿ ಅನನ್ಯ ಅನನ್ಯ ಸುಧಾರಣೆಗಳನ್ನು ಜಾರಿಗೆ ತರುತ್ತಿದ್ದಾರೆ ಎಂದು ಹೇಳಿದರು.

170 ಗೀಗಾವ್ಯಾಟ್ ಮೀರಿದ ಸೌರ ಶಕ್ತಿ:

ದೇಶದ ಸೌರಶಕ್ತಿ ಉತ್ಪಾದನೆ ಬಗ್ಗೆ ವಿವರಿಸುತ್ತಾ, ಭಾರತ ಸೌರಶಕ್ತಿ ಉತ್ಪಾದನೆಯಲ್ಲಿ ಸಹ ಅದ್ಭುತ ಪ್ರಗತಿ ಹೊಂದಿದೆ. ಹಿಂದೆ ಕೇವಲ 2.6 ಗೀಗಾವ್ಯಾಟ್ ಇದ್ದ ಸೌರ ಸಾಮರ್ಥ್ಯವೀಗ ಸುಮಾರು 170ರತಿ ಮೀರಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ, ಸಂಸದರಾದ ಪಿ.ಸಿ.ಮೋಹನ್, ಡಾ.ಸಿ.ಎನ್. ಮಂಜುನಾಥ್, ತೇಜಸ್ವಿ ಸೂರ್ಯ, ಲೆಹರ್ ಸಿಂಗ್, ಜಗ್ಗೇಶ್, ಮಾಜಿ ಸಂಸದ ಉಮೇಶ ಜಾಧವ್ ಸೇರಿದಂತೆ ಗಣ್ಯರು ಹಾಗೂ ಅಧಿಕಾರಿಗಳು ಹಾಜರಿದ್ದರು.



ನವದೆಹಲಿಯ ರಾಮಲೀಲಾ ಮೈದಾನದಲ್ಲಿ ಭಾನುವಾರ ನಡೆದ ಕಾಂಗ್ರೆಸ್ ರ್ಯಾಲಿಯ ವೇಳೆ, ನವದೆಹಲಿಯಲ್ಲಿರುವ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಅವರು ಇತರ ಕಾಂಗ್ರೆಸ್ ಕಾರ್ಯಕರ್ತರು ಮತ್ತು ಪದಾಧಿಕಾರಿಗಳೊಂದಿಗೆ ಕಂಡುಬಂದರು.

ರಾಜ್ಯೋತ್ಸವದಂದು ಕನ್ನಡ ನಾಡಿಗೆ ಬೆಂಗಳೂರು–ಮುಂಬೈ ವಂದೇಭಾರತ್ ಸ್ಲೀಪರ್ ರೈಲಿನ ಕೊಡುಗೆ

ಬೆಂಗಳೂರು,ನ.1: ಭಾರತೀಯ ರೈಲ್ವೆಯು ಕರ್ನಾಟಕದಲ್ಲಿ ಆಧುನಿಕ ರೈಲು ಸೇವೆಗಳನ್ನು ನಿರಂತರವಾಗಿ ವಿಸ್ತರಿಸುತ್ತಿದ್ದು, 2026–27ನೇ ಸಾಲಿನಲ್ಲಿ ರಾಜ್ಯಕ್ಕೆ ದಾಖಲೆ ಪ್ರಮಾಣದ 7,748 ಕೋಟಿ ರೈಲ್ವೆ ಬಜೆಟ್ ಅನುದಾನ ಮೀಸಲಿಡಲಾಗಿದೆ. ಈ ಮಹತ್ವಾಕಾಂಕ್ಷಿ ಯೋಜನೆಗಳ ಭಾಗವಾಗಿ, ದೇಶದ ಹೈಟೆಕ್ ನಗರ ಬೆಂಗಳೂರು ಮತ್ತು ವಾಣಿಜ್ಯ ನಗರಿ ಮುಂಬೈ ನಡುವಿನ ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ಬೆಂಗಳೂರು–ಮುಂಬೈ ವಂದೇಭಾರತ್ ಸ್ಲೀಪರ್ ರೈಲು ಸೇವೆಗೆ ಇಂದು, ನ.1 ರಂದು ಚಾಲನೆ ನೀಡಲಾಯಿತು.

ಕರ್ನಾಟಕ ರಾಜ್ಯೋತ್ಸವದ ಶುಭ ಸಂದರ್ಭದಲ್ಲಿ, ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ. ಸಿ. ಎನ್. ಮಂಜುನಾಥ್ ಅವರು ಹಲವು ಕೇಂದ್ರ ಸಚಿವರು, ಸಂಸದರು, ಗಣ್ಯರು ಹಾಗೂ ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸೇರಿ ಬೆಂಗಳೂರು–ಮುಂಬೈ ವಂದೇಭಾರತ್ ಸ್ಲೀಪರ್ ರೈಲಿಗೆ ಹಸಿರು ನಿಶಾನೆ ತೋರಿಸಿ ಶುಭಾರಂಭ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಸಿ. ಎನ್. ಮಂಜುನಾಥ್ ಅವರು, ಕರ್ನಾಟಕ ರಾಜ್ಯೋತ್ಸವದ ಶುಭ ದಿನದಂದು ಕರ್ನಾಟಕದ ಜನತೆಗೆ ಈ ಅತ್ಯಾಧುನಿಕ ರೈಲು ಸೇವೆಯನ್ನು ಕೊಡುಗೆಯಾಗಿ ನೀಡಿರುವುದು ಅತ್ಯಂತ ಸಂತಸದ ಮತ್ತು ಹೆಮ್ಮೆಯ ಸಂಗತಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶದ ರೈಲ್ವೆ ವ್ಯವಸ್ಥೆಯು ಹೊಸ ಯುಗದತ್ತ ಸಾಗುತ್ತಿದೆ. ಕರ್ನಾಟಕಕ್ಕೆ ದಾಖಲೆ ಪ್ರಮಾಣದ ಅನುದಾನ ನೀಡುವುದರೊಂದಿಗೆ, ಬೆಂಗಳೂರು–ಮುಂಬೈ ನಡುವಿನ ಸಂಪರ್ಕವನ್ನು ಮತ್ತಷ್ಟು ಸುಲಭ, ವೇಗ ಮತ್ತು ಆರಾಮದಾಯಕವಾಗಿಸುವ ವಂದೇಭಾರತ್



ಸ್ಲೀಪರ್ ರೈಲು ಸೇವೆಯನ್ನು ಕರ್ನಾಟಕ ರಾಜ್ಯೋತ್ಸವದ ದಿನದಂದು ನೀಡಿರುವುದು ಕನ್ನಡ ನಾಡಿಗೆ ದೊರೆತ ವಿಶೇಷ ಕೊಡುಗೆಯಾಗಿದೆ, ಎಂದು ಅವರು ಹೇಳಿದರು. ವಂದೇಭಾರತ್ ಸ್ಲೀಪರ್ ರೈಲು ಬೋಗಿಗಳನ್ನು ಬೆಂಗಳೂರಿನ ತನ್ನ ಸಂಕೀರ್ಣದಲ್ಲಿ ತಯಾರಿಸಿರುವ ಬಿಇಎಂಎಲ್ (ಃಇಒಐ) ಸಂಸ್ಥೆಯ ಸಾಧನೆಯನ್ನು ಇದೇ ಸಂದರ್ಭದಲ್ಲಿ ಡಾ. ಮಂಜುನಾಥ್ ಅವರು ಶ್ಲಾಘಿಸಿ, ಸಂಸ್ಥೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಅಭಿನಂದನೆ ಸಲ್ಲಿಸಿದರು. ಮೇಕ್ ಇನ್ ಇಂಡಿಯಾ ಪರಿಕಲ್ಪನೆಗೆ ಇದು ಮತ್ತೊಂದು ಹೆಮ್ಮೆಯ ಉದಾಹರಣೆಯಾಗಿದೆ ಎಂದು ಅವರು ಹೇಳಿದರು.

ಈ ರೈಲು ಬೆಂಗಳೂರು–ಅನಂತಪುರ–ಗುಂತಕಲ್–ಯಾದಗಿರಿ–ರಾಯಚೂರು–ಕಲಬುರಗಿ–ಸೊಲ್ಲಾಪುರ–ಪುಣೆ–ಕಲ್ಯಾಣ ಮಾರ್ಗವಾಗಿ ಮುಂಬೈಗೆ ಸಂಚರಿಸಲಿದೆ. ಅತ್ಯಾಧುನಿಕ ಸೌಲಭ್ಯಗಳು, ಸ್ವಯಂಚಾಲಿತ ಬಾಗಿಲುಗಳು, ಪ್ರಯಾಣಿಕರ ಸುರಕ್ಷತೆಗಾಗಿ ಕವಚ್ ಸುರಕ್ಷತಾ ವ್ಯವಸ್ಥೆ ಹಾಗೂ ಆರಾಮದಾಯಕ ಮಲಗುವ ವ್ಯವಸ್ಥೆಯನ್ನು ಹೊಂದಿರುವ ವಂದೇ ಭಾರತ್ ಸ್ಲೀಪರ್ ರೈಲು, ಬೆಂಗಳೂರು ಮತ್ತು ಮುಂಬೈ ನಡುವಿನ ಪ್ರಯಾಣವನ್ನು ಇನ್ನಷ್ಟು ಸುಗಮಗೊಳಿಸಲಿದೆ. ಈ ಸೇವೆಯಿಂದ ಲಕ್ಷಾಂತರ ಪ್ರಯಾಣಿಕರಿಗೆ ಅನುಕೂಲವಾಗಲಿದ್ದು, ಎರಡು ಮಹಾನಗರಗಳ ನಡುವಿನ ಆರ್ಥಿಕ, ವಾಣಿಜ್ಯ ಹಾಗೂ ಸಾಮಾಜಿಕ ಸಂಪರ್ಕಕ್ಕೂ ಮತ್ತಷ್ಟು ಉತ್ತೇಜನ ದೊರೆಯಲಿದೆ.

ಈ ಸಂದರ್ಭದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ, ಲೋಕಸಭಾ ಸದಸ್ಯ ಪಿ.ಸಿ. ಮೋಹನ್ ಹಾಗೂ ತೇಜಸ್ವಿ ಸೂರ್ಯ, ರಾಜ್ಯಸಭಾ ಸದಸ್ಯರಾದ ಲೆಹರ್ ಸಿಂಗ್ ಸಿರೋಯಾ ಹಾಗೂ ಜಗ್ಗೇಶ್ ಸೇರಿದಂತೆ ಹಲವು ಗಣ್ಯರು, ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಮುಖಂಡರು ಹಾಜರಿದ್ದರು.

ಮೊದಲನೇ ಪುಟದಿಂದ

ಕನ್ನಡ ಬಾವುಟಕ್ಕೆ ಅಧಿಕೃತ ನಾಡಧ್ವಜದ ಸ್ಥಾನಮಾನಕ್ಕೆ ಚಿಂತನೆ: ಸಿಎಂ ಡಿಕೆಶಿ

ಕನ್ನಡ ಕೇವಲ ಸರ್ಕಾರಿ ಭಾಷೆ ಮಾತ್ರವಲ್ಲ, ಹೃದಯದ ಭಾಷೆಯಾಗಬೇಕು:

ನಮ್ಮ ಸರ್ಕಾರಿ ಶಾಲೆಗಳ ಜತೆ ಖಾಸಗಿ ಶಾಲೆ ಮಕ್ಕಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದಕ್ಕೆ ಆ ಶಾಲೆ ಶಿಕ್ಷಕರು ಹಾಗೂ ಸಂಸ್ಥೆಯವರಿಗೆ ಅಭಿನಂದಿಸುತ್ತೇನೆ. ಕನ್ನಡ ಕೇವಲ ಸರ್ಕಾರಿ ಭಾಷೆ ಮಾತ್ರವಲ್ಲ, ಹೃದಯದ ಭಾಷೆಯಾಗಬೇಕು. ಭಾಷೆ ಎಂಬುದು ಬದುಕು. ಭಾಷೆ ಇಲ್ಲದ ಬದುಕು ಮೂಕಿಚಿತ್ರದಂತಾಗುತ್ತದೆ. ಕನ್ನಡದ ಬೇರು ಕರ್ನಾಟಕದಲ್ಲಿದ್ದರೂ ಅದರ ರೆಂಬೆ ಕೊಂಬೆ, ರುಚಿ ಇಡೀ ಪ್ರಪಂಚಕ್ಕೆ ವಿಸ್ತರಿಸಿದೆ. ಸಾವಿರಾರು ಕನ್ನಡಿಗರು ವಿಶ್ವದ ನಾನಾ ಕಡೆ ನೆಲೆಸಿ ಕನ್ನಡದ ಕಂಪನ್ನು ಹರಡುತ್ತಿದ್ದಾರೆ. ಕಲೆ ಕ್ರೀಡೆ, ವಿಜ್ಞಾನ ಐಟಿ ಬಿಟಿ ಸೇರಿದಂತೆ ಯಾವುದೇ ಕ್ಷೇತ್ರದಲ್ಲಾದರೂ ಕನ್ನಡದ ಸಾರ್ವಭೌಮತೆ ಬೆಳಎಯಬೇಕು. ಕನ್ನಡ ಎನ್ನುವುದು ಆಭರಣ ಇದ್ದಂತೆ. ಈ ಆಭರಣ ಕಳೆಯದಂತೆ ಕಾಪಾಡುವ ಹೊಣೆಗಾರಿಕೆ ನಿಮ್ಮ ಮೇಲಿದೆ ಎಂದರು. ನಮ್ಮ ಸರ್ಕಾರ ಕನ್ನಡ, ನೆಲ, ಜಲ, ಸಂಸ್ಕೃತಿ ರಕ್ಷಣೆಗೆ ಬದ್ಧವಾಗಿದೆ. ಮಕ್ಕಳ ಜಾಗತಿಕ ಸ್ಪರ್ಧೆಗೆ ಎಲ್ಲಾ ರೀತಿ ಸಿದ್ಧರಾಗಿ. ಇದಕ್ಕಾಗಿ ಕನ್ನಡದ ಬೇರು ಗಟ್ಟಿಯಾಗಬೇಕು. ಇದಕ್ಕಾಗಿ ನಮ್ಮ ಜವಾಬ್ದಾರಿ ಅರಿಯಬೇಕು. ಸರ್ಕಾರಿ ಶಾಲೆಗಳ ಮಕ್ಕಳು ನಮ್ಮ ರಾಜ್ಯಕ್ಕೆ ಹೆಮ್ಮೆತರುತ್ತಿದ್ದಾರೆ. ನಮ್ಮ ಕನ್ನಡದ ಬೇರುಗಳು ಇರುವುದು ನಮ್ಮ ಕನ್ನಡ ಸರ್ಕಾರಿ ಶಾಲೆಗಳಲ್ಲಿ. ಎಸ್ಎಸ್ಎಲ್ ಸಿ ಪಿಯುಸಿ ಪರೀಕ್ಷೆಯಲ್ಲಿ ಸರ್ಕಾರಿ ಶಾಲೆ ಮಕ್ಕಳು ಉತ್ತಮ ಫಲಿತಾಂಶ ಪಡೆಯುತ್ತಿದ್ದಾರೆ. ಇದಕ್ಕಾಗಿ ನಿಮಗೆ ಅಭಿನಂದನೆ ಸಲ್ಲಿಸುವೆ. ಕನ್ನಡದ ಅಳಿವು, ಉಳಿವು ಈ ವಿದ್ಯಾರ್ಥಿಗಳ ಕೈಯಲ್ಲಿದೆ. 6ನೇ ತರಗತಿಯಿಂದ ಎಐ ತರಬೇತಿ ನೀಡಲು ನಾವು ಮುಂದಾಗಿದ್ದೇವೆ. 12ನೇ ತರಗತಿವರೆಗೂ ಮುಂದುವರಿಸುತ್ತೇವೆ. ನಮ್ಮ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಿಎಸ್ಆರ್ ನಿಧಿ ಬಳಸಲಾಗುತ್ತಿದೆ. ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಹೊಸ ರೂಪ ನೀಡಲಾಗುತ್ತಿದೆ? ಎಂದು ವಿವರಿಸಿದರು.

ಗ್ರಾಮೀಣ ಸರ್ಕಾರಿ ಶಾಲೆ ಮಕ್ಕಳಿಗೆ ವೃತ್ತಿಪರ ಶಿಕ್ಷಣದಲ್ಲಿ ಶೇ.7ರಷ್ಟು ಮೀಸಲಾತಿ:

ಪಂಚಾಯ್ತಿ ಮಟ್ಟದ ಸರ್ಕಾರಿ ಶಾಲೆಗಳನ್ನು ನಗರ ಪ್ರದೇಶದ ಶಾಲೆಗಳಂತೆ ರೂಪಿಸಲಾಗುತ್ತಿದೆ. ಈಗಾಗಲೇ 15 ಸಾವಿರ ಶಾಲಾ ಶಿಕ್ಷಕರ ನೇಮಕಾತಿಗೆ ಆದೇಶ ನೀಡಲಾಗಿದೆ. ಕರ್ನಾಟಕ ರಾಜ್ಯದಲ್ಲಿ 25,498 ದ್ವಿಭಾಷಾ ಶಾಲೆಗಳು ಆರಂಭವಾಗಿದೆ. 250 ಸರ್ಕಾರಿ ಶಾಲೆಗಳನ್ನು ವಿಜ್ಞಾನ ಪ್ರಯೋಗಾಲಯ ಸ್ಥಾಪನೆ ಮಾಡಲಾಗಿದೆ. 6ನೇ ತರಗತಿಯಿಂದ ಕೌಶಲ್ಯ ಆಧಆರಿತ ಶಿಕ್ಷಣ ಆರಂಭಿಸಿದ್ದೇವೆ. ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಗಳಲ್ಲಿ 1–10ನೇ ತರಗತಿ, ಪಿಯು ವಿದ್ಯಾರ್ಥಿಗಳಿಗೆ ವೃತ್ತಿಪರ ಶಿಕ್ಷಣದಲ್ಲಿ ವ್ಯಾಸಂಗಕ್ಕೆ ಶೇ.7ರಷ್ಟು ಮೀಸಲಾತಿ ನೀಡಲಾಗಿದೆ. ಈ ಮೀಸಲಾತಿ ಉದ್ದೇಶ ಗ್ರಾಮೀಣ ಸರ್ಕಾರಿ ಶಾಲಾ ಮಕ್ಕಳಿಗೆ ಇಂಜಿನಿಯರ್, ವೈದ್ಯ ಶಿಕ್ಷಣದಲ್ಲಿ ಹೆಚ್ಚಿನ ಅವಕಾಶ ಸಿಗುವಂತೆ ಮಾಡುವುದಾಗಿದೆ ಎಂದು ತಿಳಿಸಿದರು.

ನಗರದ ಮಕ್ಕಳಿಗೆ ಗ್ರಾಮಾನುಭವ ಕಾರ್ಯಕ್ರಮ:

ನಗರದ ವಿದ್ಯಾರ್ಥಿಗಳಿಗೆ ಹಳ್ಳಿಗಳ ಬದುಕಿನ ಪರಿಚಯಕ್ಕೆ ಗ್ರಾಮಾನುಭವ ಎಂಬ ಕಾರ್ಯಕ್ರಮ ರೂಪಿಸಲಾಗಿದೆ. ಬೆಂಗಳೂರು ಹಾಗೂ 10 ಮಹಾನಗರ ಪಾಲಿಕೆ ವ್ಯಾಪ್ತಿಯ ಶಾಲಾ ಮಕ್ಕಳಿಗೆ 2–3 ದಿನಗಳ ಗ್ರಾಮವಾಸ್ತವ್ಯ ಪರಿಚಯಿಸಿ ಗ್ರಾಮದ ಬದುಕು ಏನು ಎಂದು ತಿಳಿಸುವುದಾಗಿದೆ. ಗ್ರಾಮಾನುಭವ ಯೋಜನೆ ಮೂಲಕ ವಿದ್ಯಾರ್ಥಿಗಳನ್ನು ಕೊಠಡಿಯಿಂದಾಚೆ ತಂದು ಹಳ್ಳಿಗಳಲ್ಲಿ ಕೃಷಿ, ತೋಟಗಾರಿಕೆ, ಗ್ರಾಮೀಣ ಸಂಸ್ಕೃತಿ ಪರಿಚಯಿಸುವ ಉದ್ದೇಶವಿದೆ ಎಂದರು.

ನಮ್ಮ ಮಕ್ಕಳು ಏಷ್ಯನ್ ಗೇಮ್ಸ್ ನಲ್ಲಿ 8 ಪದಕ ಗೆದ್ದಿದ್ದಾರೆ. ನಮ್ಮ ಸರ್ಕಾರ ಚಿನ್ನದ ಪದಕ ವಿಜೇತರಿಗೆ 1 ಕೋಟಿ, ಬೆಳ್ಳಿ ಗೆದ್ದವರಿಗೆ 75 ಲಕ್ಷ, ಕಂಚು ಗೆದ್ದವರಿಗೆ 50 ಲಕ್ಷ ನಗದು ಬಹುಮಾನ ನೀಡಿ ಪ್ರೋತ್ಸಾಹ ನೀಡಿದೆ. ಏಷ್ಯನ್ ಗೇಮ್ಸ್ ನಲ್ಲಿ ಭಾಗವಹಿಸಿದ 20 ಕ್ರೀಡಾಪಟುಗಳಿಗೆ ತಲಾ 5 ಲಕ್ಷ ನೀಡಲಾಗಿದೆ. ಪ್ಯಾರಾಲಿಂಪಿಕ್ಸ್ ಗೆ ತಯಾರಾಗುತ್ತಿರುವ ಕ್ರೀಡಾಪಟುಗಳ ಸಿದ್ಧತೆಗೆ ತಲಾ 10 ಲಕ್ಷ ನೀಡಲಾಗುತ್ತಿದೆ. ಕ್ರೀಡಾಪಟುಗಳಿಗೆ ಸರ್ಕಾರಿ ಕೆಲಸಗಳಲ್ಲಿ ಶೇ.2ರಷ್ಟು, ಅರಣ್ಯ ಹಾಗೂ ಪೊಲೀಸ್ ಇಲಾಖೆಗಳಲ್ಲಿ ಶೇ.3ರಷ್ಟು ಮೀಸಲಾತಿ ನೀಡಿದ್ದೇವೆ. ಒಲಿಂಪಿಕ್ಸ್ ನಿಮ್ಮ ಗುರಿಯಾಗಿ ತಯಾರಾಗಬೇಕು. ಓದಿನ ಜತೆಗೆ ಕ್ರೀಡಾ, ಕಲೆ, ಸಾಹಿತ್ಯದ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕು. ನಿಮ್ಮ ಹಿಂದೆ ನಾವಿದ್ದೇವೆ. ನೀವು ಧೈರ್ಯವಾಗಿ ಹೊಸ ನಕ್ಷೆ ತಯಾರಿಸಿ ಸಿದ್ಧರಾಗಿ ಎಂದು ಕರೆ ನೀಡಿದರು.

ಭಾರತ ಜೋಡೋ ಯುವ ಸಂಘಗಳ ಮೂಲಕ ಯುವಕರ ಪ್ರತಿಭೆಗಳಿಗೆ ಪ್ರೋತ್ಸಾಹ:

ಕರ್ನಾಟಕವನ್ನು ನಶೆಮುಕ್ತ ರಾಜ್ಯವನ್ನಾಗಿ ಮಾಡಬೇಕು. ಕರ್ನಾಟಕ ಪ್ರಾದೇಶಿಕ ಯೋಜನೆ ರೂಪಿಸಿ 2047ರ ವೇಳೆಗೆ ರಾಜ್ಯಕ್ಕೆ ಹೊಸ ರೂಪ ನೀಡಲು ಹೆಜ್ಜೆ ಹಾಕುತ್ತಿದ್ದೇವೆ. ಇದರಿಂದ ಮುಂದಿನ 20 ವರ್ಷಗಳಲ್ಲಿ 5 ಲಕ್ಷ ಕೋಟಿ ಹೂಡಿಕೆಗೆ ಕಾರ್ಯಕ್ರಮ ರೂಪಿಸಲಾಗಿದೆ. ನಮ್ಮ ಸರ್ಕಾರ ಭಾರತ ಜೋಡೋ ಯುವಕರ ಸಂಘ ಸ್ಥಾಪಿಸುತ್ತಿದೆ. ಪಂಚಾಯಿತಿ ಹಾಗೂ ವಾರ್ಡ್ ಮಟ್ಟದಲ್ಲಿ ಕ್ರೀಡೆ, ಕಲೆ, ಸಂಸ್ಕೃತಿ ವಿಚಾರವಾಗಿ ಯುವಕರ ಪ್ರತಿಭೆಗೆ ಪ್ರೋತ್ಸಾಹ ನೀಡಿ ಅವರಲ್ಲಿ ನಾಯಕತ್ವದ ಗುಣ ಬೆಳೆಸಲು ಸರ್ಕಾರ ಮುಂದಾಗಿದೆ. ಇದಕ್ಕಾಗಿ ರಾಜ್ಯದಲ್ಲಿ 10 ಸಾವಿರ ಭಾರತ ಜೋಡೋ ಸಂಘಗಳನ್ನು ಸ್ಥಾಪಿಸಿ 16–35 ವರ್ಷದೊಳಗಿನ ಯುವಕರನ್ನು ಸದಸ್ಯರನ್ನಾಗಿ ಮಾಡಲಾಗುವುದು. ಈ ಸಂಘಗಳಿಗೆ ವಾರ್ಷಿಕ 10 ಲಕ್ಷ ಅನುದಾನ ನೀಡಲಾಗುವುದು ಎಂದು ವಿವರಿಸಿದರು.

ಈಗಾಗಲೇ 72 ಸಾವಿರ ಸರ್ಕಾರಿ ಹುದ್ದೆಗಳ ಭರ್ತಿಗೆ ಆದೇಶ ಮಾಡಲಾಗಿದ್ದು, 66 ಸಾವಿರ ಉದ್ಯೋಗಗಳನ್ನು ಸೃಷ್ಟಿ ಮಾಡಲಾಗಿದೆ. ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಯುವನಿಧಿ ಯೋಜನೆ ಜತೆಗೆ ಖಾಸಗಿ ಉದ್ಯೋಗ ವಿನಿಮಯಕ್ಕಾಗಿ ಉದ್ಯೋಗ ಸೇತು ವ್ಯವಸ್ಥೆ ರೂಪಿಸಿದೆ. ಇದಕ್ಕಾಗಿ 100 ಐಟಿಐ ಸಂಸ್ಥೆಗಳನ್ನು ಅತ್ಯುತಮ ಕೈಗಾರಿಕಾ ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಡಲಾಗಿದೆ ಎಂದರು.

ರೈತರಿಗೆ ಶಕ್ತಿ ತುಂಬಲು ಹಾಲಿನ ದರ ಏರಿಕೆ:

ರಾಜ್ಯದಲ್ಲಿ ಬರ ಪರಿಸ್ಥಿತಿ ಇದ್ದು ರೈತರು ಸಕಷ್ಟದಲ್ಲಿದ್ದಾರೆ. ಅವರಿಗೆ ಶಕ್ತಿ ತುಂಬಲು ಲೀಟರ್ ಹಾಲಿನ ಬೆಲೆಯನ್ನು 8 ರೂ. ಹೆಚ್ಚಿಸಿದ್ದೇವೆ. ಇದರಲ್ಲಿ ರೈತರಿಗೆ 7 ಹಾಗೂ ಒಕ್ಕೂಟಗಳಿಗೆ ಸೊಸೈಟಿಗಳಿಗೆ ತಲುಪಲಿದೆ. ಇದರಿಂದ 11 ಲಕ್ಷ ರೈತ ಕುಟುಂಬಗಳಿಗೆ ನೆರವಾಗಲಿದೆ. ಮುಖ್ಯಮಂತ್ರಿ ರಸ್ತೆ ಸಂಪರ್ಕ ಯೋಜನೆಗೆ 10 ಸಾವಿರ ಕೋಟಿ ನೀಡಿದ್ದು, 20 ಸಾವಿರ ಕಿ.ಮೀ ಜಿಲ್ಲಾ ಹಾಗೂ ತಾಲೂಕು ಪಂಚಾಯ್ತಿ ರಸ್ತೆಗಳ ಅಭಿವೃದ್ಧಿಗೆ ಪ್ರತಿ ಪಂಚಾಯ್ತಿಗೆ 6 ಸಾವಿರ ಕೋಟಿ ಹಣ ನೀಡಲು ಸಚಿವ ಸಂಪುಟದಲ್ಲಿ ತೀರ್ಮಾನಿಸಲಾಗಿದೆ. ಸರ್ಕಾರಿ ಆಸ್ಪತ್ರೆ ದತ್ತು ಯೋಜನೆ ಪ್ರಾರಂಭಿಸಿದ್ದು, 11 ವೈದ್ಯಕೀಯ ಕಾಲೇಜುಗಳು ಇದಕ್ಕೆ ಸಹಿ ಮಾಡಿವೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ 100 ಹೊಸ ಆಂಬುಲೆನ್ಸ್ ಗಳನ್ನು ಲೋಕಾರ್ಪಣೆ ಗೊಳಿಸಲಾಗುವುದು ಎಂದು ತಿಳಿಸಿದರು.

ಆರ್ಥಿಕ ಇಲಾಖೆಯೊಂದಿಗೆ ಚರ್ಚೆ ಮಾಡಿ 1995ರ ನಂತರ ಪ್ರಾರಂಭವಾದ ಸರ್ಕಾರಿ ಅನುದಾನಿತ ಕನ್ನಡ ಮಾಧ್ಯಮ ಶಾಲೆಗಳಿಗೆ ಅನುದಾನ ನೀಡಲು ಕೆಲವು ದಿನಗಳಲ್ಲಿ ಅವರೊಂದಿಗೆ ಚರ್ಚೆ ಮಾಡಿ ಸಹಾಯ ಮಾಡಲಾಗುವುದು. ಬಡ ರೈತರಿಗಾಗಿ ಸರ್ಕಾರ ನೇಗಿಲಯೋಗಿ ಯೋಜನೆ ರೂಪಿಸಿದ್ದು, 3 ಎಕರೆವರೆಗೂ ಹೊಲವನ್ನು ಟ್ರ್ಯಾಕ್ಟರ್ ಮೂಲಕ ಉಳುಮೆ ಮಾಡಲು ಕಾರ್ಯಕ್ರಮ ರೂಪಿಸಲಾಗಿದೆ. ನಮ್ಮ ಸರ್ಕಾರ ಪ್ರಜಾಸೇವೆ ಇಲಾಖೆ ರೂಪಿಸಿದೆ. ಎಲ್ಲರ ಆಸ್ತಿ ದಾಖಲೆಗಳ ಮೂಲಕ ಮಾಲೀಕತ್ವ ಗಟ್ಟಿಗೊಳಿಸಲು ಭೂಗ್ಯಾರಂಟಿ ಜಾರಿಗೆ ತಂದಿದೆ. ರೈತರಿಗಾಗಿ ತೇಗದಸಿರಿ ಯೋಜನೆ ರೂಪಿಸಿದೆ. ಮಲೆನಾಡಿನ ಪ್ರದೇಶದ ರೈತರಿಗೆ ಅರಣ್ಯ ಇಲಾಖೆಯಿಂದ ಆಗುತ್ತಿದ್ದ ತೊಂದರೆ ಹಾಗೂ ರಸ್ತೂರಿರಂಗನ್ ವರದಿ ತಿರಸ್ಕರಿಸಲು ವಿಶೇಷ ಅಧಿವೇಶನ ನಡೆಸಿದ್ದೇವೆ. ಇನ್ನು ರಾಜ್ಯದಲ್ಲಿ 5 ಲಕ್ಷ ನಿವೇಶನಗಳನ್ನು ವಿತರಣೆ ಮಾಡಲು ಕಾರ್ಯಕ್ರಮ ನೀಡಲಾಗಿದೆ ಎಂದು ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು.

ಬೆಂಗಳೂರು–ಪುಣೆ ಹೈಸ್ಪೀಡ್ ರೈಲು ಕಾರಿಡಾರ್ ಶೀಘ್ರ ಘೋಷಣೆ: ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸುಳಿವು

ಬೆಂಗಳೂರು,ನ.1: ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ದೇಶದ ಮುಂದಿನ ಬುಲೆಟ್ ರೈಲು ಯೋಜನೆಗೆ ಸಂಬಂಧಿಸಿದಂತೆ ಪ್ರಮುಖ ಸುಳಿವು ನೀಡಿದ್ದು, ಪ್ರಸ್ತಾವಿತ ಬೆಂಗಳೂರು–ಪುಣೆ ಹೈಸ್ಪೀಡ್ ರೈಲು ಕಾರಿಡಾರ್ ಅನ್ನು ಶೀಘ್ರದಲ್ಲೇ ಕೇಂದ್ರ ಸರ್ಕಾರ ಘೋಷಿಸಲಿದೆ ಎಂದು ಸುಳಿವು ನೀಡಿದ್ದಾರೆ.

ಬೆಂಗಳೂರು ಮತ್ತು ಮುಂಬೈ ನಡುವಿನ ನೂತನ ವಂದೇಭಾರತ್ ಸ್ಲೀಪರ್ ಎಕ್ಸ್‌ಪ್ರೆಸ್ ರೈಲಿನ ಉದ್ಘಾಟನಾ ಸಮಾರಂಭದ ನಂತರ ಬೆಂಗಳೂರಿನಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ಈಗಾಗಲೇ 4,000 ಕಿಲೋಮೀಟರ್‌ಗಳಷ್ಟು ಬುಲೆಟ್ ರೈಲು ಕಾರಿಡಾರ್‌ಗಳಿಗೆ ಅನುಮೋದನೆ ನೀಡಿದ್ದು, ಮುಂಬರುವ ವರ್ಷಗಳಲ್ಲಿ ಇನ್ನು 3,000 ಕಿಲೋಮೀಟರ್ ಹೊಸ ಮಾರ್ಗಗಳನ್ನು ಘೋಷಿಸಲಾಗುವುದು ಎಂದು ಸ್ಪಷ್ಟಪಡಿಸಿದರು. ಈ ಪೈಕಿ ಇಡೀ ಕರ್ನಾಟಕವನ್ನು ಆವರಿಸುವ ಬೆಂಗಳೂರಿನಿಂದ ಹುಬ್ಬಳ್ಳಿ ಮಾರ್ಗವಾಗಿ ಪುಣೆಗೆ ಸಾಗುವ ಹೈಸ್ಪೀಡ್ ಕಾರಿಡಾರ್ ಪ್ರಮುಖವಾಗಿ ಸೇರಿದೆ ಎಂದು ಅವರು ತಿಳಿಸಿದರು. ಅಲ್ಲದೆ, ದಕ್ಷಿಣ ಭಾರತದ ಪ್ರಮುಖ ಆರ್ಥಿಕ ಮತ್ತು ತಂತ್ರಜ್ಞಾನ ನಗರಗಳಾದ ಬೆಂಗಳೂರು, ಹೈದರಾಬಾದ್, ಅಮರಾವತಿ ಮತ್ತು ಚೆನ್ನೈಗಳನ್ನು ಜೋಡಿಸುವ ಮತ್ತೊಂದು ಹೈಸ್ಪೀಡ್ ರೈಲು ಯೋಜನೆಗೆ ಪ್ರಧಾನಿಯವರಿಂದ ಅನುಮೋದನೆ ದೊರೆತಿದೆ ಎಂದು ಸಚಿವರು ಪ್ರಕಟಿಸಿದರು. ಈ ಯೋಜನೆಯಿಂದಾಗಿ ಬೆಂಗಳೂರು ಮತ್ತು ಚೆನ್ನೈ ನಡುವಿನ ಪ್ರಯಾಣದ ಅವಧಿಯು ಕೇವಲ 73 ನಿಮಿಷಗಳಿಗೆ (1 ಗಂಟೆ 13 ನಿಮಿಷ) ಕಡಿತಗೊಳ್ಳಲಿದ್ದು, ಎರಡೂ ಮಹಾನಗರಗಳು ಒಂದೇ ನಗರದಂತೆ ಕಾರ್ಯನಿರ್ವಹಿಸಲಿವೆ. ಇದು ದಕ್ಷಿಣ ಭಾರತದ ರಾಜ್ಯಗಳ ಆರ್ಥಿಕತೆಗೆ ಭಾರಿ ವೇಗ ನೀಡಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.ಇದೇ ವೇಳೆ ರಾಜ್ಯದ ರೈಲ್ವೆ ಸಂಪರ್ಕ ಜಾಲವನ್ನು ಮತ್ತಷ್ಟು ಬಲಪಡಿಸುವ ಕುರಿತು ಮಾತನಾಡಿದ ವೈಷ್ಣವ್, ಬೆಂಗಳೂರು ಮತ್ತು ಮಂಗಳೂರು ನಡುವಿನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಮುಂದಿನ ಕೆಲವು ವಾರಗಳಲ್ಲಿಯೇ ಆರಂಭಿಸಲಾಗುವುದು ಎಂದು ಖಚಿತಪಡಿಸಿದರು. ಈ ಮಾರ್ಗದ ವಿದ್ಯುದ್ದೀಕರಣ ಮತ್ತು ಪ್ರಾಯೋಗಿಕ ಪರೀಕ್ಷಾ ಕಾರ್ಯಗಳು ಈಗಾಗಲೇ ಯಶಸ್ವಿಯಾಗಿ ಪೂರ್ಣಗೊಂಡಿವೆ ಎಂದು ಅವರು ಮಾಹಿತಿ ನೀಡಿದರು.

ಕನ್ನಡಿಗರ ಪಾಲಿಗೆ ನ.1 ಸ್ವಾಭಿಮಾನದ ಸಂಕೇತ: ಮಧು ಬಂಗಾರಪ್ಪ



ಸಚಿವ ಮಧು ಬಂಗಾರಪ್ಪಗೆ ಸಿಎಂ ಅಭಿನಂದನೆ

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಬೆಂಗಳೂರಿನ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಸುಮಾರು 20 ಸಾವಿರ ಶಾಲಾ ಮಕ್ಕಳು ಭಾಗವಹಿಸಿದ್ದರು.ಈ ಸಂದರ್ಭದಲ್ಲಿ ಬಾಗಲಗುಂಟೆ, ಚಿಕ್ಕಬಿದರಕಲ್ಲು ಹಾಗೂ ನೆಲಗದರನಹಳ್ಳಿಯ ಸರ್ಕಾರಿ ಪ್ರೌಢಶಾಲೆಗಳ ಸುಮಾರು 1,600 ವಿದ್ಯಾರ್ಥಿಗಳು ಅದ್ಭುತ ಸಾಂಸ್ಕೃತಿಕ ಕಾರ್ಯಕ್ರಮವನ್ನು ಪ್ರಸ್ತುತಪಡಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಪ್ರತಿಯೊಬ್ಬ ವಿದ್ಯಾರ್ಥಿಗೂ ಅಭಿನಂದನಾ ಪತ್ರವನ್ನು ವಿತರಿಸಲಾಯಿತು. ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಹಾಗೂ ವ್ಯವಸ್ಥಿತವಾಗಿ ಆಯೋಜಿಸಿದ್ದಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹರ್ಷ ವ್ಯಕ್ತಪಡಿಸಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಅವರನ್ನು ಅಭಿನಂದಿಸಿದರು.

ಬೆಂಗಳೂರು, ನ.1: ಕನ್ನಡಿಗರ ಪಾಲಿಗೆ ನವೆಂಬರ್ 1 ಕೇವಲ ಒಂದು ದಿನಾಂಕವಲ್ಲ. ಇದು ನಮ್ಮ ನಾಡಿನ ಇತಿಹಾಸ, ಭಾಷೆಯ ಅಸ್ತಿತ್ವ, ಸಂಸ್ಕೃತಿಯ ವೈಭವ ಹಾಗೂ ಕನ್ನಡಿಗರ ಸ್ವಾಭಿಮಾನದ ಸಂಕೇತದ ದಿನ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಬೆಂಗಳೂರಿನ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಧ್ವಜಾರೋಹಣ ನೆರವೇರಿಸಿದ ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು ಎಂದು ಕವಿ ಹುಯಿಲಗೋಳ ನಾರಾಯಣರಾಯರು ರಚಿಸಿದ ಕವಿತೆ ಕನ್ನಡ ನಾಡು–ನುಡಿಯ ಹೋರಾಟದ ಗೀತೆಯಾಗಿ ಉಳಿದಿದೆ. 1924ರಲ್ಲಿ ಬೆಳಗಾವಿಯಲ್ಲಿ ನಡೆದ ಅಖಿಲ ಭಾರತ ಕಾಂಗ್ರೆಸ್ ಅಧಿವೇಶನದಲ್ಲಿ ಗಂಗೂಬಾಯಿ ಹಾನಗಲ್ ಅವರು ಈ ಗೀತೆಯನ್ನು ಹಾಡಿದ್ದರು. ಹರಿದು ಹಂಚಿಹೋಗಿದ್ದ ಕನ್ನಡ ಭಾಷಿಕ ಪ್ರದೇಶಗಳನ್ನು ಒಂದುಗೂಡಿಸುವ ಕರ್ನಾಟಕ ಏಕೀಕರಣ ಚಳವಳಿಗೆ ಈ ಗೀತೆ ಮಹತ್ವದ ಪ್ರೇರಣೆಯಾಯಿತು ಎಂದು ಸ್ಮರಿಸಿದರು.

ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಶ್ರೀಮಂತ ಇತಿಹಾಸವಿದೆ. ವಿಶ್ವಗುರು ಬಸವಣ್ಣ, ಆದಿಕವಿ ಪಂಪ, ರನ್ನ, ಕುಮಾರವ್ಯಾಸ ಸೇರಿದಂತೆ ಅನೇಕ ಮಹನೀಯರು ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ. ಕನ್ನಡಕ್ಕೆ ಶಾಸ್ತ್ರೀಯ ಭಾಷೆಯ ಸ್ಥಾನಮಾನ ದೊರೆತಿರುವುದು ಭಾಷೆಯ ಪ್ರಾಚೀನತೆ ಮತ್ತು ಸಾಹಿತ್ಯಿಕ ಶ್ರೀಮಂತಿಕೆಗೆ ಸಂದ ಗೌರವವಾಗಿದೆ ಎಂದರು.

1956ರ ನವೆಂಬರ್ 1ರಂದು ಕನ್ನಡ ಮಾತನಾಡುವ ಪ್ರದೇಶಗಳನ್ನು ಒಗ್ಗೂಡಿಸಿ ವಿಶಾಲ ಮೈಸೂರು ರಾಜ್ಯ ರಚಿಸಲಾಯಿತು. ನಂತರ 1973ರ ನವೆಂಬರ್ 1ರಂದು ಅಂದಿನ ಮುಖ್ಯಮಂತ್ರಿ ದೇವರಾಜ ಅರಸು ಅವರು ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಿದರು ಎಂದು ತಿಳಿಸಿದರು.

1.16 ಕೋಟಿ ಮಕ್ಕಳ ಭವಿಷ್ಯ ರೂಪಿಸುವ ಜವಾಬ್ದಾರಿ:

ಶಾಲಾ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿರುವ 1.16 ಕೋಟಿ ಮಕ್ಕಳ ಭವಿಷ್ಯ ರೂಪಿಸುವ ಜವಾಬ್ದಾರಿ ಸರ್ಕಾರದ ಮೇಲಿದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ನಾಡು, ನುಡಿ, ನೆಲ, ಜಲ ಮತ್ತು ಸಂಸ್ಕೃತಿಯ ಬಗ್ಗೆ ಗೌರವ ಮೂಡಿಸುವ ಕಾರ್ಯವನ್ನು ಪಠ್ಯಪುಸ್ತಕಗಳ ಮೂಲಕ ಪರಿಣಾಮಕಾರಿಯಾಗಿ ಮಾಡಲಾಗುತ್ತಿದೆ ಎಂದು ಹೇಳಿದರು.

ಶಿಕ್ಷಕರ ನೇಮಕಾತಿ, ಗ್ರಾಮೀಣ ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶ ಕಲ್ಪಿಸುವುದು ಹಾಗೂ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಿದೆ. ಸರ್ಕಾರಿ ಶಾಲೆ ಮತ್ತು ಕಾಲೇಜುಗಳಲ್ಲಿ 17 ಸಾವಿರಕ್ಕೂ ಹೆಚ್ಚು ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಆರಂಭಿಸಲಾಗಿದೆ. ಈ ಪ್ರಕ್ರಿಯೆ ಪೂರ್ಣಗೊಂಡರೆ ಸರ್ಕಾರದ ಅವಧಿಯಲ್ಲಿ ಒಟ್ಟು 32 ಸಾವಿರ ಶಿಕ್ಷಕರ ನೇಮಕಾತಿ ಮಾಡಿದಂತಾಗಲಿದೆ ಎಂದು ತಿಳಿಸಿದರು.

ಗ್ರಾಮೀಣ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ಸಹಾಯಹಸ್ತ:

ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ಒಂದರಿಂದ ಹತ್ತನೇ ತರಗತಿವರೆಗೆ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್ಗಳ ಪ್ರವೇಶಾತಿಯಲ್ಲಿ ಶೇ.7.5ರಷ್ಟು ವಿಶೇಷ ಮೀಸಲಾತಿ ಕಲ್ಪಿಸುವ ವಿದ್ಯಾರ್ಥಿ ಸಹಾಯಹಸ್ತ ಯೋಜನೆಯನ್ನು ಸರ್ಕಾರ ಜಾರಿಗೆ ತಂದಿದೆ. ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿ ಓದಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶಗಳನ್ನು ವಿಸ್ತರಿಸುವ ನಿಟ್ಟಿನಲ್ಲಿ ಇದು ಮಹತ್ವದ ಕ್ರಮವಾಗಿದೆ ಎಂದರು.

ನಗರ ಪ್ರದೇಶದ ವಿದ್ಯಾರ್ಥಿಗಳಿಗೆ ಕೃಷಿ ಪದ್ಧತಿ, ಗ್ರಾಮೀಣ ಸಂಸ್ಕೃತಿ ಹಾಗೂ ಶ್ರಮಜೀವನದ ನೈಜ ಪರಿಚಯ ಮಾಡಿಕೊಡುವ ಉದ್ದೇಶದಿಂದ ಗ್ರಾಮಾನುಭವ ಎಂಬ ವಿನೂತನ ಶೈಕ್ಷಣಿಕ ಕಾರ್ಯಕ್ರಮ ರೂಪಿಸಲಾಗಿದೆ. ಈ ಯೋಜನೆಯಡಿ 8, 9 ಮತ್ತು 11ನೇ ತರಗತಿಯ ನಗರ ಪ್ರದೇಶದ ವಿದ್ಯಾರ್ಥಿಗಳು ಗ್ರಾಮಗಳಿಗೆ ಭೇಟಿ ನೀಡಿ ಕೃಷಿ, ತೋಟಗಾರಿಕೆ, ಪಶುಸಂಗೋಪನೆ, ಕಲೆ ಮತ್ತು ಸಂಸ್ಕೃತಿ ಸೇರಿದಂತೆ ಗ್ರಾಮೀಣ ಬದುಕಿನ ಅನುಭವ ಪಡೆಯಲಿದ್ದಾರೆ ಎಂದು ಹೇಳಿದರು.

1,200ಕ್ಕೂ ಹೆಚ್ಚು ಕೆಪಿಎಸ್ ಶಾಲೆಗಳ ಸ್ಥಾಪನೆ:

ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಡಿ 1,200ಕ್ಕೂ ಹೆಚ್ಚು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು (ಕೆಪಿಎಸ್) ಸ್ಥಾಪಿಸಲಾಗುತ್ತಿದೆ. ಇದರೊಂದಿಗೆ ಸಿಎಸ್ಆರ್ ಅನುದಾನದ ನೆರವಿನಿಂದಲೂ ಕೆಪಿಎಸ್ ಶಾಲೆಗಳನ್ನು ಸ್ಥಾಪಿಸುವ ಪ್ರಯತ್ನಗಳು ನಡೆಯುತ್ತಿವೆ ಎಂದು ತಿಳಿಸಿದರು.

ಶಿಕ್ಷಕರ ಅಮೂಲ್ಯ ಸೇವೆಯನ್ನು ಗೌರವಿಸುವ ಉದ್ದೇಶದಿಂದ 2026ರ ಶಿಕ್ಷಕರ ದಿನಾಚರಣೆಯ ಸಂದರ್ಭದಲ್ಲಿ ರಾಜ್ಯದ ಎಲ್ಲಾ ಶಿಕ್ಷಕರು ತಮ್ಮ ಹೆಸರಿನ ಹಿಂದೆ ಹೆಮ್ಮೆಯಿಂದ Tr ಎಂದು ಬಳಸಲು ಸರ್ಕಾರ ಅನುಮತಿ ನೀಡಿ ಆದೇಶ ಹೊರಡಿಸಿದೆ ಎಂದರು.

2024ರ ಲೋಕಸಭಾ ಚುನಾವಣೆ ಅಕ್ರಮ: ಸಿಇಸಿ ಜ್ಞಾನೇಶ್ ಕುಮಾರ್ ಜೈಲಿಗೆ ಹೋಗಲಿದ್ದಾರೆ– ರಾಹುಲ್ ವಾಗ್ದಾಳಿ

ನವದೆಹಲಿ,ನ.1: 2024ರ ಲೋಕಸಭಾ ಚುನಾವಣೆಯಲ್ಲಿ ಮತಗಳ್ಳತನ ನಡೆದಿದೆ. ವಿದ್ಯುನ್ಮಾನ ಮತಯಂತ್ರಗಳ (ಇವಿಎಂ) ದುರ್ಬಳಕೆ ಹಾಗೂ ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ಅಕ್ರಮವಾಗಿ ತೆಗೆದುಹಾಕುವ ಮೂಲಕ ಚುನಾವಣೆಯಲ್ಲಿ ಅಕ್ರಮ ಎಸಗಲಾಗಿದೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದಾರೆ.



ದೆಹಲಿಯ ರಾಮಲೀಲಾ ಮೈದಾನದಲ್ಲಿ ಭಾನುವಾರ ನಡೆದ ಇಂಡಿಯಾ ಮೈತ್ರಿಕೂಟದ ಬೃಹತ್ ಪ್ರತಿಭಟನಾ ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಜ್ಞಾನೇಶ್ ಕುಮಾರ್ ಅವರನ್ನು ಮುಖ್ಯ ಚುನಾವಣಾ ಆಯುಕ್ತರ ಹುದ್ದೆಯಿಂದ ತೆಗೆದುಹಾಕಲಾಗುತ್ತದೆ. ಬಳಿಕ ಅವರು ಜೈಲಿಗೆ ಹೋಗಲಿದ್ದಾರೆ ಎಂದು ಎಚ್ಚರಿಕೆ ನೀಡಿದರು.

2024ರ ಲೋಕಸಭಾ ಚುನಾವಣೆಯಲ್ಲಿ ಇವಿಎಂ ಹಾಗೂ ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಮೂಲಕ ಮತಗಳನ್ನು ಕಳವು ಮಾಡಲಾಗಿದೆ. ಚುನಾವಣೆಯ ಬಳಿಕ ಶೇ.15ರಷ್ಟು ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ. ಇಂಡಿಯಾ ಮೈತ್ರಿಕೂಟ ಮತ್ತು ಎನ್‌ಡಿಎ ನಡುವಿನ ಮತಗಳ ಅಂತರ ಕೇವಲ ಶೇ.3ರಷ್ಟಿತ್ತು. ಹೀಗಾಗಿ 2024ರ ಚುನಾವಣೆ ಅಕ್ರಮವಾಗಿತ್ತು ಎಂದು ರಾಹುಲ್ ಗಾಂಧಿ ಆರೋಪಿಸಿದರು. ಈ ಅಂಕಿ–ಅಂಶಗಳನ್ನು ಚುನಾವಣಾ ಆಯೋಗವೇ ನೀಡಿದೆ ಎಂದು ಅವರು ಪ್ರತಿಪಾದಿಸಿದರು.

ಜ್ಞಾನೇಶ್ ಕುಮಾರ್ ಇಲ್ಲದಿದ್ದರೆ ನರೇಂದ್ರ ಮೋದಿ ಪ್ರಧಾನಿಯಾಗುತ್ತಿರಲಿಲ್ಲ ಹಾಗೂ ಅಮಿತ್ ಶಾ ಗೃಹ ಸಚಿವರಾಗುತ್ತಿರಲಿಲ್ಲ ಎಂದು ರಾಹುಲ್ ಗಾಂಧಿ ಟೀಕಿಸಿದರು. ಮತಗಳ್ಳತನ ಎನ್ನುವುದು ಸಾಮಾನ್ಯ ಕಳ್ಳತನವಲ್ಲ. ಇದು ದೇಶದ ಪ್ರತಿಯೊಬ್ಬ ನಾಗರಿಕನ ಧ್ವನಿಯನ್ನು ಕಸಿದುಕೊಳ್ಳುವ ಕೃತ್ಯ. ಇದನ್ನು ದೇಶದ್ರೋಹ ಎಂದು ಪರಿಗಣಿಸಬೇಕು ಎಂದು ಹೇಳಿದರು.

ದೇಶದ ಸಾಂವಿಧಾನಿಕ ಸಂಸ್ಥೆಗಳನ್ನು ಆರ್‌ಎಸ್‌ಎಸ್ ತನ್ನ ನಿಯಂತ್ರಣಕ್ಕೆ ತೆಗೆದುಕೊಂಡಿದೆ ಎಂದು ಆರೋಪಿಸಿದ ಅವರು, ರೈತರು, ಕಾರ್ಮಿಕರು ಮತ್ತು ಯುವಜನರಿಗೆ ಅವರ ಹಕ್ಕುಗಳು ಸಿಗುತ್ತಿಲ್ಲ ಎಂದು ದೂರಿದರು. ದೇಶದ ಪ್ರಜಾಪ್ರಭುತ್ವವನ್ನು ಅಂತ್ಯಗೊಳಿಸಲು ಬಿಡುವುದಿಲ್ಲ. ಸಂವಿಧಾನವನ್ನು ನಾಶಮಾಡಲು ಅವಕಾಶ ನೀಡುವುದಿಲ್ಲ ಎಂದರು.



ಭಾನುವಾರ ಮುಂಜಾನೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು, ಹೋರಾಟಗಾರರು ಮತ್ತು ಪದಾಧಿಕಾರಿಗಳು ದೆಹಲಿಯ ಇಂದಿರಾಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್–1ರಲ್ಲಿ ಬಂದಿಳಿದರು. ಬಳಿಕ ರಾಮಲೀಲಾ ಮೈದಾನದಲ್ಲಿ ಆಯೋಜಿಸಲಾಗಿದ್ದ ಸಿಇಸಿ ವಿರುದ್ಧಸ ಕಾಂಗ್ರೆಸ್ ಪಕ್ಷದ ರ್‍ಯಾಲಿಯಲ್ಲಿ ಭಾಗವಹಿಸಿದ್ದರು.

ರಾಹುಲ್ ರ್‍ಯಾಲಿ ಫ್ಲಾಪ್: ಬಿಜೆಪಿ ವ್ಯಂಗ್ಯ

ನವದೆಹಲಿ,ನ.1: 2024ರ ಲೋಕಸಭಾ ಚುನಾವಣೆಯನ್ನು ಅಕ್ರಮ ಎಂದು ಆರೋಪಿಸಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ನಾಯಕರು ತೀವ್ರ ವಾಗ್ದಾಳಿ ನಡೆಸಿದ್ದಾರೆ. ದೆಹಲಿಯ ರಾಮಲೀಲಾ ಮೈದಾನದಲ್ಲಿ ಭಾನುವಾರ ನಡೆದ ಇಂಡಿಯಾ ಮೈತ್ರಿಕೂಟದ ಬೃಹತ್ ಪ್ರತಿಭಟನಾ ರ್‍ಯಾಲಿಯನ್ನು ಬಿಜೆಪಿ ನಾಯಕರು ಫ್ಲಾಪ್ ಶೋ ಎಂದು ಟೀಕಿಸಿದ್ದಾರೆ.

ರಾಮಲೀಲಾ ಮೈದಾನದ ರ್‍ಯಾಲಿಯಲ್ಲಿ ಮಾತನಾಡಿದ್ದ ರಾಹುಲ್ ಗಾಂಧಿ, 2024ರ ಲೋಕಸಭಾ ಚುನಾವಣೆಯಲ್ಲಿ ವಿದ್ಯುನ್ಮಾನ ಮತಯಂತ್ರಗಳು ಹಾಗೂ ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಮೂಲಕ ಮತಗಳ್ಳತನ ನಡೆದಿದೆ ಎಂದು ಆರೋಪಿಸಿದ್ದರು.

ಚುನಾವಣಾ ಆಯೋಗದ ಮುಖ್ಯ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧವೂ ವಾಗ್ದಾಳಿ ನಡೆಸಿದ್ದ ರಾಹುಲ್ ಅವರನ್ನು ಹುದ್ದೆಯಿಂದ ತೆಗೆದುಹಾಕಲಾಗುತ್ತದೆ ಮತ್ತು ಜೈಲಿಗೆ ಕಳುಹಿಸಲಾಗುತ್ತದೆ ಎಂದು ಹೇಳಿದ್ದರು.

ರಾಹುಲ್ ಗಾಂಧಿ ಅವರ ಈ ಹೇಳಿಕೆಗೆ ಬಿಜೆಪಿ ನಾಯಕರು ತಿರುಗೇಟು ನೀಡಿದ್ದಾರೆ. ವಿರೋಧ ಪಕ್ಷದ ನಾಯಕನಾಗಿರುವ ರಾಹುಲ್ ಗಾಂಧಿಯವರನ್ನೇ 'ಅಕ್ರಮ ವಿರೋಧ ಪಕ್ಷದ ನಾಯಕ' ಎಂದು ಟೀಕಿಸಿರುವ ಬಿಜೆಪಿ, ಚುನಾವಣಾ ವ್ಯವಸ್ಥೆ ಹಾಗೂ ಸಾಂವಿಧಾನಿಕ ಸಂಸ್ಥೆಗಳ ವಿರುದ್ಧ ಕಾಂಗ್ರೆಸ್ ನಿರಂತರವಾಗಿ ಆರೋಪ ಮಾಡುತ್ತಿದೆ ಎಂದು ಆಕ್ಷೇಪಿಸಿದೆ.

ಬಿಜೆಪಿ ಸಂಸದ ಸಂಬಿತ್ ಪಾತ್ರಾ ಅವರು ರಾಮಲೀಲಾ ಮೈದಾನದ ಪ್ರತಿಭಟನಾ ರ್‍ಯಾಲಿಯನ್ನು 'ಸೂಪರ್ ಫ್ಲಾಪ್' ಎಂದು ವ್ಯಂಗ್ಯವಾಡಿದ್ದಾರೆ. ರ್‍ಯಾಲಿ ನಡೆಯುತ್ತಿದ್ದ ಮೈದಾನದಲ್ಲಿ ಸುಮಾರು ಶೇ.40ರಷ್ಟು ಜಾಗ ಖಾಲಿ ಇತ್ತು ಎಂದು ಅವರು ಹೇಳಿದ್ದಾರೆ. ರ್‍ಯಾಲಿಗೆ 10 ಲಕ್ಷ ಜನರು ಸೇರುವ ನಿರೀಕ್ಷೆ ವ್ಯಕ್ತಪಡಿಸಲಾಗಿತ್ತು. ಆದರೆ ಅಷ್ಟೊಂದು ಜನರು ಎಲ್ಲಿದ್ದಾರೆ ಎಂದು ಪ್ರಶ್ನಿಸುವ ಮೂಲಕ ವಿರೋಧ ಪಕ್ಷದ ನಾಯಕರ ಜನಸಮೂಹದ ಕುರಿತ ಹೇಳಿಕೆಗಳನ್ನು ಟೀಕಿಸಿದ್ದಾರೆ.

ಇನ್ನೊಂದೆಡೆ, ಬಿಜೆಪಿ ನಾಯಕರು ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ವಿರುದ್ಧ ರಾಜಕೀಯ ವಾಗ್ದಾಳಿ ಮುಂದುವರಿಸಿದ್ದಾರೆ. ದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆದ ಇಂಡಿಯಾ ಮೈತ್ರಿಕೂಟದ ಪ್ರತಿಭಟನೆಯ ಉದ್ದೇಶ ಮತ್ತು ಜನರ ಭಾಗವಹಿಸುವಿಕೆ ಕುರಿತು ಬಿಜೆಪಿ ಪ್ರಶ್ನೆಗಳನ್ನು ಎತ್ತಿದೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಹಾಗೂ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿವೆ ಎಂಬ ಆರೋಪದ ಹಿನ್ನೆಲೆಯಲ್ಲಿ INDIA ಮೈತ್ರಿಕೂಟ ಈ ಪ್ರತಿಭಟನಾ ರ್‍ಯಾಲಿ ಆಯೋಜಿಸಿತ್ತು. ಆದರೆ ರ್‍ಯಾಲಿಯ ಯಶಸ್ಸಿನ ಕುರಿತು ಬಿಜೆಪಿ ಮತ್ತು ಪ್ರತಿಪಕ್ಷಗಳ ನಡುವೆ ರಾಜಕೀಯ ವಾಕ್ಸಮರ ಮುಂದುವರಿದಿದೆ.

ಗೋವಾದಲ್ಲಿ ಕನ್ನಡಿಗರಿಗಾಗಿ ಕನ್ನಡ ಭವನ ನಿರ್ಮಾಣ: ಡಾ.ಸಂತೋಷ್ ಹಾನಗಲ್ ಘೋಷಣೆ

ಪಣಜಿ,ನ.1: ಗೋವಾದಲ್ಲಿರುವ ಕನ್ನಡಿಗರಿಗೆ ಒಂದು ವೇದಿಕೆ ಕಲ್ಪಿಸಲು ಕರ್ನಾಟಕ ಸರ್ಕಾರ ಗೋವಾದಲ್ಲಿ ಕನ್ನಡ ಭವನ ನಿರ್ಮಾಣ ಮಾಡಲಿದೆ. ಇದು ಗೋವಾದ ಎಲ್ಲ ಕನ್ನಡಿಗರಿಗೆ ಒಂದು ಬೃಹತ್ ವೇದಿಕೆಯಾಗಲಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ. ಸಂತೋಷ್ ಹಾನಗಲ್ ನುಡಿದರು.



ಕನ್ನಡ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು, ಗೋವಾ ಕನ್ನಡ ಸಮಾಜ ಪಣಜಿ, ಇವರ ಸಯುಕ್ತ ಆಶಯದಲ್ಲಿ ಗೋವಾದ ಪರ್ವರಿಯ ಆಜಾದ್ಭವನ ದಲ್ಲಿ ಭಾನುವಾರ 71ನೇಯ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಕನ್ನಡ ಭಾಷಾ ಮತ್ತು ಸಂಸ್ಕೃತಿ ಸೊಗಡು, ದಿಂಡಿಮ ಉತ್ಸವದಲ್ಲಿ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದು ಅವರು ಮಾತನಾಡುತ್ತಿದ್ದರು.

ಕಳೆದ 40 ವರ್ಷಗಳ ಹಿಂದೆ ಗೋವಾಕ್ಕೆ ಬಂದು ಇಲ್ಲಿ ಕನ್ನಡ ಸಮಾಜ ಕಟ್ಟಿ ಹಿರಿಯ ಕನ್ನಡಿಗ ವೀರಪ್ಪ ಹುಬ್ಬಳ್ಳಿ ರವರು ಕನ್ನಡಿಗರಿಗೆ ಒಂದು ವೇದಿಕೆ ಕಲ್ಪಿಸಿದ್ದಾರೆ. ನವೆಂಬರ್ 1 ರಂದೆ ಇಂದು ಹೊರರಾಜ್ಯ ಗೋವಾದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಆಯೋಜಿಸಿರುವುದು ಹೆಚ್ಚು ಮಹತ್ವ. ಹಿಂದಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವವರಿಗೆ ಕನ್ನಡದ ಮೇಲೆ ಎಷ್ಟು ಪ್ರೀತಿ ಮತ್ತು ಅಭಿಮಾನ ಇದೆ ಎಂದು ತೋರಿಸುತ್ತದೆ ಎಂದು ಸಂತೋಷ್ ಹಾನಗಲ್ ನುಡಿದರು. ಸಮಾರಂಭದ ಉದ್ಘಾಟನೆ ನೆರವೇರಿಸಿದ ಆದಾಯ ಇಲಾಖೆ ಪಣಜಿ ಉಪ ಆಯುಕ್ತರಾದ ಪ್ರಿಯಾಂಕಾ ಕಾಂಬಳೆ ಮಾತನಾಡಿ– 2500 ವರ್ಷಗಳಷ್ಟು ಇತಿಹಾಸ ಇರುವ ಕನ್ನಡ ನಮ್ಮ ಮಾತೃಭಾಷೆ ಎಂದು ಹೇಳಲು ನಮಗೆ ತುಂಬಾ ಹೆಮ್ಮೆಯಾಗುತ್ತದೆ. ಗೋವಾದಲ್ಲಿ ಕನ್ನಡ ರಾಜ್ಯೋತ್ಸವ ಆಯೋಜನೆಗೆ ಸಹಕಾರ ನೀಡಿರುವ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಗೋವಾ ಕನ್ನಡಿಗರ ಪರವಾಗಿ ನಾನು ಧನ್ಯವಾದ ಸಲ್ಲಿಸುತ್ತೇನೆ ಎಂದರು. ವೇದಿಕೆ ಮೇಲೆ ಗೌರವ ಅತಿಥಿಗಳಾಗಿ ಉಪಸ್ಥಿತರಿದ್ದ ರಾಷ್ಟ್ರೀಯ ವರದಿಗಾರ ಅನಿಲ್ ಸನದಿ ಮಾತನಾಡಿ_ ಹೊರನಾಡು ಗೋವಾದಲ್ಲಿ ಕನ್ನಡ ರಾಜ್ಯೋತ್ಸವ ಆಯೋಜಿಸಲು ನಮಗೆ ಹೆಮ್ಮೆ ಅನಿಸುತ್ತದೆ. ಇಂದು ನಾವೆಲ್ಲ ಕನ್ನಡಿಗರು ಸೇರಿ ಕನ್ನಡ ರಾಜ್ಯೋತ್ಸವವನ್ನು ಇಲ್ಲಿ ಆಚರಿಸುತ್ತಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಗೌರವ ಅತಿಥಿಗಳಾಗಿ ಉಪಸ್ಥಿತರಿದ್ದ ಉತ್ತರ ಕನ್ನಡದ (ಜೊಯಿಡಾ)ಲೇಖಕಿ ಸುಕನ್ಯಾ ದೇಸಾಯಿ ಮಾತನಾಡಿ_ ಕನ್ನಡ ಎನ್ನುವುದು ಕೇವಲ ಭಾಷೆಯಲ್ಲ ಅದು ನಮ್ಮ ಸಂಸ್ಕೃತಿ , ನಮ್ಮ ಪರಂಪರೆ, ನಮ್ಮ ನಾಡಿನ ಕವಿಗಳು ವಚನಕಾರರು ನಮ್ಮ ನಾಡನ್ನು ಶ್ರೀಮಂತಗೊಳಿಸಿದ್ದಾರೆ ಎಂದರು.

ಗೋವಾದಲ್ಲಿ ಕನ್ನಡಿಗರ ಸಾಧನೆ ಮತ್ತು ಕೊಡುಗೆ ವಿಷಯಕ್ಕೆ ಸಂಬಂಧಿಸಿದಂತೆ ಗೋವಾ ಸರ್ಕಾರದ ನಿವೃತ್ತ ನಿರ್ದೇಶಕ ಸುರೇಶ್ ಶಾನಭಾಗ, ಹಾಗೂ ಮಪುಸ ಸೇಂಟ್ ಜೇವಿಯರ ಮಾಧ್ಯಮಿಕ ಶಾಲೆಯ ಪ್ರಾಧ್ಯಾಪಕ ಮಹಾಬಲ ಭಟ್ ವಿಷಯ ಮಂಡಿಸಿದರು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಗಣ್ಯರಿಂದ ಕನ್ನಡ ಜ್ಯೋತಿ ಬೆಳಗಿಸಲಾಯಿತು.

ಗೋವಾ ಕನ್ನಡ ಸಮಾಜದ ಅಧ್ಯಕ್ಷ ಅರುಣ್ ಕುಮಾರ್ ಕಾರ್ಯಕ್ರಮಕ್ಕೆ ಸ್ವಾಗತ ಕೋರಿ ಪ್ರಾಸ್ತಾವಿಕ ಮಾತನಾಡಿದರು, ಕನ್ನಡ ಸಮಾಜದ ಸದಸ್ಯ ಚಿನ್ಮಯ ಎಂ ಸಿ ರವರು ಕಾರ್ಯಕ್ರಮ ನಿರೂಪಿಸಿದರು, ಗೋವಾ ಕನ್ನಡ ಸಮಾಜದ ಕಾರ್ಯದರ್ಶಿ ಶ್ರೀಕಾಂತ್ ಲೋಣಿ ಕೊನೆಯಲ್ಲಿ ವಂದನಾರ್ಪಣೆಗೈದರು. ಸಭಾ ಕಾರ್ಯಕ್ರಮದ ನಂತರ ಗೋವಾದ ಕನ್ನಡಿಗರಿಂದ ಹಾಗೂ ಚಿನ್ನದಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮಕ್ಕೆ ಗೋವಾದ ವಿವಿಧಡೆಯಿಂದ ಕನ್ನಡಿಗರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಸಮುದಾಯದ ಸರ್ವಾಂಗೀಣ ಅಭಿವೃದ್ಧಿಗೆ ಸದಸ್ಯರ ಪಾತ್ರವೇ ನಿರ್ಣಾಯಕ

ಹೆಗ್ಗಡೆ ಸೇವಾಸಂಘದ 62ನೇ ವಾರ್ಷಿಕ ಮಹಾಸಭೆಯಲ್ಲಿ ಮನೋಜ್ ಹೆಗ್ಡೆ ಥಾಣೆ

ಮುಂಬಯಿ, ನ.1: ಸಮುದಾಯದ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಪ್ರತಿಯೊಬ್ಬ ಸದಸ್ಯರ ಪಾತ್ರವೂ ಮಹತ್ವದ್ದು. ಸಂಘದ ಪ್ರತಿಯೊಂದು ಹೆಜ್ಜೆಯೂ ಜನಪರ ಕಲ್ಯಾಣ ಕಾರ್ಯಗಳಿಗೆ ಮೀಸಲಾಗಿದ್ದು, ಎಲ್ಲರ ಒಮ್ಮತದ ಸಹಕಾರದಿಂದ ಸಂಘಟನೆ ಸಾಕಾರಗೊಳಿಸಲು ಸಾಧ್ಯವಾಗಿದೆ. ಸದಸ್ಯರ ಸಾಮೂಹಿಕ ಪ್ರಯತ್ನ, ನಿಸ್ವಾರ್ಥ ಶ್ರಮದಿಂದ ಸದೃಢ ಮತ್ತು ಆರೋಗ್ಯಕರ ಸಮಾಜದ ನಿರ್ಮಿಸಲೂ ಸಾಧ್ಯವಾಗುತ್ತಿದೆ. ಪ್ರತಿಯೊಬ್ಬ ಸದಸ್ಯರ ಹೃದಯ ವೈಶಾಲ್ಯತೆ ಮತ್ತು ಸಮಾಜದ ಬಗೆಗಿನ ಕಳಕಳಿಯೇ ನಮ್ಮೆಲ್ಲಾ ಯೋಜನೆಗಳ ಯಶಸ್ಸಿಗೆ ಶ್ರೀರಕ್ಷೆಯಾಗಿದ್ದು, ನಮ್ಮ ಜಾತಿಯ ಮಕ್ಕಳು ಅಂತರ್ಜಾತಿ ವಿವಾಹದತ್ತ ಹೋಗದೆ ಸ್ವಾಭಿಮಾನ ಮೆರೆದು ತಮ್ಮ ಒಗ್ಗಟ್ಟು ಮತ್ತು ಸೇವಾ ಪರಂಪರೆ ಮುಂದುವರಿಸಿ, ಸದೃಢ ಸಮಾಜ ನಿರ್ಮಾಣಕ್ಕೆ ಮಾದರಿಯಾಗಬೇಕು ಎಂದು ಹೆಗ್ಗಡೆ ಸೇವಾ ಸಂಘ ಮುಂಬಯಿ ಅಧ್ಯಕ್ಷ ಮನೋಜ್ ಹೆಗ್ಡೆ ಥಾಣೆ ತಿಳಿಸಿದರು.



ಇಂದಿಲ್ಲಿ ಭಾನುವಾರ ಪೂರ್ವಾಹನ ನವಿ ಮುಂಬಯಿ ಐರೋಲಿ ಇಲ್ಲಿನ ಹೆಗ್ಗಡೆ ಭವನದಲ್ಲಿ ಹೆಗ್ಗಡೆ ಸೇವಾ ಸಂಘ ಮುಂಬಯಿ ತನ್ನ 62ನೇ ವಾರ್ಷಿಕ ಮಹಾಸಭೆ ನಡೆಸಿದ್ದು ಸಭಾಧ್ಯಕ್ಷತೆ ವಹಿಸಿ ಮನೋಜ್ ಹೆಗ್ಡೆ ಥಾಣೆ ಮಾತನಾಡಿ ಸಂಸ್ಥೆಯ ಸ್ಥಾಪಕ ಅಧ್ಯಕ್ಷರಾದ ಸ್ವರ್ಗೀಯ ಮಾರ್ನಾಡು ರಾಘವ ಹೆಗ್ಡೆ ಮತ್ತು ಭವನದ ಕಟ್ಟಡ ನಿರ್ಮಾಣದ ಸಮಯದಲ್ಲಿ ಸಿಡ್ಕೋ ದಿಂದ ಪರವಾನಿಗೆ ತಂದು ಕೊಟ್ಟಂತಹ ದೇವದಾಸ್ ಹೆಗ್ಡೆ ಹಾಗೂ ಕಟ್ಟಡವನ್ನು ನಿರ್ಮಿಸುವಲ್ಲಿ ದಿನರಾತ್ರಿ ದುಡಿದಂತಹ ಪ್ರಭಾಕರ್ ಹೆಗ್ಡೆ ಅವರುಗಳ ಸೇವೆಯನ್ನೂ ಸೇವೆಯನ್ನು ಸ್ಮರಿಸಿ ಅಭಿವಂದಿಸುವೆನು. ಏಳ್ನಾಡುಗುತ್ತು ಶಿವಪ್ಪ ಹೆಗ್ಡೆ ಅವರ ಪ್ರತಿಮೆಯನ್ನು ನಿರ್ಮಿಸಿರುವುದು ನಮ್ಮ ಹೆಗ್ಗಡೆ ಸಮಾಜಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಕರೆಯಿತ್ತರು.ಸಂಘದ ಗೌರವಾಧ್ಯಕ್ಷ ಆನಂದ್ ಹೆಗ್ಡೆ, ಉಪಾಧ್ಯಕ್ಷ ಅರುಣ್ ಹೆಗ್ಡೆ, ಗೌ| ಪ್ರ| ಕಾರ್ಯದರ್ಶಿ ಸುರೇಂದ್ರನಾಥ್ ಹೆಗ್ಡೆ, ಗೌ| ಪ್ರ| ಕೋಶಾಧಿಕಾರಿ ಸಿ.ಎ| ಸುರೇಶ್ ಹೆಗ್ಡೆ, ಜೊತೆ ಕಾರ್ಯದರ್ಶಿ ರೂಪೇಶ್ ಹೆಗ್ಡೆ, ಜೊತೆ ಖಜಾಂಚಿ ಹರೀಶ್‌ಕುಮಾರ್ ಹೆಗ್ಡೆ ವೇದಿಕೆಯಲ್ಲಿ ಆಸೀನರಾಗಿದ್ದರು. ಮಹಿಳಾ ವಿಭಾಗದಧ್ಯಕ್ಷೆ ಛಾಯಾ ಹೆಗ್ಡೆ ನೂರಾನಿ, ಯುವ ವಿಭಾಗಧ್ಯಕ್ಷ ಸುನೀಲ್ ರಘುನಾಥ್ ಹೆಗ್ಡೆ, ಆಂತರಿಕ ಲೆಕ್ಕಪರಿಶೋಧಕ ಗಣೇಶ್ ಹೆಗ್ಡೆ ಥಾಣೆ ಪ್ರಧಾನವಾಗಿ ಹಾಜರಿದ್ದು ಮುಂದಿನ ಅವಧಿಗೆ ಹಾಲಿ ಪದಾಧಿಕಾರಿಗಳನ್ನೇ ಸಭೆಯು ಸೂಚಿಸಿ ಅನುಮೋದಿಸಿತು. ಅಂತೆಯೇ 2026–27ನೇ ಆರ್ಥಿಕ ಸಾಲಿಗೆ ಶಾಸನಬದ್ಧ ಲೆಕ್ಕಪರಿಶೋಧಕರನ್ನಾಗಿ ಗಣೇಶ್ ಹೆಗ್ಡೆ ಅವರನ್ನೇ ನೇಮಿಸಿತು. ಸುರೇಂದ್ರನಾಥ್ ಹೆಗ್ಡೆ ಅವರು ಗತ 61ನೇ ವಾರ್ಷಿಕಸಭೆಯ ವರದಿ ಸಭೆ ಮತ್ತು ಗತ ವಿಶೇಷ ಸಾಮಾನ್ಯ ಸಭೆಯ ವರದಿ ವಾಚಿಸಿದರು. ಸಿ.ಎ| ಸುರೇಶ್ ಹೆಗ್ಡೆ ಗತ ಸಾಲಿನ ಸಂಘದ ಸೇವಾ ಚಟುವಟಿಕೆಗಳ ಮಾಹಿತಿಯನ್ನಿತ್ತು ಕೊನೆಗೊಂಡ ಹಣಕಾಸು ವರ್ಷದ ಆದಾಯ–ವೆಚ್ಚ, ಆಯವ್ಯಯ ಪಟ್ಟಿ (ಬ್ಯಾಲೆನ್ಸ್ ಶೀಟ್) ಮತ್ತು ಲೆಕ್ಕಪರಿಶೋಧಕರ ವರದಿಯನ್ನು ಮಂಡಿಸಿದರು. ನಂತರ ಮುಂದಿನ ಹಣಕಾಸು ವರ್ಷದ ಮುಂಗಡಪತ್ರ (ಬಜೆಟ್) ಮಂಡಿಸಲಾಯಿತು. ಸಭಿಕ ಸದಸ್ಯರಲ್ಲಿನ ರವಿ ಹೆಗ್ಡೆ ಹೆರ್ಮುಂಡೆ, ಪ್ರಸನ್ನ ಹೆಗ್ಡೆ, ಚಂದ್ರಶೇಖರ್ ಹೆಗ್ಡೆ, ರತ್ನಾಕರ್ ಹೆಗ್ಡೆ, ಪ್ರಭಾಕರ್ ಹೆಗ್ಡೆ, ಅನಿಲ್ ಹೆಗ್ಡೆ ನೆರೂಳ್, ಅಶೋಕ್ ಹೆಗ್ಡೆ ಚೆಂಬೂರು, ಸಂತೋಷ್ ಹೆಗ್ಡೆ ಐರೋಲಿ ಮತ್ತಿತರ ಸದಸ್ಯರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿ ಸಲಹಿ ಸಂಘದ ಸೇವಾ ವೈಖರಿಯನ್ನು ಪ್ರಶಂಸಿಸಿ ಸಂಘವು ಮತ್ತಷ್ಟು ಉನ್ನತಿಯತ್ತ ಸಾಗಲಿ ಎಂದು ಹಾರೈಸಿದರು. ಕುಲದೇವರು ಶ್ರೀ ವೀರಮಾರುತಿ ಹನುಮಾನ್ ದೇವರಿಗೆ ಸ್ತುತಿಸಿ ಸಭೆ ಆದಿಗೊಳಿಸಲಾಯಿತು. ಗತ ಸಾಲಿನಲ್ಲಿ ಅಗಲಿದ ಸಂಘದ ಸದಸ್ಯರು, ಹಿತೈಷಿಗಳಿಗೆ ಮೌನಪ್ರಾರ್ಥನೆ ಯೊಂದಿಗೆ ಸಂತಾಪ ಸೂಚಿಸಲಾಯಿತು. ಲ| ಮುರಳೀಧರ್ ಹೆಗ್ಡೆ ಸ್ವಾಗತಿಸಿ ಸಭಾ ಕಲಾಪ ನಡೆಸಿ ಕೃತಜ್ಞತೆ ಸಲ್ಲಿದರು. ರಾಷ್ಟ್ರಗೀತೆಯೊಂದಿಗೆ ಮಹಾಸಭೆ ಸಮಾಪನ ಕಂಡಿತು.

ಆರೋಪಿ ಹೇಮಂತ್‌ಗೆ ಪೊಲೀಸರ ಗುಂಡೇಟು, ಪರಿಸ್ಥಿತಿ ಗಂಭೀರ!

ಅನಂತಪುರ,ನ.1: ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ರಾಪ್ತಾಡು ಜಿಲ್ಲಾ ಪರಿಷತ್ ಪ್ರೌಢಶಾಲೆಯಲ್ಲಿ 15 ವರ್ಷದ ಹತ್ತನೇ ತರಗತಿ ವಿದ್ಯಾರ್ಥಿನಿ ಮೇಲೆ ಚೈನ್ಸಾ ಯಂತ್ರದಿಂದ ದಾಳಿ ನಡೆಸಿದ್ದ 21 ವರ್ಷದ ಆರೋಪಿ ಹೇಮಂತ್ ಅಲಿಯಾಸ್ ದಮ್ಮು ಮೇಲೆ ಪೊಲೀಸರು ಗುಂಡಿನ ದಾಳಿ ನಡೆಸಿದ್ದಾರೆ.

ಭಾನುವಾರ ರಾತ್ರಿ ಪೊಲೀಸ್ ಕಸ್ಟಡಿಯಿಂದ ತಪ್ಪಿಸಿಕೊಳ್ಳಲು ಯತ್ನಿಸಿದ ವೇಳೆ ಈ ಘಟನೆ ನಡೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆರೋಪಿ ಹೇಮಂತ್‌ನನ್ನು ಭಾನುವಾರ ಸಂಜೆ ಜಿಲ್ಲೆಯ ಆತ್ಮಕೂರು ಅರಣ್ಯ ಪ್ರದೇಶದಲ್ಲಿ ವಿಶೇಷ ಪೊಲೀಸ್ ತಂಡ ಬಂಧಿಸಿತ್ತು.

ಬಳಿಕ ಕೃತ್ಯ ನಡೆದ ಸ್ಥಳದ ಮಹಜರು ಹಾಗೂ ಮರುಸೃಷ್ಟಿಗಾಗಿ ಆತನನ್ನು ರಾಪ್ತಾಡುಗೆ ಕರೆದೊಯ್ಯಲಾಗುತ್ತಿತ್ತು. ಈ ವೇಳೆ ಪೊಲೀಸರಿಂದ ತಪ್ಪಿಸಿಕೊಳ್ಳಲು ಯತ್ನಿಸಿದ ಆರೋಪಿ, ತನ್ನನ್ನು ಕರೆದೊಯ್ಯುತ್ತಿದ್ದ ಸಿಬ್ಬಂದಿ ಮೇಲೆ ಕಲ್ಲು ತೂರಾಟ ನಡೆಸಿದ್ದಾನೆ ಎಂದು ಅನಂತಪುರ ಪೊಲೀಸ್ ಕೇಂದ್ರ ಕಚೇರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಆರು ಸುತ್ತು ಗುಂಡು, ಆರೋಪಿ ಪರಿಸ್ಥಿತಿ ಗಂಭೀರ

ಆರೋಪಿಯನ್ನು ನಿಯಂತ್ರಣಕ್ಕೆ ತರಲು ಪೊಲೀಸರು ಪ್ರಯತ್ನಿಸಿದಾಗ ಆತ ಕಲ್ಲು ತೂರಾಟ ನಡೆಸಿದ್ದಾನೆ. ಈ ವೇಳೆ ಹಲವು ಪೊಲೀಸ್ ಸಿಬ್ಬಂದಿಗೂ ಗಾಯಗಳಾಗಿವೆ ಎಂದು ಅಧಿಕಾರಿ ಹೇಳಿದ್ದಾರೆ.

ಆರೋಪಿ ತಪ್ಪಿಸಿಕೊಳ್ಳುವುದನ್ನು ತಡೆಯಲು ಮತ್ತು ಆತನನ್ನು ನಿಯಂತ್ರಣಕ್ಕೆ ತರಲು ಪೊಲೀಸರು ಆತ್ಮರಕ್ಷಣೆಗಾಗಿ ಗುಂಡಿನ ದಾಳಿ ನಡೆಸಿದ್ದಾರೆ. ಒಟ್ಟು ಆರು ಸುತ್ತು ಗುಂಡು ಹಾರಿಸಲಾಗಿದ್ದು, ಹೇಮಂತ್ ಗಂಭೀರವಾಗಿ ಗಾಯಗೊಂಡಿದ್ದಾನೆ.

ತಕ್ಷಣ ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಸದ್ಯ ಆತನ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅರೆಪ್ರಜ್ಞಾವಸ್ಥೆಯಲ್ಲಿದ್ದ ಹೇಮಂತ್‌ನನ್ನು ಪೊಲೀಸರು ಆಸ್ಪತ್ರೆಗೆ ಹೊತ್ತೊಯ್ಯುತ್ತಿರುವ ವಿಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

ಮುಂಬಯಿ; ಕೊಂಕಣ್ ಅಸೋಸಿಯೇಶನ್ ಚಾರಿಟೇಬಲ್ ಟ್ರಸ್ಟ್‌ನಿಂದ ಸಂತಾಪ ಸಭೆ

ಬೆನೆಡಿಕ್ಟಾ ರೆಬೆಲ್ಲೊ ಸತ್ಕಾರ್ಯಗಳು ಆದರ್ಶಪ್ರಾಯ: ಫಾ|ಎಲಿಯಾಸ್ ಡಿಸೋಜಾ

ಮುಂಬಯಿ, ನ.1: ಕರ್ಮಭೂಮಿಯಲ್ಲಿನ ವಿವಿಧ ಸಾಮಾಜಿಕ, ಶಿಕ್ಷಣ ಮತ್ತು ಬ್ಯಾಂಕಿಂಗ್ ಕ್ಷೇತ್ರಗಳಲ್ಲಿ ತಮ್ಮದೇ ಆದ ವಿಶಿಷ್ಟ ಮುದ್ರೆಯೊತ್ತಿ, ಸಮಾಜದ ಸರ್ವತೋಮುಖ ಪ್ರಗತಿಗೆ ನಿರಂತರ ಶ್ರಮಿಸಿದ ಬೆನ್ನಿಬಾಯಿ ಪ್ರಸಿದ್ಧಿಯ ಅಗಲುವಿಕೆ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ. ಸರಳ,ಸಜ್ಜನ, ಮೃದು ಸ್ವಾಭಾವದ ನಿಪುಣ ಸಂಘಟಕಿಯಾಗಿ ಸಂಸ್ಥೆಗಳಲ್ಲಿ ಅನುಪಮ ಸೇವೆ ಸಲ್ಲಿಸಿ ಯಶಸ್ವಿಯಾಗಿ ಮುನ್ನಡೆಸಿದ ಇವರು, ಕೊಂಕಣಿ, ತುಳು ಹಾಗೂ ಕನ್ನಡ ಭಾಷೆಗಳ ಪೋಷಣೆ ಮತ್ತು ಬೆಳವಣಿಗೆಗೆ ಸಲ್ಲಿಸಿದ ಅಪ್ರತಿಮ ಸೇವೆ ಎಂದೆಂದಿಗೂ ಸ್ಮರಣೀಯ ಎಂದು ಧರ್ಮಗುರು ರೆ| ಫಾ| ಎಲಿಯಾಸ್ ಡಿಸೋಜಾ (ಕಿನ್ನಿಗೋಳಿ) ತಿಳಿಸಿದರು.



ಕಾರ್ಕಳ ಮಿಯಾರ್ ಮೂಲತಃ ಪ್ರಶಸ್ತಿ ಪುರಸ್ಕೃತ ಶಿಕ್ಷಕಿ, ಸಮಾಜ ಸೇವಕಿಯಾಗಿದ್ದು ಮಹಾರಾಷ್ಟ್ರ ಕೊಂಕಣ್ ಅಸೋಸಿಯೇಶನ್‌ನ (ಕೊಂಕಣ್ ಅಸೋಸಿಯೇಶನ್ ಚಾರಿಟೇಬಲ್ ಟ್ರಸ್ಟ್–ಕೆಎಸಿಟಿ) ಸ್ಥಾಪಕ ಅಧ್ಯಕ್ಷೆ, ಮಾಡೆಲ್ ಕೋ.ಆಪರೇಟಿವ್ ಬ್ಯಾಂಕ್‌ನ ಮಾಜಿ ನಿರ್ದೇಶಕಿ, ಮೆಂಗ್ಳೂರಿಯನ್ ವೆಲ್ಫೇರ್ ಅಸೋಸಿಯೇಶನ್ ಮುಂಬಯಿ, ಕೊಂಕಣಿ ಸಭಾ ಮುಲುಂಡ್, ಪಾಸ್ಕ್ ಮತ್ತು ಕೊಂಕಣಿ ಭಾಷಾ ಮಂಡಳ್ ಸೇರಿದಂತೆ ಹತ್ತು ಹಲವಾರು ಸಂಘ–ಸಂಸ್ಥೆಗಳಲ್ಲಿ ಸಕ್ರೀಯರಾಗಿದ್ದು ಸಾಮಾಜಿಕ ಚಿಂತಕರೆನಿಸಿ, ದಕ್ಷ ಸಂಘಟಕರಾಗಿದ್ದು ಕೊಂಕಣಿ, ತುಳು–ಕನ್ನಡದ ಮೂಲಕ ಸರ್ವೋನ್ನತ ಸೇವೆಗೈದು ಇತ್ತೀಚೆಗೆ ಅಗಲಿದ ಧೀಮಂತ ಚೇತನ ಬೆನೆಡಿಕ್ಟಾ ರೆಬೆಲ್ಲೊ ಅವರಿಗೆ ಆಯೋಜಿಸಿದ ಸಂತಾಪ ಸಭೆಯಲ್ಲಿ ಅನುಗ್ರಹನುಡಿಗಳನ್ನಾಡಿ ಫಾ| ಎಲಿಯಾಸ್ ಎಂದೇಳಿ ಬಾಷ್ಪಾಂಜಲಿ ಅರ್ಪಿಸಿದರು.

ಆದಿಯಲ್ಲಿ ಸೈಂಟ್ ಜೂಡ್ ಚರ್ಚ್‌ನಲ್ಲಿ ಇಲ್ಲಿನ ಧರ್ಮಗುರು ರೆ| ಫಾ| ಜೋನ್ ಬ್ರಿಟ್ಟೊ ಮತ್ತು ಡೀಕಾನ್ ಜೋನ್ ಸೆರಾವೋ ಆರಂಭದಲ್ಲಿ ಅಗಲಿದ ದಿವ್ಯಾತ್ಮಕ್ಕೆ ಬಲಿಪೂಜೆಯನ್ನು ನೆರವೇರಿಸಿ ಪ್ರಾರ್ಥನೆಗೈದರು.

ಭಾಷಿಕ ಮತ್ತು ಸಾಂಸ್ಕೃತಿಕ ಗಡಿಗಳನ್ನು ಮೀರಿ, ಸೌಹಾರ್ದಯುತ ಸಮಾಜ ನಿರ್ಮಾಣಕ್ಕಾಗಿ ಅವರು ತಳೆದ ಬದ್ಧತೆ ಪ್ರತಿಯೊಬ್ಬರ ಮನದಲ್ಲೂ ಹಸಿರಾಗಿ ಉಳಿಯಲಿದೆ. ಅವರ ಮುಂದಾಳುತ್ವ ಗುಣ ಮತ್ತು ವೈಚಾರಿಕ ನಿಲುವುಗಳು ಮುಂಬರುವ ಪೀಳಿಗೆಗೆ ಪ್ರೇರಣೆಯಾಗಿವೆ ಎಂದು ಹಿರಿಯ ರಂಗನಟ ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ ತಿಳಿಸಿದರು.

ದಿವೋ ಕೊಂಕಣಿ ಸಾಪ್ತಾಹಿಕದ ಸಂಪಾದಕ ಲಾರೆನ್ಸ್ ಕುವೆಲ್ಹೋ ಮಾತನಾಡಿ ಕೊಂಕಣಿ ಸಮಾಜಕ್ಕೆ ದಿವಂಗತರ ಕೊಡುಗೆ ಅನನ್ಯ. ಸದಾ ಸಮಾಜದ ಒಳಿತಿಗಾಗಿ ಚಿಂತಿಸುತ್ತಾ, ಎಲ್ಲರನ್ನು ಒಗ್ಗೂಡಿಸಿ ಕೊಂಡೊಯ್ಯುತ್ತಿದ್ದ ಅವರ ಸೇವಾ ಮನೋಭಾವವು ನಿಷ್ಕಲಂಕವಾಗಿದೆ. ನಮ್ಮ ಪತ್ರಿಕೆಯ ಬಲುದೊಡ್ಡ ಹಿತೈಷಿಯಾಗಿ ಸಹಕರಿಸಿರುವರು ಎಂದೇಳಿ ಶ್ರದ್ಧಾಂಜಲಿ ಅರ್ಪಿಸಿದರು.

ಕೆಎಸಿಟಿ ಅಧ್ಯಕ್ಷ ಲಿಯೋ ಫೆರ್ನಾಂಡಿಸ್ ಜೆರಿಮೆರಿ ಅವರು ಬೆನೆಡಿಕ್ಟಾ ರೆಬೆಲ್ಲೊ ಅವರ ಸೇವಾ ಸಾಧನೆಯನ್ನು ಮೆಚ್ಚುಗೆ ಪಡಿಸಿ ಗುಣಗಾನಗೈದ, ನಾವು ಸಲ್ಲಿಸುವ ಈ ನುಡಿನಮನ ಅವರ ಸತ್ಕಾರ್ಯಗಳು ಮತ್ತು ಆದರ್ಶಪ್ರಾಯ ಜೀವನಕ್ಕೆ ಸಲ್ಲಿಸುವ ಅನಂತ ಪ್ರಣಾಮಗಳು. ಅವರ ಉದಾರತ್ವದಿಂದ ಸ್ಥಾಪನೆಗೊಂಡ ಈ ಸಂಸ್ಥೆ ಇಂದು ಜನಪರ ಸೇವೆಯಲ್ಲಿ ತೊಡಗಿದೆ. ಇಂತಹ ನಿಸ್ವಾರ್ಥ ಸೇವೆ ಅವರ ಕೊಡುಗೆಗೆ ಸಂದ ಗೌರವವಾಗಿದೆ. ಅವರ ಸಹೃದಯತೆ, ಸಾಮರಸ್ಯದ ದ್ಯೋತಕವಾಗಿದೆ ಎಂದು ತನ್ನ ಮನದಾಳದ ಅನುಭವ ಭಿತ್ತರಿಸಿ ಸಾರ್ವಜನಿಕವಾಗಿ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸಿದರು.

ಕೊಂಕಣಿ ಕಾರ್ಯಕ್ರಮಗಳಲ್ಲಿ ತುಂಬಾ ಸಕ್ರಿಯವಾಗಿದ್ದ ಬೆನ್ನಿ ಬಾಯ್ ನಾಮಂಕಿತರು ಓರ್ವ ಶಿಕ್ಷಕರಾಗಿ ಸಾವಿರಾರು ಜನರ ಭವಿಷ್ಯ ಉಜ್ವಲಗೊಳಿಸಿದವರು. ಅವರ ದಾಂಪತ್ಯ ಬದುಕು, ಅನ್ಯೋನ್ಯತಾಭಾವ ಪ್ರಸ್ತುತ ಯುವ ಜನತೆಗೆ ಆದರ್ಶವಾಗಿದೆ. ಅನೇಕರ ಭವಿಷ್ಯವನ್ನು ರೂಪಿಸಿದ ಹಿರಿಯಮ್ಮನ ಆಗಲುವಿಕೆ ಬೇಸರ ತಂದಿದೆ ಎಂದು ಫ್ಲೋರಾ ಡಿಸೋಜಾ ಕಲ್ಮಾಡಿ (ಜೆರಿಮೆರಿ) ತಿಳಿಸಿದರು.

ಮಿಲಿಯಂ ಡಿಸೋಜಾ ವಕೋಲಾ, ರೋನ್ಸ್ ಬಂಟ್ವಾಳ್, ಡೊರಾ ರೇಗೋ ಅಂಬೋಲಿ, ಜೋಯ್ ಡಿಸೋಜಾ ಪೊವಾಯಿ ಮತ್ತಿತರರೂ ಮಾತನಾಡಿ ಸಂತಾಪ ಸೂಚಿಸಿ ಶ್ರದ್ಧಾಂಜಲಿ ಕೋರಿದರು.

ಈ ಸಂದರ್ಭದಲ್ಲಿ ಜೆಸ್ಸಿ ಡಿಸಿಲ್ವಾ ಮಹಾಕಾಳಿ, ಡಾಯನ್ ಡಿಸೋಜಾ ವಿರಾರ್, ಡೇವಿಡ್ ಕ್ಯಾಸ್ತೆಲಿನೋ ವಿರಾರ್, ಕ್ಲೋಡಿ ಫ್ರಾನ್ಸಿಸ್ ಮೊಂತೆರೋ, ಪೌಲ್ ಮಸ್ಕರ್ಹೇನಸ್, ಜೋನ್ ಮಸ್ಕರ್ಹೇನಸ್ ಜೆರಿಮೆರಿ, ಜಯವೀರಾ ಸಿ. ಮೊಂತೆರೋ, ಸುಜಾನ್ಹಾ ಕುಮೆಲ್ಲೊ, ಕೆಎಸಿಟಿ ಉಪಾಧ್ಯಕ್ಷ ವಾಲ್ಟರ್ ಡಿಸೋಜಾ ಕಲ್ಮಾಡಿ, ಕಾರ್ಯಕಾರಿ ಸಮಿತಿ ಸದಸ್ಯರಾದ ಬಿ.ಸಿ ಆಳ್ವ, ವಿನ್ಸೆಂಟ್ ಕಾಸ್ತೆಲಿನೋ, ಲಿಲ್ಲಿ ಲಿಯೋ ಫೆರ್ನಾಂಡಿಸ್, ಜೋನ್ ರೋಡ್ರಿಗಸ್, ಎಲಿಯಾಸ್ ಪಿಂಟೊ ಸೇರಿದಂತೆ ಮಹಾನಗರದಲ್ಲಿನ ವಿವಿಧ ಸಂಘ–ಸಂಸ್ಥೆಗಳ ಮುಖ್ಯಸ್ಥರು, ಪದಾಧಿಕಾರಿಗಳು, ಸದಸ್ಯರನೇಕರು ಹಾಜರಿದ್ದು ಮೃತರ ಭಾವಚಿತ್ರಕ್ಕೆ ಪುಷ್ಪವೃಷ್ಟಿಗೈದು ಚರಮಾಂಜಲಿಗೈದರು.





ನ.5ರಿಂದ ಸರ್ಕಾರಿ ಬಸ್ ಪ್ರಯಾಣ ದರ ಏರಿಕೆ: ಸಚಿವ ಬೈರತಿ ಸುರೇಶ್ ಘೋಷಣೆ

ಬೆಂಗಳೂರು ನ. 1: ಈ ತಿಂಗಳ 5 ರಿಂದ ಸರ್ಕಾರಿ ಸ್ವಾಮ್ಯದ ಸಾರಿಗೆ ಬಸ್‌ಗಳ ಪ್ರಯಾಣ ದರ ಹೆಚ್ಚಳ ವಾಗಲಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರದಲ್ಲಿ ಭಾನುವಾರ ಮಾಧ್ಯಮ ಪ್ರತಿನಿಧಿಗಳ ಜೊತೆ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ಒಂದು ವರ್ಷದಲ್ಲಿ 5 ಬಾರಿ ಡೀಸೆಲ್ ಬೆಲೆ ಏರಿಕೆ ಮಾಡಿದೆ. ಇದರಿಂದ ನಮ್ಮ ನಾಲ್ಕೂ ಸಾರಿಗೆ ನಿಗಮಗಳಿಗೆ ವಾರ್ಷಿಕ 2 ಸಾವಿರ ಕೋಟಿ ರೂಪಾಯಿ ನಷ್ಟ ಆಗುತ್ತಿದೆ. ಈಗಾಗಲೇ ಸಂಸ್ಥೆಗಳು 9 ಸಾವಿರ ಕೋಟಿ ರೂಪಾಯಿ ನಷ್ಟದಲ್ಲಿವೆ ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ಬಸ್ ಪ್ರಯಾಣ ದರ ಏರಿಕೆ ಮಾಡುವುದು ಅನಿವಾರ್ಯ ಆಗಿದೆ ಎಂದರು. ಇತ್ತೀಚೆಗೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆ ನಡೆಸಲಾಗಿದ್ದು, ದರ ಏರಿಕೆ ನಿರ್ಧಾರವನ್ನು ಕೈಗೊಳ್ಳುವ ಜವಾಬ್ದಾರಿಯನ್ನು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಮತ್ತು ಸಂಪುಟ ಸಾರಿಗೆ ಇಲಾಖೆಗೆ ನೀಡಿದೆ ಎಂದರು.

4 ರಂದು ನಿರ್ಧಾರ : ಈ ಹಿನ್ನೆಲೆಯಲ್ಲಿ ನವೆಂಬರ್ 4 ರಂದು ಇಲಾಖೆ ಮತ್ತು ಸಾರಿಗೆ ನಿಗಮಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಬೇಕೆಂದು ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಮತ್ತು ನವೆಂಬರ್ 5



ರಿಂದ ಹೊಸ ಪ್ರಯಾಣ ದರ ಜಾರಿಗೆ ಬರಲಿದೆ ಎಂದರು.

ಸುಧಾಕರ್‌ಗೆ ತಿರುಗೇಟು:

ಬಸ್ ಪ್ರಯಾಣ ದರ ಏರಿಕೆ ಮಾಡುವ ಬಗ್ಗೆ ಸಂಸದ ಡಾ. ಸುಧಾಕರ್ ಅವರು ಮಾಡಿರುವ ಟೀಕೆಗೆ ಸಚಿವ ಬೈರತಿ ಸುರೇಶ್ ತಿರುಗೇಟು ನೀಡಿದರು. ಇತರ ರಾಜ್ಯಗಳಿಗೆ ಹೋಲಿಸಿದರೆ ನಮ್ಮಲ್ಲಿ ಪ್ರಯಾಣ ದರ ಕಡಿಮೆ ಇದೆ. ಸುಧಾಕರ್ ಅವರು ಕಣ್ಣಿಗೆ ಬಟ್ಟೆ ಕಟ್ಟಿ ಮಾತ ನಾಡುವ ಬದಲು ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ಪ್ರಯಾಣ ದರ ಎಷ್ಟಿದೆ ಎಂಬುದನ್ನು ಗಮನಿಸಲಿ. ಹಾಗಾದರೆ ನಷ್ಟದಲ್ಲಿರುವ ಸಾರಿಗೆ ಸಂಸ್ಥೆಗಳನ್ನು ಮುಚ್ಚಬೇಕಾ ಎಂದು ಕಿಡಿಕಾರಿದರು.

ಬಿಜೆಪಿಗೆ ರೈತರಿಂದಲೇ ಪಾಠ : ಹಾಲಿನ ದರವನ್ನು ಹೆಚ್ಚಲು ಮಾಡಿರುವ ಬಗ್ಗೆ ಬಿಜೆಪಿಯವರು ಪ್ರತಿಭಟನೆ ಮಾಡಲಿ. ನಮ್ಮ ಸರ್ಕಾರ ಸಾಕಷ್ಟದಲ್ಲಿರುವ ರೈತರಿಗೆ ನೆರವಾಗಬೇಕೆಂಬ ಉದ್ದೇಶದಿಂದ ಹಾಲಿನ ದರವನ್ನು ಹೆಚ್ಚಿಸಿದೆ ಎಂದರು. ಆದರೆ, ಬಿಜೆಪಿಯವರು ರೈತ ವಿರೋಧಿ ಧೋರಣೆ ಹೊಂದಿದ್ದಾರೆ. ಅವರಿಗೆ ಚುನಾವಣೆಯಲ್ಲಿ ರೈತರೇ ಪಾಠ ಕಲಿಸಲಿದ್ದಾರೆ ಎಂದು ಬೈರತಿ ಸುರೇಶ್ ಎಚ್ಚರಿಸಿದರು. ಹೆಚ್ಚಿಸಿರುವ 8 ರೂಪಾಯಿ ದರದಲ್ಲಿ 7 ರೂಪಾಯಿಯನ್ನು ರೈತರಿಗೆ ನೀಡಲಾಗುತ್ತದೆ ಎಂದೂ ಅವರು ಸ್ಪಷ್ಟಪಡಿಸಿದರು.

ಡೀಸೆಲ್ ಬೆಲೆ ಏರಿಕೆಯಿಂದ ಸಾರಿಗೆ ನಿಗಮಗಳಿಗೆ ವಾರ್ಷಿಕ 2,000 ಕೋಟಿ ರೂ. ನಷ್ಟ. ಬಸ್ ಪ್ರಯಾಣ ದರ ಹೆಚ್ಚಳ ಅನಿವಾರ್ಯ, ಸಾರಿಗೆ ಸಚಿವರಿಂದ ಸ್ಪಷ್ಟನೆ.

ವಿದ್ಯುತ್ ವಹಿವಾಟಿಗೆ ಪಾರದರ್ಶಕ, ವೇಗದ ಡಿಜಿಟಲ್ ವ್ಯವಸ್ಥೆಗೆ ಚಾಲನೆ: ಜಾರ್ಜ್

ಬೆಂಗಳೂರು, ನ. 1: ಕರ್ನಾಟಕದ ವಿದ್ಯುತ್ ವಲಯದ ವಹಿವಾಟುಗಳನ್ನು ಮತ್ತಷ್ಟು ಪಾರದರ್ಶಕ, ಹೊಣೆಗಾರಿಕೆ ಯುತ, ನಿಖರ ಮತ್ತು ವೇಗಗೊಳಿಸುವ ಉದ್ದೇಶದಿಂದ KPTCL-GTD (Generation, Transmission and Distribution) ಸಮಗ್ರ ಡಿಜಿಟಲ್ ವೇದಿಕೆಯನ್ನು ಅನುಷ್ಠಾನ ಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

'ಸಚಿವ ಕೆ.ಜೆ. ಜಾರ್ಜ್ ಅವರ ನಿರ್ದೇಶನದಂತೆ, ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ. ವಿ. ರಾಮ್ ಪ್ರಸಾತ್ ಮನೋಹರ್, ಐಎಎಸ್ ಅವರು ಏಕಿಖಿಅಐ–ಉಖಿಊ ಯೋಜನೆಯ ಅನುಷ್ಠಾನಕ್ಕೆ ಅಗತ್ಯ ಕಾರ್ಯಗಳನ್ನು ಆರಂಭಿಸಿದ್ದು, ಸಂಬಂಧಿತ ವಿಭಾಗಗಳು ಹಾಗೂ ಸಂಸ್ಥೆಗಳ ನಡುವಿನ ದತ್ತಾಂಶ ಮತ್ತು ಪ್ರಕ್ರಿಯೆಗಳ ಏಕೀಕರಣಕ್ಕೆ ಕ್ರಮ ಕೈಗೊಂಡಿದ್ದಾರೆ. ವಿದ್ಯುತ್ ಉತ್ಪಾದನಾ ಸಂಸ್ಥೆಗಳು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್), ವಿದ್ಯುತ್ ಸರಬರಾಜು ಕಂಪನಿಗಳು (ESCOMs) ಹಾಗೂ ಇತರೆ ಸಂಬಂಧಿತ ಸಂಸ್ಥೆಗಳ ನಡುವಿನ ಪ್ರಮುಖ ವಹಿವಾಟುಗಳನ್ನು ಒಂದೇ ಕೇಂದ್ರೀಕೃತ ಡಿಜಿಟಲ್ ವೇದಿಕೆಯಲ್ಲಿ ಜೋಡಿಸುವುದು ಯೋಜನೆಯ ಪ್ರಮುಖ ಉದ್ದೇಶ ವಾಗಿದೆ. ಈವರೆಗೆ ವಿವಿಧ ಹಂತಗಳಲ್ಲಿ ಪ್ರತ್ಯೇಕವಾಗಿ ಹಾಗೂ ಹಸ್ತಚಾಲಿತವಾಗಿ ನಡೆಯುತ್ತಿದ್ದ ವಿದ್ಯುತ್ ಖರೀದಿ–ಮಾರಾಟ, ಬಿಲ್ಲಿಂಗ್, ಇಂಧನ ಸಮನ್ವಯ, ಬ್ಯಾಂಕಿಂಗ್, ಓಪನ್ ಆಕ್ಸೆಸ್ ಮತ್ತು ಹಣಕಾಸು ಇತ್ಯರ್ಥ ಪ್ರಕ್ರಿಯೆಗಳನ್ನು ಡಿಜಿಟಲ್ ಹಾಗೂ ಸ್ವಯಂಚಾಲಿತಗೊಳಿಸಲಾಗುತ್ತದೆ. ಇದರಿಂದ ಮಾನವ ಹಸ್ತಕ್ಷೇಪ ಕಡಿಮೆಯಾಗುವುದರ ಜೊತೆಗೆ, ವಹಿವಾಟಿನಲ್ಲಿ ಪಾರದರ್ಶಕತೆ, ನಿಖರತೆ, ಹೊಣೆಗಾರಿಕೆ ಹಾಗೂ ವೇಗ ಹೆಚ್ಚಲಿದೆ.

ಉತ್ಪಾದಕರಿಂದ ಖರೀದಿದಾರರವರೆಗೆ ಒಂದೇ ವ್ಯವಸ್ಥೆ: KPTCL-GTD ಮೂಲಕ ವಿದ್ಯುತ್ ಉತ್ಪಾದಕರು, ವಿದ್ಯುತ್ ಖರೀದಿದಾರರು, ಪ್ರಸರಣ ಸಂಸ್ಥೆಗಳು ಹಾಗೂ ವಿದ್ಯುತ್ ಸರಬರಾಜು ಕಂಪನಿಗಳು ಒಂದೇ ಡಿಜಿಟಲ್ ವ್ಯವಸ್ಥೆಯಡಿ ಅಗತ್ಯ ದತ್ತಾಂಶ ಮತ್ತು ವಹಿವಾಟುಗಳನ್ನು ನಿರ್ವಹಿಸಲು ಸಾಧ್ಯವಾಗಲಿದೆ.

ಯಾರು ಎಷ್ಟು ವಿದ್ಯುತ್ ಉತ್ಪಾದಿಸಿದ್ದಾರೆ, ಎಷ್ಟು ವಿದ್ಯುತ್ ಪ್ರಸರಣಗೊಂಡಿದೆ, ಎಷ್ಟು ಬಳಕೆಯಾಗಿದೆ ಹಾಗೂ ಅದಕ್ಕೆ ಸಂಬಂಧಿಸಿದ ಬಿಲ್ಲಿಂಗ್ ಮತ್ತು ಹಣಕಾಸು ಇತ್ಯರ್ಥದ ಸ್ಥಿತಿ ಏನು ಎಂಬ ಮಾಹಿತಿಯನ್ನು ಹೆಚ್ಚು ನಿಖರವಾಗಿ ನಿರ್ವಹಿಸಲು Energy Reconciliation ವ್ಯವಸ್ಥೆ ನೆರವಾಗಲಿದೆ.

ಮೀಟರ್‌ಗಳಿಂದ ನೇರವಾಗಿ ದತ್ತಾಂಶ ಪಡೆಯುವ Meter Reading Interface (MRI), 15 ನಿಮಿಷಗಳ ಬ್ಲಾಕ್ ಮಟ್ಟದ ದತ್ತಾಂಶ ಹಾಗೂ ಇಂಟರ್‌ಫೇಸ್ ಪಾಯಿಂಟ್ ಮಾಹಿತಿಯನ್ನು ವ್ಯವಸ್ಥೆ ಯೊಂದಿಗೆ ಜೋಡಿಸುವ ಮೂಲಕ ಹಸ್ತಚಾಲಿತ



ದತ್ತಾಂಶ ನಮೂದು ಮತ್ತು ಲೆಕ್ಕಾಚಾರದ ಅವಲಂಬನೆಯನ್ನು ಕಡಿಮೆ ಮಾಡಲಾಗುತ್ತದೆ.

ರಿಯಲ್‌ಟೈಮ್ ಮಾಹಿತಿ, ವೇಗದ ಇತ್ಯರ್ಥ: ಸುಧಾರಿತ ತಂತ್ರಜ್ಞಾನ ಮತ್ತು ಡ್ಯಾಶ್‌ಬೋರ್ಡ್ ವ್ಯವಸ್ಥೆಯ ಮೂಲಕ ವಿದ್ಯುತ್ ವಹಿವಾಟು, ಬಿಲ್ಲಿಂಗ್, ಇಂಧನ ಸಮನ್ವಯ ಹಾಗೂ ಹಣಕಾಸು ಇತ್ಯರ್ಥಕ್ಕೆ ಸಂಬಂಧಿಸಿದ ಮಾಹಿತಿಯನ್ನು ರಿಯಲ್‌ಟೈಮ್‌ನಲ್ಲಿ ವೀಕ್ಷಿಸಲು ಮತ್ತು ಮೇಲ್ವಿಚಾರಣೆ ಮಾಡಲು ಅವಕಾಶ ಕಲ್ಪಿಸಲಾಗುತ್ತದೆ.

ಇದರಿಂದ ಬಿಲ್ಲಿಂಗ್ ವ್ಯತ್ಯಾಸ, ಲೆಕ್ಕಪತ್ರ ಹೊಂದಾಣಿಕೆಯ ವಿಳಂಬ ಹಾಗೂ ದತ್ತಾಂಶದಲ್ಲಿನ ಅಸಂಗತತೆಗಳನ್ನು ಕಡಿಮೆ ಮಾಡಿ, ವಹಿವಾಟು ಮತ್ತು ಹಣಕಾಸು ಇತ್ಯರ್ಥವನ್ನು ಮತ್ತಷ್ಟು ತ್ವರಿತಗೊಳಿಸಲು ಸಾಧ್ಯವಾಗಲಿದೆ. ಕೇಂದ್ರ ಸರ್ಕಾರದ PRAAPTI Portal, NOAR Portal ಸೇರಿದಂತೆ ಸಂಬಂಧಿತ ಡಿಜಿಟಲ್ ವ್ಯವಸ್ಥೆ ಗಳೊಂದಿಗೆ ಅಗತ್ಯ ಏಕೀಕರಣ ಕಲ್ಪಿಸಲಾಗುತ್ತಿದ್ದು, ವಿವಿಧ ಸಂಸ್ಥೆಗಳ ನಡುವಿನ ದತ್ತಾಂಶ ಹರಿವು ಮತ್ತು ವಹಿವಾಟು ಮತ್ತಷ್ಟು ಸುಗಮವಾಗಲಿದೆ.

ಬಿಲ್ಲುಗಳು ಮತ್ತು ಸಂಬಂಧಿತ ದಾಖಲೆಗಳಿಗೆ ಡಿಜಿಟಲ್ ಸಹಿ ಹಾಗೂ ಡಿಜಿಟಲ್ ಅನುಮೋದನೆ ವ್ಯವಸ್ಥೆ ಅಳವಡಿಸುವ ಮೂಲಕ ಕಾಗದ ಆಧಾರಿತ ಹಾಗೂ ಹಸ್ತಚಾಲಿತ ಪ್ರಕ್ರಿಯೆಗಳನ್ನು ಕಡಿಮೆ ಮಾಡಲು ಉದ್ದೇಶಿಸಲಾಗಿದೆ.

ದಕ್ಷತೆ ಹೆಚ್ಚಳ, ನಷ್ಟ ನಿಯಂತ್ರಣ: ನಿಖರ ಇಂಧನ ಲೆಕ್ಕಾಚಾರ, ಸ್ವಯಂಚಾಲಿತ ಬಿಲ್ಲಿಂಗ್, ತ್ವರಿತ ಹಣಕಾಸು ಇತ್ಯರ್ಥ ಹಾಗೂ ರಿಯಲ್‌ಟೈಮ್ ಮೇಲ್ವಿಚಾರಣೆಯಿಂದ ವಿದ್ಯುತ್ ವಲಯದ ಒಟ್ಟಾರೆ ಕಾರ್ಯದಕ್ಷತೆಯನ್ನು ಹೆಚ್ಚಿಸಲು, ಪ್ರಕ್ರಿಯಾತ್ಮಕ ಮತ್ತು ವಾಣಿಜ್ಯ ನಷ್ಟಗಳನ್ನು ಕಡಿಮೆ ಮಾಡಲು ಹಾಗೂ ಆದಾಯ ಸಂಗ್ರಹಣೆಯನ್ನು ಮತ್ತಷ್ಟು ಪರಿಣಾಮಕಾರಿಗೊಳಿಸಲು KPTCL-GTD ನೆರವಾಗಲಿದೆ.

ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಶ್ರೀ ಕೆ.ಜೆ. ಜಾರ್ಜ್ ಮಾತನಾಡಿ, 'ವಿದ್ಯುತ್ ವಲಯದಲ್ಲಿ ಉತ್ಪಾದನೆಯಿಂದ ವಿತರಣೆಯವರೆಗೆ ಅನೇಕ ಸಂಸ್ಥೆಗಳು ಮತ್ತು ಹಂತಗಳು ಕಾರ್ಯನಿರ್ವಹಿಸುತ್ತವೆ. ಈವರೆಗೆ ಪ್ರತ್ಯೇಕವಾಗಿ ಮತ್ತು ಹಸ್ತಚಾಲಿತವಾಗಿ ನಡೆಯುತ್ತಿದ್ದ ಪ್ರಮುಖ ಪ್ರಕ್ರಿಯೆಗಳನ್ನು ಅತ್ಯಾಧುನಿಕ ತಂತ್ರಜ್ಞಾನದ ಮೂಲಕ ಒಂದೇ ಡಿಜಿಟಲ್ ವೇದಿಕೆಯಲ್ಲಿ ಜೋಡಿಸುವುದು ನಮ್ಮ ಉದ್ದೇಶ. ಇದರಿಂದ ವಿದ್ಯುತ್ ಉತ್ಪಾದಕರು, ಖರೀದಿದಾರರು, ಪ್ರಸರಣ ಮತ್ತು ವಿತರಣಾ ಸಂಸ್ಥೆಗಳು ಸೇರಿದಂತೆ ಎಲ್ಲ ಪಾಲುದಾರರಿಗೆ ವಹಿವಾಟು ಮತ್ತಷ್ಟು ಪಾರದರ್ಶಕ, ವೇಗವಾದ ಮತ್ತು ಸುಗಮವಾಗಲಿದೆ' ಎಂದು ಹೇಳಿದರು.

'ತಂತ್ರಜ್ಞಾನ ಅಳವಡಿಕೆ ಕೇವಲ ಡಿಜಿಟಲೀಕರಣಕ್ಕೆ ಸೀಮಿತವಾಗಬಾರದು. ಅದು ಇಲಾಖೆಯ ಕಾರ್ಯದಕ್ಷತೆಯನ್ನು ಹೆಚ್ಚಿಸಬೇಕು, ನಷ್ಟಗಳನ್ನು ಕಡಿಮೆ ಮಾಡಬೇಕು, ಹಣಕಾಸು ನಿರ್ವಹಣೆಯನ್ನು ಬಲಪಡಿಸಬೇಕು ಹಾಗೂ ಆದಾಯ ಸಂಗ್ರಹಣೆಯನ್ನು ಸುಧಾರಿಸಬೇಕು. ಈ ದೃಷ್ಟಿಯಿಂದ KPTCL-GTD ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಸೂಚಿಸಲಾಗಿದೆ' ಎಂದು ಸಚಿವರು ತಿಳಿಸಿದರು. ಸಚಿವರ ನಿರ್ದೇಶನದಂತೆ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ. ವಿ. ರಾಮ್‌ಪ್ರಸಾತ್ ಮನೋಹರ್ ಅವರ ನೇತೃತ್ವದಲ್ಲಿ ಯೋಜನೆಯ ಅನುಷ್ಠಾನ ಪ್ರಕ್ರಿಯೆ ಆರಂಭಗೊಂಡಿದ್ದು, ವಿವಿಧ ಸಂಸ್ಥೆಗಳ ದತ್ತಾಂಶ, ಬಿಲ್ಲಿಂಗ್, Energy Reconciliation, ಡಿಜಿಟಲ್ ಅನುಮೋದನೆ ಹಾಗೂ ಹಣಕಾಸು ಇತ್ಯರ್ಥ ವ್ಯವಸ್ಥೆಗಳನ್ನು ಹಂತ ಹಂತವಾಗಿ ಏಕೀಕರಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.

KPTCL-GTD ಸಂಪೂರ್ಣವಾಗಿ ಕಾರ್ಯರೂಪಕ್ಕೆ ಬಂದ ಬಳಿಕ, ವಿದ್ಯುತ್ ಉತ್ಪಾದನೆಯಿಂದ ವಿತರಣೆಯವರೆಗೆ ದತ್ತಾಂಶ, ಇಂಧನ ಲೆಕ್ಕಾಚಾರ, ಬಿಲ್ಲಿಂಗ್ ಮತ್ತು ಹಣಕಾಸು ವಹಿವಾಟುಗಳನ್ನು ಒಂದೇ ಡಿಜಿಟಲ್ ವ್ಯವಸ್ಥೆಯಲ್ಲಿ ಪಾರದರ್ಶಕವಾಗಿ, ನಿಖರವಾಗಿ ಮತ್ತು ವೇಗವಾಗಿ ನಿರ್ವಹಿಸುವ ಸಮಗ್ರ ವ್ಯವಸ್ಥೆ ರಾಜ್ಯದಲ್ಲಿ ರೂಪುಗೊಳ್ಳಲಿದೆ.

ಡಾ.ಮನಮೋಹನ್ ಸಿಂಗ್ ವಿವಿಯಲ್ಲಿ ಕರ್ನಾಟಕ ರಾಜ್ಯೋತ್ಸವ

ಸೆಂಟ್ರಲ್ ಕಾಲೇಜ್ ಮೈದಾನದಲ್ಲಿ ಏಕೀಕರಣ ಸ್ಮಾರಕ



ಬೆಂಗಳೂರು, ನ. 1–ಏಕೀಕೃತ ವಿಶಾಲ ಮೈಸೂರು ರಾಜ್ಯ ರಚನೆಯ ಅಧಿಕೃತ ಘೋಷಣೆ ಮೊಳಗಿದ ಸೆಂಟ್ರಲ್ ಕಾಲೇಜಿನ ಮೈದಾನದಲ್ಲಿ ಸ್ಮಾರಕ ನಿರ್ಮಾಣ ಮಾಡುವುದಾಗಿ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪ ಪ್ರೊ.ರಮೇಶ್.ಬಿ. ಪ್ರಕಟಿಸಿದ್ದಾರೆ.

ಸೆಂಟ್ರಲ್ ಕಾಲೇಜಿನ ಗಡಿಯಾರ ಗೋಪುರದ ಬಳಿ ಏರ್ಪಡಿಸಲಾಗಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅತಿಶೀಘ್ರವಾಗಿ ಅದೇ ಐತಿಹಾಸಿಕ ಸ್ಥಳದಲ್ಲಿ ವೈಭವದ ರಾಜ್ಯೋತ್ಸವ ಸಮಾರಂಭ ಆಯೋಜಿಸಲಾಗುವುದೆಂದು ತಿಳಿಸಿದರು.

ವಿಶ್ವವಿದ್ಯಾನಿಲಂು ದ ಪ್ರಸಾರಾಂಗದ ವತಿಯಿಂದ ವರ್ಷವಿಡೀ ನಾಡು, ನುಡಿ, ನೆಲ ಜಲದ ವಿಷಯಗಳ ಕುರಿತಂತೆ ವಿಚಾರ ಮಂಥನ ನಡೆಸಲು ವೇದಿಕೆ ಒದಗಿಸಿ ಕನ್ನಡ ಸಾಹಿತ್ಯದ ಹಿರಿಮೆಯ ಬಗ್ಗೆ ಯುವ ಪೀಳಿಗೆಯಲ್ಲಿ ಅರಿವು ಮೂಡಿಸಲಾಗುವುದೆಂದು ಅವರು ವಿವರಿಸಿದರು.

ವಚನ ಸಾಹಿತ್ಯ ಮತ್ತು ಕುವೆಂಪು ರವರ ವಿಶ್ವಮಾನವ ಸಂದೇಶದ ಮೂಲಕ ಕನ್ನಡ ಭಾಷೆ ಭಾರತೀಯ ಸಾಹಿತ್ಯಕ್ಕೆ ಅಮೋಘ ಕೊಡುಗೆ ನೀಡಿದ್ದು ವಿದ್ಯಾರ್ಥಿಗಳಲ್ಲಿ ವೈಚಾರಿಕ ದೃಷ್ಟಿಕೋನ ಉತ್ತೇಜಿಸುವ ನಿಟ್ಟಿನಲ್ಲಿ ನಿರಂತರ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದಾಗಿ ನುಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಖ್ಯಾತ ವಿಮರ್ಶಕಿ ಮತ್ತು ಲೇಖಕರಾದ ಪ್ರೊ.ಎಂ.ಎಸ್.ಆಶಾದೇವಿಯವರು ವ್ಯಕ್ತಿ ಸ್ವಾತಂತ್ರ್ಯ ಮತ್ತು ಆತ್ಮಗೌರವವನ್ನು ಕನ್ನಡಿಗರು ಸದಾ ಎತ್ತಿಹಿಡಿಯುತ್ತಾ ಬಂದಿದ್ದಾರೆಂದು ಪ್ರತಿಪಾದಿಸಿದರು.

ಕುವೆಂಪು ವಿರಚಿತ ನಾಡಗೀತೆಯಲ್ಲಿ ಬೌದ್ಧ ಪದ ಸೇರ್ಪಡೆಗೆ ಯಾವುದೇ ಅಭ್ಯಂ ತರವಿಲ್ಲವೆಂದು ತಿಳಿಸಿದ ಅವರು ಸರ್ವ ಜನಾಂಗದ ಶಾಂತಿಯ ತೋಟದ ಪರಿಕಲ್ಪನೆ ಸಕಲರನ್ನೂ ಒಳಗೊಂಡಿದೆ ಎಂದು ವಿಶ್ಲೇಷಿಸಿದರು. ಸಮಾಜದಲ್ಲಿ ಸಹಿಷ್ಣುತೆಯ ವಿವೇಕ ಕುಂದುತ್ತಿರುವ ಬಗ್ಗೆ ಅಪಾರ ವಿಷಾದ ವ್ಯಕ್ತಪಡಿಸಿದ ಅವರು ಸಂಕುಚಿತ ಪ್ರವೃತ್ತಿ ಮತ್ತು ಮೂಲ ಭೂತವಾದ ಜಗತ್ತನ್ನು ಕಾಡುತ್ತಿರುವ ಅತಿದೊಡ್ಡ ಸವಾಲಾಗಿದೆ ಎಂದು ಬಣ್ಣಿಸಿದರು.

ಪ್ರಭುತ್ವವನ್ನು ಓಲೈಸುವ ಪರಂಪರೆ ಕನ್ನಡ ಸಾಹಿತ್ಯದ್ದಲ್ಲವೆಂದು ಸ್ಪಷ್ಟವಾಗಿ ನಿರೂಪಿಸಿದ ಅವರು ಪಂಪನಿಂದ ಬಸವಣ್ಣನವರೆಗೆ ಇದು ರುಜುವಾತಾಗಿದೆ ಎಂದು ಉಲ್ಲೇಖಿಸಿದರು.

ಒಕ್ಕೂಟ ವ್ಯವಸ್ಥೆಯ ಚೌಕಟ್ಟಿನೊಳಗೆ ಕನ್ನಡಿಗರು ತಮ್ಮ ಅಸ್ಮಿತೆ ಮತ್ತು ಸ್ವಾಭಿಮಾನವನ್ನು ಸದಾ ಎತ್ತಿಹಿಡಿದು ಅನ್ಯ ಭಾಷಿಕರ ಜೊತೆಗೂ ಸಾಮರಸ್ಯದ ಬದುಕು ಸಾಗಿಸಬೇಕಾದ ಅಗತ್ಯವನ್ನು ಅವರು ಪ್ರಸ್ತಾಪಿಸಿದರು. ಕುಲಸಚಿವ ಎ. ನವೀನ್ ಜೋಸೆಫ್, ಪ್ರೊ.ರಮೇಶ. ಬಿ.ಕುಡೇನಟ್ಟಿ, ಸಿಂಡಿಕೇಟ್ ಸದಸ್ಯರಾದ ಕೆ.ಪಿ.ಪಾಟೀಲ್, ಡಾ.ಚೈತ್ರಾ, ವಿದ್ಯಾವಿಷಯಕ ಪರಿಷತ್ತಿನ ಸದಸ್ಯ ಡಾ. ಅಬ್ದುಲ್ ಖಾದರ್, ಡೀನರಾದ ಪ್ರೊ.ಎಂ.ನಿರ್ಮಲ ಇದ್ದರು. ಗುರುನಾಥ ಛಲವಾದಿ ಕಾರ್ಯಕ್ರಮ ನಿರೂಪಿಸಿದರು.

ಕನ್ನಡದ ಸೊಗಡು ಮೆರೆದ ವಿಧಾತ್ರಿಯ ನರ್ತನಧಾತ್ರಿ

ಬೆಂಗಳೂರು, ನ.1: ಉತ್ತಮ ಅಭಿನೇತ್ರಿ, ನೃತ್ಯಕಲಾವಿದೆ ಮತ್ತು ಗುರುವಾಗಿ ಹೆಸರು ಮಾಡಿರುವ ಅಮೆರಿಕಾ, ಅಮೆರಿಕಾ ಚಲನಚಿತ್ರದ ಖ್ಯಾತಿಯ ಹೇಮಾ ಪ್ರಭಾತ್ 'ಸುಕೃತಿ ನಾಟ್ಯಾಲಯ'ದ ಕಲಾತ್ಮಕ ನಿರ್ದೇಶಕಿ. ಅವರು ನಿರ್ವಹಿಸುವ ಪ್ರತಿಯೊಂದು ರಂಗಪ್ರವೇಶಗಳೂ ತುಂಬಾ ವಿಭಿನ್ನ. ಅನ್ವೇಷಕ– ಪ್ರಯೋಗಶೀಲ ಮನೋಭಾವದ ಗುರು ಹೇಮಾ, ತಮ್ಮ ಶಿಷ್ಯರ ಪ್ರಸ್ತುತಿಗಳಲ್ಲಿ ಕನ್ನಡತನ ವನ್ನೇ ಮೆರೆದು, ವಿಶಿಷ್ಟ ಕೃತಿಗಳನ್ನು ಆರಿಸಿಕೊಂಡು, ನವೀನತೆ ತುಂಬಿದ ನೃತ್ಯ ಸಂಯೋಜನೆಯಿಂದ ಕಣ್ಮನ ತುಂಬುವರು ಎಂದರೆ ಅತಿಶಯೋಕ್ತಿಯಲ್ಲ.



ಪ್ರತಿಯೊಂದು ರಂಗಪ್ರವೇಶಗಳಿಗೂ ಅರ್ಥಪೂರ್ಣ ಶೀರ್ಷಿಕೆ ನೀಡುವ ಸದಭಿರುಚಿಯ ಹೇಮಾ ಪ್ರಶಾಂತರ ಶಿಷ್ಯೆ ವಿಧಾತ್ರಿ ವಿಕ್ರಮ್ ಎ.ಡಿ.ಎ. ರಂಗಮಂದಿರದಲ್ಲಿ ನರ್ತನಧಾತ್ರಿ ಸಾಕ್ಷಾತ್ಕರಿಸಿ ಕಲಾರಸಿಕರ ತುಂಬು ಮೆಚ್ಚುಗೆಯನ್ನು ಗಳಿಸಿದಳು. ಆಕರ್ಷಕ ವೇಷಭೂಷಣ, ಕೇಶವಿನ್ಯಾಸ, ವಿಶಿಷ್ಟ ರಂಗಸಜ್ಜಿಕೆ, ಬೆಳಕಿನ ವಿನ್ಯಾಸ, ಪರಿಕರಗಳ ಬಳಕೆಯೊಂದಿಗೆ ವಾಚಿಕಾಭಿನಯದ ವೈಶಿಷ್ಟ್ಯವನ್ನು ಮೆರೆದ ಕಲಾವಿದೆ ವಿಧಾತ್ರಿ ಅಭಿನಯಿಸಿದ ಪ್ರತಿಯೊಂದು ಕೃತಿಗಳೂ ಮನಮೋಹಕವಾಗಿದ್ದವು.

ಕೃತಿಗಳ ಪ್ರಸ್ತುತಿ 'ಮಾರ್ಗ'ದ ಸಾಂಪ್ರದಾಯಕ ಚೌಕಟ್ಟಿನಲ್ಲೇ ಇದ್ದರೂ ಹೆಜ್ಜೆ ಗೆಜ್ಜೆಗಳ ಗತಿ, ಚಲನೆಯ ಸೌಂದರ್ಯ, ನೃತ್ತಗಳ ಬೆಡಗು, ಅಂಗಿಕಾಭಿನಯದ ರಮ್ಯತೆ ಸಾತ್ವಿಕಾಭಿನಯದ ಸೊಗಸು ಮೋಡಿ ಮಾಡಿತು. ಗಣೇಶ ವಂದನೆ, ಕಚ್ಛಪಿ ಧಾರಿಣಿ, ತ್ರಯಾಕ್ಷಿ ಸ್ತುತಿ, ನವರಸ ಭಕ್ತಿಯ ವರ್ಣ, ನಟರಾಜ ಸ್ತುತಿ, ಸೀತಾ ಕೃತಿ, ತಿಲ್ಲಾನ ಮತ್ತು ಮಂಗಳದೊಂದಿಗೆ ವಿಧಾತ್ರಿಯ ನೃತ್ಯ ಪ್ರಸ್ತುತಿ ಸಂಪನ್ನಗೊಂಡಿತು. ಎಲ್ಲೂ ಯಾಂತ್ರಿಕತೆ ಸುಳಿಯದ, ನೋಡುಗರ ನೋಟವನ್ನು ಹಿಡಿದಿಟ್ಟುಕೊಂಡ ರಂಗಪ್ರವೇಶ, ಏಕವ್ಯಕ್ತಿಯ ನೃತ್ಯ ಎನಿಸದೆ ಕಮನೀಯ ನೃತ್ಯರೂಪಕದಂತೆ ಕೃತಿಯ ನಡುವೆ ಹಾಸುಹೊಕ್ಕಾಗಿ ಪೂರಕ ಪಾತ್ರಗಳು ಸಾಕಾರಗೊಂಡು ನಾಟಕೀಯ ದೃಶ್ಯಗಳನ್ನು ಸೃಜಿಸಿದ್ದು ಗುರು ಹೇಮಾ ಅವರ ಅಸ್ಮಿತೆ. ಅವರ ಹೊಸ ಪರಿಕಲ್ಪನೆ ಶ್ಲಾಘನಾರ್ಹ. ಈ ಸಂದರ್ಭದಲ್ಲಿ ಗುರು ವಂದನೆಯ ಕಾರ್ಯಕ್ರಮದೊಂದಿಗೆ ಗುರುಗಳು ಶಿಷ್ಯೆಯನ್ನು ಪುರಸ್ಕರಿಸಿ ಪ್ರಮಾಣ ಪತ್ರ ವಿತರಿಸಿದ್ದು ವಿಶೇಷವಾಗಿತ್ತು.

– ವೈ. ಕೆ. ಸಂಧ್ಯಾಶರ್ಮ

ಕನ್ನಡ ಮನಸ್ಸುಗಳನ್ನು ಕಟ್ಟುವ ಕೆಲಸ ಆಗಬೇಕು: ಶಿವಾನಂದ ತಗಡೂರು

ಬೆಂಗಳೂರು, ನ.1: ಕರ್ನಾಟಕ ಎಲ್ಲ ಭಾಷಿಕರಿಗೂ ನೆಲೆಯಾಗಿದೆ. ಇಲ್ಲಿ ನೆಲೆಸಿರುವ ಎಲ್ಲ ಭಾಷಿಕರನ್ನೂ ಗೌರವಿಸುವುದರ ಜತೆಗೆ ಅವರಲ್ಲಿ ಕನ್ನಡದ ಮೇಲಿನ ಅಭಿಮಾನ ಮತ್ತು ಕನ್ನಡ ಮನಸ್ಸುಗಳನ್ನು ಕಟ್ಟುವ ಕೆಲಸ ತುರ್ತಾಗಿ ಆಗಬೇಕಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿದರು.

ಬೆಂಗಳೂರಿನಲ್ಲಿ ಟಿವಿಎಸ್ ಎಮರಾಲ್ಡ್ ಜಾರ್ಡಿನ್ ಓನರ್ಸ್ ಅಸೋಸಿಯೇಷನ್ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬೆಂಗಳೂರು ನಗರದಲ್ಲಿ ಅನ್ಯಭಾಷಿಕರ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕನ್ನಡಿಗರ ಸಂಖ್ಯೆ ಕಡಿಮೆಯಾಗುತ್ತಿರುವ ಬಗ್ಗೆ ಆತಂಕ



ವ್ಯಕ್ತಪಡಿಸಿದ ಶಿವಾನಂದ ತಗಡೂರು ಅವರು, ಕನ್ನಡ ಭಾಷೆ, ಸಂಸ್ಕೃತಿ ಮತ್ತು ನೆಲದ ಅಸ್ಮಿತೆಯ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಸಂಘಟಿತವಾಗಿ ನಡೆಯಬೇಕು.

ಕನ್ನಡಿಗರಲ್ಲದೆ, ಇಲ್ಲಿ ನೆಲೆಸಿರುವ ಎಲ್ಲರೂ ಕನ್ನಡವನ್ನು ಪ್ರೀತಿಸುವ ಮತ್ತು ಗೌರವಿಸುವ ವಾತಾವರಣ ನಿರ್ಮಾಣವಾಗಬೇಕು ಎಂದರು.

ಅಪಾರ್ಟ್‌ಮೆಂಟ್‌ಗಳಲ್ಲಿಯೂ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸುತ್ತಿರುವುದು ಶ್ಲಾಘನೀಯ. ಇಂತಹ ಕಾರ್ಯಕ್ರಮಗಳು ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಬೆಸುಗೆಯನ್ನು ಬಲಪಡಿಸುವುದರ ಜತೆಗೆ ಕನ್ನಡ ಮನಸ್ಸುಗಳನ್ನು ಬೆಸೆಯುವ ವೇದಿಕೆಗಳಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡ ನವೀನ್ ಗೌಡ ಹಾಗೂ ಟಿವಿಎಸ್ ಎಮರಾಲ್ಡ್ ಜಾರ್ಡಿನ್ ಓನರ್ಸ್ ಅಸೋಸಿಯೇಷನ್ ಅಧ್ಯಕ್ಷ ಮಧು ಎಂ.ಎಲ್. ಉಪಸ್ಥಿತರಿದ್ದರು.

ಕನ್ನಡ ರಾಜ್ಯೋತ್ಸವದ ದಿನದಂದೇ ಚಾಲನೆ

ಶಾಲಾ ಮಕ್ಕಳಿಗಾಗಿ ರಾಜ್ಯ ಸರ್ಕಾರದಿಂದ 'ಗ್ರಾಮಾನುಭವ' ಹೊಸ ಕಾರ್ಯಕ್ರಮ ಆರಂಭ

ಬೆಂಗಳೂರು ನ. 1: ಶಾಲೆಯಲ್ಲಿ ಕೃಷಿ ಮತ್ತು ಗ್ರಾಮೀಣ ಬದುಕಿನ ಬಗ್ಗೆ ಓದುವ ಮಕ್ಕಳಿಗೆ ಅದನ್ನು ನೇರವಾಗಿ ಅನುಭವಿಸುವ ಅವಕಾಶ ಕಲ್ಪಿಸಲು ರಾಜ್ಯ ಸರ್ಕಾರ'ಗ್ರಾಮಾನುಭವ' ಎಂಬ ಹೊಸ ಕಾರ್ಯಕ್ರಮ ಆರಂಭಿಸಿದೆ. ಕನ್ನಡ ರಾಜ್ಯೋತ್ಸವದ ಅಂಗವಾಗಿ ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿ ಜಿ ಪರಮೇಶ್ವರ ಹಾಗೂ ಸಚಿವರು ಈ ಯೋಜನೆಗೆ ಚಾಲನೆ ನೀಡಿದರು.



ನಗರದ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳು ಒಂದು ದಿನವನ್ನು ಹಳ್ಳಿಯ ವಾತಾವರಣದಲ್ಲಿ ಕಳೆಯುವ ಮೂಲಕ ಕೃಷಿ ಮತ್ತು ಗ್ರಾಮೀಣ ಜೀವನದ ಬಗ್ಗೆ ಪ್ರಾಯೋಗಿಕವಾಗಿ ತಿಳಿದುಕೊಳ್ಳಲಿದ್ದಾರೆ. ಕೃಷಿ ಚಟುವಟಿಕೆಗಳು, ಬೆಳೆ ಬೆಳೆಯುವ ವಿಧಾನ, ಹೈನುಗಾರಿಕೆ ಹಾಗೂ ಪಶುಸಂಗೋಪನೆಯ ಪ್ರಕ್ರಿಯೆಗಳನ್ನು ಹತ್ತಿರದಿಂದ ವೀಕ್ಷಿಸುವ ಅವಕಾಶ ಅವರಿಗೆ ಸಿಗಲಿದೆ.ರೈತರು ಬೆಳೆ ಬೆಳೆಯಲು ಪಡುವ ಶ್ರಮ, ಗ್ರಾಮೀಣ ಪ್ರದೇಶದ ಜನರ ದೈನಂದಿನ ಬದುಕು ಮತ್ತು ಅಲ್ಲಿನ ಸಂಸ್ಕೃತಿಯನ್ನು ಮಕ್ಕಳಿಗೆ ಪರಿಚಯಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಪಠ್ಯಪುಸ್ತಕಗಳ ಮೂಲಕ ಸಿಗುವ ಮಾಹಿತಿಯ ಜೊತೆಗೆ ನೇರ ಅನುಭವವೂ ಮಕ್ಕಳ ಕಲಿಕೆಯ ಭಾಗವಾಗಬೇಕು ಎಂಬ ಆಶಯದೊಂದಿಗೆ ಯೋಜನೆ ರೂಪಿಸಲಾಗಿದೆ.ಮೊದಲ ಹಂತದಲ್ಲಿ ಹತ್ತಕ್ಕೂ ಹೆಚ್ಚು ಶಾಲೆಗಳ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳ ನಗರ ಪ್ರದೇಶದ ಶಾಲೆಗಳಿಗೂ ಯೋಜನೆಯನ್ನು ಹಂತ ಹಂತವಾಗಿ ವಿಸ್ತರಿಸಲು ಸರ್ಕಾರ ಉದ್ದೇಶಿಸಿದೆ.ನಗರ ಮತ್ತು ಗ್ರಾಮೀಣ ಜೀವನದ ನಡುವಿನ ಅಂತರವನ್ನು ಕಡಿಮೆ ಮಾಡುವುದರ ಜೊತೆಗೆ, ಮಕ್ಕಳಲ್ಲಿ ಕೃಷಿ, ರೈತರು ಮತ್ತು ಗ್ರಾಮೀಣ ಸಂಸ್ಕೃತಿಯ ಬಗ್ಗೆ ಅರಿವು ಹಾಗೂ ಗೌರವ ಬೆಳೆಸುವುದು 'ಗ್ರಾಮಾನುಭವ'ದ ಆಶಯವಾಗಿದೆ

ಭಾಷೆ, ಸಂಸ್ಕೃತಿ ಮತ್ತು ಪರಂಪರೆಯೇ ನಾಡಿನ ನಿಜವಾದ ಶಕ್ತಿ: ಡಾ. ವಿ.ರಾಮ್‌ಪ್ರಸಾತ್ ಮನೋಹರ್

ಬೆಂಗಳೂರು, ನ. 1: ನಾಡು ಎಂದರೆ ಕೇವಲ ಭೌಗೋಳಿಕ ಪ್ರದೇಶವಲ್ಲ; ಅಲ್ಲಿನ ಜನ, ಭಾಷೆ, ಸಂಸ್ಕೃತಿ ಮತ್ತು ಪರಂಪರೆಯೇ ನಾಡಿನ ನಿಜವಾದ ಗುರುತು ಎಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ. ವಿ. ರಾಮ್‌ಪ್ರಸಾತ್ ಮನೋಹರ್, ಐಎಎಸ್ ಹೇಳಿದರು.



ಕೆಪಿಟಿಸಿಎಲ್‌ನಲ್ಲಿ ಆಯೋಜಿಸಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕನ್ನಡ ಭಾಷೆ ಸಾವಿರಾರು ವರ್ಷಗಳ ಶ್ರೀಮಂತ ಪರಂಪರೆ ಮತ್ತು ಸಂಸ್ಕೃತಿಯನ್ನು ಹೊಂದಿದ್ದು, ಪ್ರತಿಯೊಬ್ಬರೂ ಅದರ ಬಗ್ಗೆ ಹೆಮ್ಮೆ ಬೆಳೆಸಿಕೊಳ್ಳಬೇಕು ಎಂದರು.

'ಇತರ ಭಾಷೆಗಳನ್ನು ಕಲಿಯುವುದರಲ್ಲಿ ತಪ್ಪಿಲ್ಲ. ಆದರೆ ನಮ್ಮ ಮಾತೃಭಾಷೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಮರೆಯಬಾರದು. ವಿಶೇಷವಾಗಿ ಮಕ್ಕಳಿಗೆ ಕನ್ನಡದ ಬಗ್ಗೆ ಅಭಿಮಾನ ಮೂಡಿಸುವುದು ನಮ್ಮ ಜವಾಬ್ದಾರಿ' ಎಂದು ಹೇಳಿದರು.

ವಿಶ್ವದ ವಿವಿಧ ದೇಶಗಳ ಅನುಭವವನ್ನು ಉಲ್ಲೇಖಿಸಿದ ಅವರು, ತಮ್ಮ ಭಾಷೆ ಮತ್ತು ಸಂಸ್ಕೃತಿಯನ್ನು ಗೌರವಿಸುವ ಸಮಾಜಗಳು ಆತ್ಮವಿಶ್ವಾಸದಿಂದ ಮುನ್ನಡೆಯುತ್ತವೆ. ಮಾತೃಭಾಷೆಯಲ್ಲಿ ಕಲಿಕೆ ಮತ್ತು ಚಿಂತನೆ ವ್ಯಕ್ತಿಯ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದರು.

ಕರ್ನಾಟಕದಲ್ಲಿ ಸೇವೆ ಸಲ್ಲಿಸುವ ಅವಕಾಶ ದೊರೆತಿರುವುದು ಹೆಮ್ಮೆಯ ವಿಷಯ ಎಂದು ಹೇಳಿದ ಅವರು, ರಾಜ್ಯದ ಅಭಿವೃದ್ಧಿ ಹಾಗೂ ಕನ್ನಡ ಭಾಷೆ–ಸಂಸ್ಕೃತಿಯ ಸಂರಕ್ಷಣೆಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು ಎಂದರು.

'ರಾಜ್ಯೋತ್ಸವವು ಒಂದು ದಿನದ ಆಚರಣೆಗೆ ಸೀಮಿತವಾಗದೆ, ಕನ್ನಡ ಭಾಷೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಸಂಕಲ್ಪವಾಗಬೇಕು. ನಾವೆಲ್ಲರೂ ಒಗ್ಗಟ್ಟಾಗಿ ಕನ್ನಡದ ಹೆಮ್ಮೆಯನ್ನು ಹೆಚ್ಚಿಸೋಣ' ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕೆಪಿಟಿಸಿಎಲ್‌ನ ಹಿರಿಯ ಅಧಿಕಾರಿಗಳು, ನೌಕರರು ಹಾಗೂ ಅವರ ಕುಟುಂಬದವರು ಭಾಗವಹಿಸಿದ್ದರು.

ಇಂದಿನಿಂದ ಐದು ದಿನಗಳ ಕಾಲ ರಾಜ್ಯದ ಹಲವೆಡೆ ಸಾಧಾರಣ ಮಳೆ ಸಾಧ್ಯತೆ: ಹವಾಮಾನ ಇಲಾಖೆ ಎಚ್ಚರಿಕೆ

ಬೆಂಗಳೂರು, ನ.1– ಅರ್ನಾಬ್ ಚಂಡಮಾರುತದ ಬೆನ್ನಲ್ಲೇ ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತ ಉಂಟಾಗಿದ್ದು, ರಾಜ್ಯದಲ್ಲಿ ಮತ್ತೆ ಮತ್ತೊಂದು ಸುತ್ತಿನ ಮಳೆಯಾಗುವ ಮುನ್ಸೂಚನೆಗಳಿವೆ. ಸೋಮವಾರದಿಂದ ಐದು ದಿನಗಳ ಕಾಲ ರಾಜ್ಯದಲ್ಲಿ ಚದುರಿದಂತೆ ಸಾಧಾರಣ ಮಳೆಯಾಗುವ ಸಾಧ್ಯತೆಗಳಿವೆ.

ಹವಾಮಾನ ಇಲಾಖೆ ರಾಜ್ಯದ ಹಲವೆಡೆ ಮಳೆಯಾಗುವ ಮುನ್ಸೂಚನೆಗಳನ್ನು ನೀಡಿದೆ. ಈ ವಾಯುಭಾರ ಕುಸಿತವೂ ಚಂಡಮಾರುತವಾಗಿ ಪರಿವರ್ತನೆಯಾಗುವ ಸಾಧ್ಯತೆಗಳಿವೆ.



ಇದರಿಂದ ರಾಜ್ಯದ ದಕ್ಷಿಣ ಒಳನಾಡು, ಕರಾವಳಿ ಹಾಗೂ ರಾಜ್ಯದ ಪೂರ್ವ ಭಾಗದ ಜಿಲ್ಲೆಗಳ ಹಲವೆಡೆ ಹೆಚ್ಚಿನ ಮಳೆಯಾಗುವ ಮುನ್ಸೂಚನೆಗಳಿವೆ. ಬಂಗಾಳಕೊಲ್ಲಿಯಲ್ಲಿ ಉಂಟಾಗಿದ್ದ ವಾಯುಭಾರ ಕುಸಿತ ಪರಿಣಾಮ ಇತ್ತೀಚೆಗೆ ಕರಾವಳಿ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನ ಹಲವೆಡೆ ಉತ್ತಮ ಮಳೆಯಾಗಿತ್ತು.

ಅಲ್ಲದೆ, ಅದು ತೀವ್ರ ಚಂಡ ಮಾರುತವಾಗಿ ಪರಿವರ್ತನೆಯಾದ ಹಿನ್ನೆಲೆಯಲ್ಲಿ ವಾತಾವರಣದಲ್ಲಿದ್ದ ತೇವಾಂಶವನ್ನು ಸೆಳೆದುಕೊಂಡಿತ್ತು. ಇದರಿಂದ ರಾಜ್ಯದಲ್ಲಿ ಒಂದು ವಾರದಿಂದ ಮಳೆ ಪ್ರಮಾಣ ಕ್ಷೀಣಿಸಿತ್ತು. ಒಣಹವೆ ಮುಂದುವರೆದು ಚಳಿಯ ವಾತಾವರಣ ಕಂಡುಬಂದಿತ್ತು.

ತೀವ್ರ ಬರದಿಂದ ಒಣಗುತ್ತಿದ್ದ ಮುಂಗಾರು ಹಂಗಾಮಿನ ವಿವಿಧ ಬೆಳೆಗಳಿಗೆ ಇತ್ತೀಚೆಗೆ ಬಿದ್ದ ಮಳೆಯು ಜೀವಕಳೆ ತಂದಿತ್ತು. ಅಲ್ಲದೆ, ಕಳೆದ ಒಂದು ವಾರದಿಂದ ಮಳೆ ಇಲ್ಲದೆ, ಮತ್ತೆ ಬೆಳೆಗಳು ಒಣಗುವ ಪರಿಸ್ಥಿತಿ ಇತ್ತು. ಈಗ ಮತ್ತೆ ಮಳೆಯಾಗುವ ಮುನ್ಸೂಚನೆ ಇರುವುದು ರೈತರಲ್ಲಿ ಆಶಾಭಾವನೆ ಮೂಡಿದಂತಾಗಿದೆ.

ಅಧ್ಯಯನಕ್ಕೆ ಪ್ರತಿದಿನ ಸ್ವಲ್ಪ ಸಮಯ ಮೀಸಲಿಡೋಣ: ನ್ಯಾ. ಅರವಿಂದಕುಮಾರ್

ಬೆಂಗಳೂರು, ನ. 1: ಪುಸ್ತಕ ಹಬ್ಬವೆಂದರೆ ಲೇಖಕ ಮತ್ತು ಓದುಗ ಭೇಟಿಯಾಗುವ ಒಂದು ಸುಂದರ ಸಂದರ್ಭ. ಒಂದು ತಲೆಮಾರಿನ ಅನುಭವ ಮತ್ತೊಂದು ತಲೆಮಾರಿನ ಕುತೂಹಲದೊಂದಿಗೆ ಸಂವಾದ ನಡೆಸುವ ಸಮಯ. ನಾವು ಬದುಕಿರುವ ಜಗತನ್ನು ಇನ್ನಷ್ಟು ಆಳವಾಗಿ ಅರ್ಥಮಾಡಿಕೊಳ್ಳಲು, ನಮ್ಮೊಳಗಿನ ಜಗತ್ತನ್ನು ಇನ್ನಷ್ಟು ವಿಶಾಲಗೊಳಿಸಲು ದೊರೆಯುವ ಅವಕಾಶ. ಒಂದು ಪುಸ್ತಕವನ್ನು ಕೈಗೆತ್ತಿಕೊಂಡಾಗ ಅದರ ತೂಕ ಕೆಲವು ಗ್ರಾಂಗಳಷ್ಟು ಇರಬಹುದು. ಆದರೆ ಅದು ಹೊತ್ತಿರುವ ಅನುಭವ ಶತಮಾನಗಳಿದ್ದಾಗಿರಬಹುದು. ಪುಸ್ತಕದ ಪುಟಗಳು ಸೀಮಿತವಾಗಿರ ಬಹುದು. ಆದರೆ ಅದು ತೆರೆದಿಡುವ ಸಾಧ್ಯತೆಗಳು ಅಪಾರ. ಒಂದು ಒಳ್ಳೆಯ ಪುಸ್ತಕದ ಮಹತ್ವ ಅದನ್ನು ಓದಿ ಮುಗಿಸಿದ ನಂತರವೂ ಅದು ನಮ್ಮೊಳಗೆ ಮುಂದುವರಿಯುವುದರಲ್ಲಿ ಇದೆ ಎಂದು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಶ್ರೀ ಅರವಿಂದ ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.



ಕನ್ನಡ ರಾಜ್ಯೋತ್ಸವದ ಹೊಸ್ತಿಲಿನಲ್ಲಿ ಕನ್ನಡ ಪುಸ್ತಕ ಹಬ್ಬ ಆರಂಭಗೊಳ್ಳುತ್ತಿರುವುದು ಅರ್ಥಪೂಣ ರ್ವಾಗಿದೆ. ಕನ್ನಡದ ಮೇಲಿನ ಅಭಿಮಾನವು ಓದುವ ಅಭ್ಯಾಸವಾಗಿ, ಬರೆಯುವ ಪ್ರೇರಣೆಯಾಗಿ ಮುಂದಿನ ತಲೆಮಾರಿಗೆ ಭಾಷೆಯನ್ನು ತಲುಪಿಸುವ ಹೊಣೆಗಾರಿಕೆಯಾಗಿ ಬೆಳೆದಾಗ ರಾಜ್ಯೋತ್ಸವದ ಸಂತೋಷಕ್ಕೆ ಶಾಶ್ವತ ಅರ್ಥ ದೊರೆಯುತ್ತದೆ. ಓದಿನಿಂದ ಬಂದ ಜ್ಞಾನ ನಮ್ಮ ನಡವಳಿಕೆಯಲ್ಲಿ ಕಾಣಿಸಿಕೊಂಡಾಗ ಅದಕ್ಕೆ ಸಾರ್ಥಕತೆ ಬರುತ್ತದೆ. ಒಂದು ಉತ್ತಮ ಪುಸ್ತಕ ನಮ್ಮ ಗಮನವನ್ನು ಹಿಡಿದಿಡುತ್ತದೆ.

ವಿಚಾರದ ಹಲವು ಮುಖಗಳನ್ನು ಪರಿಚಯಿಸುತ್ತದೆ. ಒಂದು ಪುಸ್ತಕ ಓದುಗನ ಕೈ ಸೇರಿದಾಗ ಲೇಖಕನ ಶ್ರಮ ಸಾರ್ಥಕವಾಗುತ್ತದೆ. ಅದರ ವಿಚಾರವನ್ನು ಓದುಗ ವಿವೇಕದಿಂದ ಪರಿಶೀಲಿಸಿದಾಗ ಜ್ಞಾನ ಬೆಳೆಯುತ್ತದೆ. ಆ ಅರಿವು ಬದುಕಿನಲ್ಲಿ ಒಳ್ಳೆಯ ಕಾರ್ಯವಾಗಿ ರೂಪುಗೊಂಡಾಗ ಸಮಾಜಕ್ಕೆ ಪ್ರಯೋಜನವಾಗುತ್ತದೆ ಎಂದು ನ್ಯಾ. ಅರವಿಂದ್ ಅಭಿಪ್ರಾಯ ಪಟ್ಟರು.

ಹೆಸರಾಂತ ವಿದ್ವಾಂಸ ಶತಾವಧಾನಿ ಡಾ. ಆರ್. ಗಣೇಶ್ ಮಾತನಾಡಿ, ಈಗಿನ ಕಾಲದಲ್ಲಿ ಜನರನ್ನು ಸಭೆಗೆ ಬರುವಂತೆ ಮಾಡುವುದು, ಪುಸ್ತಕ ಓದುವಂತೆ ಮಾಡುವುದು ದೊಡ್ಡ ಸಾಹಸ. ನಮಗೆ ಬೇಕಾಗಿರುವುದನ್ನು ಮಾತ್ರ ಆರಿಸಿ ಆ ಹೊತ್ತಿಗೆ ತೆಗೆದುಕೊಳ್ಳುತ್ತೇವೆ ಎಂದುಕೊಂಡರೆ ಜ್ಞಾನ ಹೇಗೆ ಬೆಳೆದು ಬಂದಿದೆ ಎಂಬುದು ಗೊತ್ತಾಗುವುದಿಲ್ಲ. ಅಲ್ಲದೇ ಜ್ಞಾನದ ಬೇರು ಹೇಗೆ ಬೆಳೆದು ಬಂತು ಎನ್ನುವುದೂ ಅರಿವಿಗೆ ಬರುವುದಿಲ್ಲ. ನಾವು ಕೆಲವೊಂದಿಷ್ಟು ವಿಚಾರಗಳಲ್ಲಾದರೂ ಸಂಪೂರ್ಣಗ್ರಾಹಿಗಳಾಗಿರಬೇಕು.

ಅಂತಹ ಸಂದರ್ಭದಲ್ಲಿ ಮಿಕ್ಕ ಕೆಲವು ವಿಚಾರಗಳಲ್ಲಿ ಸಾರಗ್ರಾಹಿಗಳಾದರೆ ತೊಂದರೆಯಿಲ್ಲ. ಆ ದೃಷ್ಟಿಯಿಂದ ನಾವು ನಮ್ಮೊಳಗೆ ಒಂದಿಷ್ಟು ಸಂಪೂರ್ಣ ವ್ಯಕ್ತಿತ್ವ ರೂಪಿಸಿಕೊಳ್ಳಲು ಕೆಲವು ಪುಸ್ತಕಗಳನ್ನಾದರೂ ಓದಿರಬೇಕಾಗುತ್ತದೆ. ಸೆಲೆಕ್ಟಿವ್ ಅಮ್ನಿಷಿಯಾ ಅನ್ನೋದು ಮನುಷ್ಯನಲ್ಲಿ ಬಂದರೆ ಅದು ಬಹಳ ಅಪಾಯಕಾರಿ ಎಂದು ಅವರು ಅಭಿಪ್ರಾಯಪಟ್ಟರು.

ವಾರಾಣಸಿಯ ಮಾದರಿ ಕಲಬುರಗಿ ಭೂಗತ ವಿದ್ಯುತ್ ಜಾಲ ಅಳವಡಿಕೆ: ಪ್ರಿಯಾಂಕ್ ಖರ್ಗೆ

ಕಲಬುರಗಿ, ನ. 1: ನಗರದಲ್ಲಿ ಸುಮಾರು 49.4 ಕಿಲೋಮೀಟರ್ ಉದ್ದದ 17 ಪ್ರಮುಖ ರಸ್ತೆ ಮಾರ್ಗಗಳಲ್ಲಿ, ಮೇಲ್ಮೈಯಲ್ಲಿರುವ (ಓವರ್‌ಹೆಡ್) ವಿದ್ಯುತ್ ಮಾರ್ಗಗಳನ್ನು ಬದಲಾಯಿಸಿ, ಭೂಗತ ಕೇಬಲ್ ಜಾಲವನ್ನು ಅಳವಡಿಸಲು ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ಪ್ರಸ್ತಾವನೆ ಸಿದ್ಧಪಡಿಸಿದೆ.

ಸಾರ್ವಜನಿಕ ಸುರಕ್ಷತೆಯನ್ನು ಹೆಚ್ಚಿಸುವುದು, ನಗರದ ಸೌಂದರ್ಯವನ್ನು ಸುಧಾರಿಸುವುದು, ವಿದ್ಯುತ್ ವ್ಯತ್ಯಯ ಕಡಿಮೆ ಮಾಡುವುದು ಹಾಗೂ ಮೇಲ್ಮೈ ವಿದ್ಯುತ್ ತೆಗೆದು, ಭವಿಷ್ಯದಲ್ಲಿ ರಸ್ತೆ ವಿಸ್ತರಣೆಗೆ ಅನುಕೂಲ ಮಾಡಿಕೊಡುವುದು ಈ ಪ್ರಸ್ತಾವನೆಯ ಮೂಲ ಉದ್ದೇಶವಾಗಿದೆ ಎಂದು ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ್ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಯೋಜನೆಯ ವಿವರಗಳನ್ನು ಮನವರಿಕೆ ಮಾಡಿದರು.



ಐದು ವಲಯಗಳಾಗಿ ವಿಂಗಡಿಸಲಾದ ಈ ಯೋಜನೆಯಲ್ಲಿ, 279 ಕಿಮೀ ಉದ್ದದ ಹೈಟೆನ್ಷನ್ ಭೂಗತ ಕೇಬಲ್‌ಗಳು ಮತ್ತು 121 ಕಿ.ಕಿ. ಉದ್ದದ ಲೋ-ಟೆನ್ಷನ್ ಕೇಬಲ್‌ಗಳನ್ನು ಅಳವಡಿಸಲು ಉದ್ದೇಶಿಸಲಾಗಿದೆ. ಈ ಪ್ರಸ್ತಾವನೆಯನ್ನು ಅನುಮೋದನೆಗಾಗಿ ಜೆಸ್ಕಾಂ ನಿರ್ದೇಶಕರ ಮಂಡಳಿಯ ಮುಂದೆ ಮಂಡಿಸಲಾಗುವುದು.

ಇದಕ್ಕಾಗಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮಾದರಿಯ ಮೂಲಕ ಹಣಕಾಸು ಒದಗಿಸಲು ಪ್ರಸ್ತಾಪಿಸಲಾಗಿದೆ. ನಗರದಲ್ಲಿ ಪ್ರಸ್ತಾಪಿಸಲಾದ ಭೂಗತ ಜಾಲವು ನಗರದ ಹಲವು ಪ್ರಮುಖ ರಸ್ತೆಗಳು ಮತ್ತು ಜಂಕ್ಷನ್‌ಗಳನ್ನು ಒಳಗೊಳ್ಳಲಿದೆ ಎಂದು ಸಚಿವ ಖರ್ಗೆ ವಿವರಿಸಿದರು. ಗುರುತಿಸಲಾದ ಮಾರ್ಗಗಳ ಪೈಕಿ, ಹೀರಾಪುರ ವೃತ್ತ- ಎಂ.ಎಸ್.ಕೆ. ಮಿಲ್-ರಾಷ್ಟ್ರಪತಿ ವೃತ್ತ - ವಲ್ಲಭಭಾಯ ಪಟೇಲ್ ವೃತ್ತ, ನ್ಯೂ ಜೇವರ್ಗಿ ರಸ್ತೆ-ಕೊಠಾರಿ ಭವನ-ರಾಮ ಮಂದಿರ ವೃತ್ತ, ಅನ್ನಪೂರ್ಣ ಕ್ರಾಸ್-ಜಗತ್ ವೃತ್ತ, ಹಳೆಯ ಆರ್‌ಟಿಒ ಕ್ರಾಸ್-'ಹಾಬಾದ್ ರಿಂಗ್ ರಸ್ತೆ-ಕೆನ್ ಬ್ರಿಡ್ಜ್ ಶಾಲೆ, ಜಗತ್ ವೃತ್ತ-ಎಸ್.ಟಿ.ಬಿ.ಟಿ-ನ್ಯಾಷನಲ್ ಚೌಕ್- ನಾಗರೇಶ್ವರ ಶಾಲೆ, ವಿಟಿಯು ಪ್ರಾದೇಶಿಕ ಕೇಂದ್ರದಿಂದ ಕುಸ್ನೂರು ಗ್ರಾಮದವರೆಗೆ, ಕಪನೂರ ಕೈಗಾರಿಕಾ ಪ್ರದೇಶ, ಕಲಬುರಗಿ ರೈಲು ನಿಲ್ದಾಣ, ಐವಾನ್-ಎ-ಶಾಹಿ, ಶಹಾಬಜಾರ್ ಹಂತಹಂತವಾಗಿ ಅನುಷ್ಠಾನ ಗೊಳಿಸಲು ಅನುಕೂಲವಾಗುವಂತೆ, ಈ ಮಾರ್ಗಗಳನ್ನು ಐದು ವಲಯಗಳಾಗಿ ವಿಂಗಡಿಸಲಾಗಿದೆ.

ತಾಂತ್ರಿಕ ಯೋಜನೆಯಡಿ, ಅಸ್ತಿತ್ವದಲ್ಲಿರುವ ಓವರ್‌ಹೆಡ್ 11-ಕೆವಿ ವಿತರಣಾ ಮಾರ್ಗಗಳನ್ನು ಭೂಗತ ಕೇಬಲ್ ಜಾಲವಾಗಿ ಪರಿವರ್ತನೆ ಕೆಲಸವು ಕಂದಕ ಅಗೆಯುವುದು, ರಕ್ಷಣಾತ್ಮಕ ನಾಳಗಳು ಮತ್ತು ಕೇಬಲ್ ಕೋಣೆಗಳ ಸ್ಥಾಪನೆ, ಕೇಬಲ್‌ಗಳನ್ನು ಹಾಕುವುದು ಮತ್ತು ಹಾನಿಗೊಳಗಾದ ರಸ್ತೆಗಳು ಮತ್ತು ಪಾದಚಾರಿ ಮಾರ್ಗಗಳ ಪುನಃಸ್ಥಾಪನೆಯೂ ಒಳಗೊಂಡಿದೆ ಎಂದರು.

ವಿತರಣಾ ಜಾಲದ ನಿರ್ವಹಣೆಯನ್ನು ಸುಧಾರಿಸಲು ರಿಂಗ್ ಮುಖ್ಯ ಘಟಕಗಳು ಮತ್ತು ದೂರಸ್ಥ ಮೇಲ್ವಿಚಾರಣಾ ವ್ಯವಸ್ಥೆಗಳು ಸೇರಿದಂತೆ ಆಧುನಿಕ ವಿದ್ಯುತ್ ಸ್ವಿಚಿಂಗ್ ಮತ್ತು ರಕ್ಷಣಾ ಸಾಧನಗಳನ್ನು ಸ್ಥಾಪಿಸುವುದನ್ನು ಪ್ರಸ್ತಾವನೆಯು ಉದ್ದೇಶಿಸುತ್ತದೆ. ವಿತರಣಾ ಪರಿವರ್ತಕ ಕೇಂದ್ರಗಳು, ಕಡಿಮೆ-ಒತ್ತಡದ ಫೀಡರ್ ವ್ಯವಸ್ಥೆಗಳು ಮತ್ತು ಗ್ರಾಹಕ ಸಂಪರ್ಕಗಳಿಗೆ ಅಗತ್ಯವಾದ ಮಾರ್ಪಾಡು ಮಾಡಲಾಗುವುದು. ಯೋಜನೆಯ ಪ್ರಸ್ತಾವನೆಯ ಪ್ರಕಾರ, ಕೆಲಸವನ್ನು ವಲಯದಿಂದ ವಲಯಕ್ಕೆ ಕೈಗೊಳ್ಳಲಾಗುತ್ತದೆ, ವಿವರವಾದ ಸಮೀಕ್ಷೆಗಳು, ಅಸ್ತಿತ್ವದಲ್ಲಿರುವ ಉಪಯುಕ್ತತೆಗಳ ನಕ್ಷೆ ಮತ್ತು ವಿವರವಾದ ಯೋಜನಾ ವರದಿ ಯನ್ನು ಸಿದ್ಧಪಡಿಸುವುದರೊಂದಿಗೆ ಪ್ರಾರಂಭ ವಾಗುತ್ತದೆ. ಅನಂತರ ನಾಗರಿಕ ಬಡಾವಣೆಗಳ ವಿದ್ಯುತ್ ಕೆಲಸ, ಪರೀಕ್ಷೆ ಮತ್ತು ಕಾರ್ಯಾರಂಭ ಮತ್ತು ಗ್ರಾಹಕ ಸಂಪರ್ಕಗಳನ್ನು ಭೂಗತ ಜಾಲಕ್ಕೆ ವರ್ಗಾ ಯಿಸಲಾಗುವುದು. ಈ ಪ್ರಸ್ತಾವನೆ ಮುಂದಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ, ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ಇ-ಆಡಳಿತ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿಯಲ್ಲಿ ಜೆಸ್ಕಾಂ ಅಧ್ಯಕ್ಷ ಪ್ರವೀಣ ಹರವಾಳ ಅವರು ವಿವರವಾಗಿ ಚರ್ಚೆಗೆ ಒಳಪಡಿಸುವ ಮೂಲಕ ಹಣಕಾಸಿನ ವ್ಯವಸ್ಥೆ ಮುಂತಾದವುಗಳ ಬಗ್ಗೆ ಚರ್ಚಿಸಲಾಗುತ್ತಿದೆ ಎಂದು ತಿಳಿಸಿದರು.

ಪ್ರಯೋಜನಗಳು

2017 ರಲ್ಲಿ, ಉತ್ತರ ಪ್ರದೇಶದ ವಾರಾಣಸಿಯು ಭಾರತದ ಅತಿದೊಡ್ಡ ವಿದ್ಯುತ್ ಕೇಬಲ್‌ಗಳನ್ನು ಭೂಗತಕ್ಕೆ ತರುವ ಉಪಕ್ರಮಗಳಲ್ಲಿ ಒಂದನ್ನು ಪೂರ್ಣಗೊಳಿಸಿತು. ವಸತಿ ಪ್ರದೇಶಗಳು ಮತ್ತು ಮಾರುಕಟ್ಟೆಗಳಲ್ಲಿ ದಟ್ಟಣೆಯ ಲೇನ್‌ಗಳನ್ನು ಒಳಗೊಂಡಂತೆ 16-ಚದರ ಕಿಮೀ ಪ್ರದೇಶದಲ್ಲಿ ಓವರ್‌ಹೆಡ್ ಮೂಲಸೌಕರ್ಯವನ್ನು ಭೂಗತ ವಿದ್ಯುತ್ ಕೇಬಲ್ ನೆಟ್‌ವರ್ಕ್‌ಗೆ ಬದಲಾಯಿಸಲಾಯಿತು. ಯಾತ್ರಾ ಕೇಂದ್ರಕ್ಕೆ ಸ್ವಚ್ಛ ನೋಟ ನೀಡುವುದರ ಜೊತೆಗೆ, ವಿದ್ಯುತ್ ವಿತರಣಾ ನಷ್ಟವು ಶೇ.40 ರಿಂದ ಶೇ.10 ಕ್ಕಿಂತ ಕಡಿಮೆಯಾಗಿದೆ ಮತ್ತು ವಿದ್ಯುತ್ ಸಂಪರ್ಕಗಳು ಹೆಚ್ಚಾದವು, ಇದು ಸೇವಾ ಪೂರೈಕೆದಾರರ ಆದಾಯಕ್ಕೆ ಕಾರಣವಾಯಿತು. -ಸಚಿವ ಪ್ರಿಯಾಂಕ್ ಖರ್ಗೆ,

ಗೋಲ್ಡ್ ಪಾಸ್ ಮಾರಾಟ ಆರೋಪ: ಎಚ್.ಡಿ. ರೇವಣ್ಣ ಸಚಿವ ಕೆ.ಎಂ. ಶಿವಲಿಂಗೇಗೌಡರ ನಡುವೆ ವಾಕ್ಸಮರ

ಹಾಸನ, ನ.01- ಹಾಸನಾಂಬೆ ದರ್ಶನೋತ್ಸವದ ವೇಳೆ ವಿಐಪಿ ಪಾಸ್ ಹಂಚಿಕೆ ಮತ್ತು ಆಹ್ವಾನ ಪತ್ರಿಕೆಯ ವಿಚಾರವಾಗಿ ಮಾಜಿ ಸಚಿವ ಎಚ್.ಡಿ. ರೇವಣ್ಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆಎಂ ಶಿವಲಿಂಗೇಗೌಡ) ನಡುವೆ ವಾಕ್ಸಮರ ಏರ್ಪಟ್ಟಿದೆ.ಹಾಸನಾಂಬೆ ದರ್ಶನೋತ್ಸವದ ವೇಳೆ ವಿಐಪಿ ಪಾಸ್ ಹಂಚಿಕೆ ಮತ್ತು ಆಹ್ವಾನ ಪತ್ರಿಕೆಯ ವಿಚಾರವಾಗಿ ಮಾಜಿ ಸಚಿವ ರೇವಣ್ಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆಎಂ ಶಿವಲಿಂಗೇಗೌಡ ನಡುವೆ ವಾಕ್ಸಮರ ಏರ್ಪಟ್ಟಿದೆ. ಭಾನುವಾರದ ರಜೆ ಹಿನ್ನೆಲೆಯಲ್ಲಿ ದೇವಾಲಯಕ್ಕೆ ಲಕ್ಷಾಂತರ ಭಕ್ತರು ಹರಿದು ಬರುತ್ತಿದ್ದು, ಸ್ಥಳೀಯ ರಾಜಕೀಯದಲ್ಲೂ ಆರೋಪ-ಪ್ರತ್ಯಾರೋಪಗಳು ಜೋರಾಗಿವೆ.


ಪಾಸ್ ವಿತರಣೆ ಮತ್ತು ಜಿಲ್ಲಾಡಳಿತದ ನಡ-ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವ ಕೆಎಂ ಶಿವಲಿಂಗೇಗೌಡ, ಪಾಸ್ ಹಂಚಿಕೆಯಲ್ಲಿ ಯಾವುದೇ ಗೊಂದಲವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ರಾಜಕೀಯ ಆರೋಪಗಳನ್ನು ತಡೆಯುವ ಉದ್ದೇಶದಿಂದ ಈ ಬಾರಿ ಜಿಲ್ಲಾಡಳಿತವೇ ಪಾಸ್ ನೀಡುವ ಹೊಣೆ ಹೊತ್ತಿದೆ. ಪ್ರತಿಯೊಬ್ಬ ಶಾಸಕರಿಗೆ 500, ಸ್ಥಳೀಯ ಶಾಸಕರಿಗೆ 1500 ಹಾಗೂ ಸಂಸದರಿಗೆ 1000 ಪಾಸ್ಗಳನ್ನು ನಿಗದಿಪಡಿಸಲಾಗಿದೆ. ರೇವಣ್ಣ ಅವರಿಗೂ ಎಸಿ ಕಚೇರಿಯಿಂದ 500 ಪಾಸ್ಗಳನ್ನು ನೀಡಲು ಹೋದಾಗ ಅವರು ಅದನ್ನು ಸ್ವೀಕರಿಸಲು ನಿರಾಕರಿಸಿದ್ದಾರೆ ಎಂದು ಸಚಿವರು ವಿವರಿಸಿದರು.

ರಾಜಕೀಯ ಮತ್ತು ವ್ಯಕ್ತಿಗತ ಸಂಬಂಧ



ಬೇರೆ-ಹಿಂದಿನ ದರ್ಶನೋತ್ಸವಗಳಲ್ಲಿ ಆದ ಗೊಂದಲಗಳನ್ನು ಗಮನದಲ್ಲಿಟ್ಟುಕೊಂಡು ಈ ಬಾರಿ ಪಾಸ್ ಸಂಖ್ಯೆಯನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಲಾಗಿದೆ. ಮಂತ್ರಿಯಾಗಿ ವೈಯಕ್ತಿಕವಾಗಿ ಕರೆಯುವುದಕ್ಕಿಂತ ಅಧಿಕೃತವಾಗಿ ಜಿಲ್ಲಾಡಳಿತವೇ ಜನಪ್ರತಿನಿಧಿಗಳನ್ನು ಆಹ್ವಾನಿಸುವುದು ಧರ್ಮ. ರೇವಣ್ಣ ಅವರು ಹಿರಿಯ ನಾಯಕರಾಗಿದ್ದು, ಅವರಿಗೆ ವಿಶೇಷವಾಗಿ ಕರೆ ಮಾಡಲು ಸಿದ್ಧನಿದ್ದೇನೆ. ಬೇರೆ ಬೇರೆ ಪಕ್ಷದ ನಾಯಕರು ಹಾಗೂ ಸಾರ್ವಜನಿಕರು ಈ ಬಾರಿಯ ವ್ಯವಸ್ಥೆಯನ್ನು ಶ್ಲಾಘಿಸಿದ್ದಾರೆ ಎಂದು ಶಿವಲಿಂಗೇಗೌಡ ತಿಳಿಸಿದರು.

ಗೋಲ್ಡ್ ಪಾಸ್ ಮಾರಾಟ ಆರೋಪಕ್ಕೆ ತಿರುಗೇಟು: ಗೋಲ್ಡ್ ಪಾಸ್‌ಗಳನ್ನು ಮಾರಾಟ ಮಾಡಲಾಗುತ್ತಿದೆ ಎಂಬ ರೇವಣ್ಣ ಅವರ ಆರೋಪವನ್ನು ಸಚಿವರು ತಳ್ಳಿಹಾಕಿದರು. ಇಂತಹ ಆರೋಪಗಳು ಸಣ್ಣತನದಿಂದ ಕೂಡಿದ್ದು, ಸಾಕ್ಷಿಯಿದ್ದರೆ ಕಾನೂನು ಕ್ರಮ ಕೈಗೊಳ್ಳಲಿ ಎಂದು ಸವಾಲು ಹಾಕಿದರು. ಹಾಸನಾಂಬೆ ಜಾತ್ರಾ ಮಹೋತ್ಸವವು ರಾಜ್ಯದ ಗಮನ ಸೆಳೆದಿದ್ದು, ಲಕ್ಷಾಂತರ ಭಕ್ತರು ಸುಲಭವಾಗಿ ದರ್ಶನ ಪಡೆಯಲು ಅಗತ್ಯವಿರುವ ಸಕಲ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ಸಚಿವರು ಸಮರ್ಥಿಸಿಕೊಂಡರು.



ಕನ್ನಡ ರಾಜ್ಯೋತ್ಸವದ ಅಂಗವಾಗಿ ಬೆಂಗಳೂರಿನ ವಿಧಾನಸೌಧ ಕಟ್ಟಡ ಭಾನುವಾರ ಸಂಜೆ ಅರಿಶಿಣ-ಕುಂಕುಮ ವರ್ಣದ ದೀಪಗಳಿಂದ ಜಗಮಗಿಸುತ್ತಿತ್ತು .

ಬೆಳಗಾವಿಯಲ್ಲಿ ಎಂಇಎಸ್ ಪುಂಡಾಟಿಕೆ: ನಿಷೇಧದ ನಡುವೆಯೂ 'ಕರಾಳ ದಿನ' ಆಚರಣೆ



ಬೆಳಗಾವಿ, ನ.01- ಇಡೀ ಕರ್ನಾಟಕ ಸಡಗರದಿಂದ ಕನ್ನಡ ರಾಜ್ಯೋತ್ಸವ ಆಚರಿಸುತ್ತಿದ್ದರೆ, ಗಡಿ ಜಿಲ್ಲೆ ಬೆಳಗಾವಿಯಲ್ಲಿ ಜಿಲ್ಲಾಡಳಿತ ಹಾಗೂ ನಗರ ಪೊಲೀಸ್ ಇಲಾಖೆಯ ಕಟ್ಟುನಿಟ್ಟಿನ ನಿಷೇಧ ಹಾಗೂ ಅನುಮತಿ ನಿರಾಕರಣೆಯ ನಡುವೆಯೂ ಮಹಾರಾಷ್ಟ್ರ ಏಕೀಕರಣ ಸಮಿತಿ (ಎಂಇಎಸ್) ಕಾರ್ಯಕರ್ತರು ನವೆಂಬರ್ 1 ರಂದು ಕರಾಳ ದಿನ ಆಚರಿಸಿ ಪುಂಡಾಟಿಕೆ ನಡೆಸಿದ್ದಾರೆ. ಆ ಕುರಿತ ವರದಿ ಇಲ್ಲಿದೆ:

ಅನುಮತಿ ನಿರಾಕರಿಸಿದ್ದ ಜಿಲ್ಲಾಡಳಿತ- ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಹಾಗೂ ಪೊಲೀಸ್ ಇಲಾಖೆಯು ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಎಂಇಎಸ್ನ ಕರಾಳ ದಿನಾಚರಣೆ ಮತ್ತು ರ್ಯಾಲಿಗೆ ಅಧಿಕೃತವಾಗಿ ಅನುಮತಿ ನಿರಾಕರಿಸಿತ್ತು. ಅಷ್ಟೇ ಅಲ್ಲದೆ, ಗಡಿಯಲ್ಲಿ ಉದ್ವೇಗ ಸೃಷ್ಟಿಯಾಗದಂತೆ ತಡೆಯಲು ನೆರೆಯ ಮಹಾರಾಷ್ಟ್ರದ ಶಿವಸೇನಾ ಹಾಗೂ ಎಂಇಎಸ್ನ ಪ್ರಮುಖ ನಾಯಕರು ಜಿಲ್ಲೆ ಪ್ರವೇಶಿಸದಂತೆ ನಿಷೇಧಾಜ್ಞೆ ಹೇರಲಾಗಿತ್ತು.

ಅಲ್ಲಿಂದ ಮರಾಠಾ ಮಂದಿರದವರೆಗೆ ಕರಾಳ ದಿನದ ಮೆರವಣಿಗೆ ನಡೆಸಿದ ಪುಂಡರು, ಪೊಲೀಸರ ಸಮ್ಮುಖದಲ್ಲೇ "ಬೆಳಗಾವಿ, ಕಾರವಾರ, ನಿಪ್ಪಾಣಿ, ಬೀದರ್, ಭಾಲ್ಕಿ ಮಹಾರಾಷ್ಟ್ರಕ್ಕೆ ಸೇರಬೇಕು" ಎಂದು ನಾಡವಿರೋಧಿ ಘೋಷಣೆಗಳನ್ನು ಕೂಗಿದರು.

ಏತನ್ಮಧ್ಯೆ, ಎಂಇಎಸ್ ಕಾರ್ಯಕರ್ತರ ಈ ಕೃತ್ಯವನ್ನು ಖಂಡಿಸಿ, ಸ್ಥಳದಲ್ಲೇ ಪ್ರತಿಭಟನೆ ನಡೆಸಿ ಅವರ ರ್ಯಾಲಿಗೆ ನುಗ್ಗಲು ಯತ್ನಿಸಿದ ಕರ್ನಾಟಕ ರಕ್ಷಣಾ ವೇದಿಕೆ (ಶಿವರಾಮೇಗೌಡ ಬಣ) ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು. ಮುಂಜಾಗ್ರತಾ ಕ್ರಮವಾಗಿ ಗಡಿ ಜಿಲ್ಲೆಯಾದ್ಯಂತ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು.

ಗೋಕರ್ಣದ ದುಬ್ಬಣಶಶಿ ಬೀಚ್‌ನಲ್ಲಿ ದುರಂತ: ಸಮುದ್ರದ ಅಲೆಗೆ ಸಿಲುಕಿ ಬೆಂಗಳೂರು ಮೂಲದ ಯುವತಿ ಸಾವು



ಕಾರವಾರ, ನ.01- ಉತ್ತರ ಕನ್ನಡ ಜಿಲ್ಲೆಯ ಗೋಕರ್ಣದ ದುಬ್ಬಣಶಶಿ (ಡಬ್ಬನಶಶಿ) ಬೀಚ್‌ನಲ್ಲಿ ಭಾನುವಾರ ಬೆಳ್ಳಂಬೆಳಗ್ಗೆ ನಡೆದ ದುರಂತದಲ್ಲಿ ಓರ್ವ ಪ್ರವಾಸಿ ಯುವತಿ ಮೃತಪಟ್ಟಿದ್ದು, ಮತ್ತೋರ್ವ ಯುವಕ ಸಮುದ್ರದ ಅಲೆಗೆ ಕೊಚ್ಚಿ ಹೋಗಿ ನಾಪತ್ತೆಯಾಗಿದ್ದಾನೆ. ಇತರ ಇಬ್ಬರು ಅಸ್ವಸ್ಥರಾಗಿದ್ದಾರೆ.

ಬೆಂಗಳೂರಿನ ಬೆಳ್ಳಂದೂರಿನಲ್ಲಿರುವ ಆಲೋರಿಕಾ ಇಕೋಸ್ಪೇಸ್ ಕಂಪನಿಯ 16 ಉದ್ಯೋಗಿಗಳ ತಂಡ ಶನಿವಾರ ರಾತ್ರಿ ಪ್ರವಾಸಕ್ಕಾಗಿ ಗೋಕರ್ಣಕ್ಕೆ ಆಗಮಿಸಿತ್ತು. ದುಬ್ಬಣಶಶಿ ಬೀಚ್‌ನಲ್ಲಿರುವ ಕೋಜಿ ರೆಸಾರ್ಟ್‌ನಲ್ಲಿ ವಾಸ್ತವ್ಯ ಹೂಡಿದ್ದ ತಂಡದ ಸದಸ್ಯರು ಭಾನುವಾರ ಬೆಳಗ್ಗೆ ಸಮುದ್ರದಲ್ಲಿ ಸ್ನಾನಕ್ಕೆ ಇಳಿದಿದ್ದರು. ಈ ವೇಳೆ ಏಕಾಏಕಿ ಅಪ್ಪಳಿಸಿದ ಭಾರಿ ಅಲೆಗಳಿಗೆ ಸಿಲುಕಿ 7 ಮಂದಿ ಪ್ರವಾಸಿಗರು ಸಮುದ್ರದಲ್ಲಿ ಕೊಚ್ಚಿಕೊಂಡು ಹೋಗಿದ್ದರು.

ಇವರಲ್ಲಿ ಶೋಭಾ ದಾಸ್ (22) ಮೃತಪಟ್ಟಿದ್ದು, ವಿಶ್ವೇಶ್ ಎ.ಕೆ. (24) ಎಂಬುವರು ನಾಪತ್ತೆಯಾಗಿದ್ದಾರೆ. ಉಳಿದಂತೆ, ಅಕ್ರಮ್ (27) ಹಾಗೂ ಕಾಸಿಂ (27) ಅವರನ್ನು ರಕ್ಷಣೆ ಮಾಡಲಾಗಿದ್ದು, ಚಿಕಿತ್ಸೆ ಬಳಿಕ ಚೇತರಿಸಿಕೊಂಡಿದ್ದಾರೆ. ಅಲ್ಲದೆ, ಘಟನೆಯಲ್ಲಿ ಪುನೀತ್ (22), ಸ್ನೇಹಾ (22) ಹಾಗೂ ಹರ್ಬಜ್ (31) ಎಂಬುವರು ಅಲೆಗಳಿಂದ ಪಾರಾಗಿದ್ದಾರೆ. ಇವರೆಲ್ಲರೂ ಬೆಂಗಳೂರು ಮೂಲದವರು ಎಂದು ತಿಳಿದುಬಂದಿದೆ.

ಮಾಹಿತಿ ತಿಳಿದ ತಕ್ಷಣ ಸ್ಥಳೀಯರು ಹಾಗೂ ಪೊಲೀಸರು ಕಾರ್ಯಾಚರಣೆ ನಡೆಸಿ, ಖಾಸಗಿ ವಾಹನ ಮತ್ತು 108 ಆಂಬ್ಯುಲೆನ್ಸ್ ಮೂಲಕ ಗೋಕರ್ಣ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರವಾನಿಸಿದ್ದಾರೆ. ಅಲ್ಲಿ ಡಾ. ಜಗದೀಶ್ ನಾಯ್ಕ ಮತ್ತು ಸಿಬ್ಬಂದಿ ತುರ್ತು ಚಿಕಿತ್ಸೆ ನೀಡಿ ಇಬ್ಬರ ಪ್ರಾಣ ಉಳಿಸಿದ್ದಾರೆ. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಕುಮಟಾ ಆಸ್ಪತ್ರೆಗೆ ಕಳುಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸ್ಥಳಕ್ಕೆ ಗೋಕರ್ಣ ಠಾಣೆಯ ಪಿಎಸ್ಐ ಅನಿಲ್ ಮತ್ತು ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಮುದ್ರದಲ್ಲಿ ನಾಪತ್ತೆಯಾದ ಯುವಕನಿಗಾಗಿ ಶೋಧ ಕಾರ್ಯ ಮುಂದುವರೆದಿದೆ.

ಸ್ಟಿಂಗ್ ಆಪರೇಷನ್ ದೂರು ನೀಡಲು ಸಿದ್ದರಾಮಯ್ಯ ದೆಹಲಿಗೆ ಹೋಗಿಲ್ಲ: ಜಮೀರ್ ಅಹ್ಮದ್ ಖಾನ್ ಸ್ಪಷ್ಟನೆ

ಬಳ್ಳಾರಿ, ನ.01- ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾವುದೇ ಸ್ಟಿಂಗ್ ಆಪರೇಷನ್ ಕುರಿತು ದೂರು ನೀಡಲು ದೆಹಲಿಗೆ ಹೋಗಿಲ್ಲ. ಬದಲಾಗಿ ಅಲ್ಲಿ ನಡೆಯುತ್ತಿರುವ ಪ್ರತಿಭಟನೆಯಲ್ಲಿ ಭಾಗವಹಿಸಲು ತೆರಳಿದ್ದಾರೆ ಎಂದು ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಸ್ಪಷ್ಟಪಡಿಸಿದರು.

ನಗರದ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ರವಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕನ್ನಡ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಸೇರಿದಂತೆ ಯಾವುದೇ ಸಚಿವರು ದೆಹಲಿಗೆ ತೆರಳುತ್ತಿಲ್ಲ. ಎಐಸಿಸಿ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರ ಕರೆಯ ಮೇರೆಗೆ ಸಿದ್ದರಾಮಯ್ಯ ಅವರು ಮಾತ್ರ ದೆಹಲಿಗೆ ತೆರಳುತ್ತಿದ್ದಾರೆ ಎಂದರು.ಸ್ಟಿಂಗ್ ಆಪರೇಷನ್ ಮಾಡಿದ್ದು ನಾನೇ ಎಂದು ರಾಕೇಶ್ ಶೆಟ್ಟಿ ಅವರೇ ಹೇಳಿಕೊಂಡಿದ್ದಾರೆ. ಆದರೆ ಅದರಲ್ಲಿ ಯಾವುದೇ ಸತ್ಯಾಂಶವಿಲ್ಲ. ಏನೋ ವಿಷಯವಿದೆ ಎಂದು ಸ್ಟಿಂಗ್ ಮಾಡಲು ಹೋಗಿ, ಕೊನೆಗೆ ಯಾವುದೇ ಆಧಾರ ಸಿಗದಿದ್ದಾಗ ಅದನ್ನು ಕೈಬಿಟ್ಟಿರುವುದಾಗಿ ಅವರೇ ಸ್ಪಷ್ಟಪಡಿಸಿದ್ದಾರೆ. ಅವರೆಲ್ಲ ಬ್ಲಾಕ್ಮೇಲರ್ಗಳು. ಈ ಬಗ್ಗೆ ಪಕ್ಷವು ಈಗಾಗಲೇ ಸೂಕ್ತ ತೀರ್ಮಾನ ಕೈಗೊಂಡು ಅವರನ್ನು ಅಮಾನತು ಗೊಳಿಸಿದೆ.

ಕೆಲವರು ಬೇರೆ ಕೆಲಸವಿಲ್ಲದೆ ಸಿದ್ದರಾಮಯ್ಯ ಹಾಗೂ ಡಿ. ಕೆ.ಶಿವಕುಮಾರ್ ನಡುವೆ ಭಿನ್ನಾಭಿಪ್ರಾಯ ಮೂಡಿಸಲು ಯತ್ನಿಸುತ್ತಿದ್ದಾರೆ. ಆದರೆ ಅದು ಎಂದಿಗೂ ಸಾಧ್ಯವಿಲ್ಲ ಎಂದು ಪ್ರತಿಪಾದಿಸಿದರು.

ನಿಗದಿಪಡಿಸಿದ್ದಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಹಾಲಿನ ದರ ಏರಿಕೆಯಾಗಿರುವ ವಿಚಾರವನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರುತ್ತೇನೆ. ರೈತರ ಬೇಡಿಕೆಯ ಹಿನ್ನೆಲೆಯಲ್ಲಿ ನಾವು ಕೇವಲ 3 ರೂ. ಹೆಚ್ಚಳ ಮಾಡಿದ್ದೇವೆ. ಈ ದರ ಹೆಚ್ಚಳದಿಂದ ಸರ್ಕಾರಕ್ಕೆ ಯಾವುದೇ ಲಾಭವಿಲ್ಲ. ಇನ್ನು ಕಳೆದ 10 ವರ್ಷಗಳಿಂದ ಬಸ್ ದರ ಹೆಚ್ಚಳ ಮಾಡಿರಲಿಲ್ಲ. ಪ್ರಸ್ತುತ ಡೀಸೆಲ್ ದರ ಗಣನೀಯವಾಗಿ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಬಸ್ ದರ ಹೆಚ್ಚಳ ಅನಿವಾರ್ಯವಾಗಿದೆ ಎಂದು ಸಮರ್ಥಿಸಿಕೊಂಡರು.ನಾಗೇಂದ್ರ



ಶೀಘ್ರದಲ್ಲೇ ಮತ್ತೆ ಸಚಿವರಾಗಲಿದ್ದಾರೆ :ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಮಾಜಿ ಸಚಿವ ಬಿ.ನಾಗೇಂದ್ರ ಅವರ ಯಾವುದೇ ತಪ್ಪಿಲ್ಲ. ಅಧಿವೇಶನ ನಡೆಯಲು ಬಿಡದೆ ವಿರೋಧ ಪಕ್ಷಗಳು ಪಾದಯಾತ್ರೆ ನಡೆಸಿದ ಸಂದರ್ಭದಲ್ಲಿ ಸರ್ಕಾರ ಹಾಗೂ ಪಕ್ಷಕ್ಕೆ ಮುಜುಗರವಾಗಬಾರದು ಎಂಬ ಕಾರಣಕ್ಕೆ ಅವರೇ ಸ್ವಯಂ ಪ್ರೇರಿತರಾಗಿ ರಾಜೀನಾಮೆ ನೀಡಿದ್ದರು.

ಸದ್ಯ ಪ್ರಕರಣದ ತನಿಖೆ ಅಂತಿಮ ಹಂತದಲ್ಲಿದ್ದು, ಶೀಘ್ರದಲ್ಲೇ ಸಿಐಡಿ ವರದಿ ಬರಲಿದೆ. ನವೆಂಬರ್ 10ರ ಒಳಗಾಗಿ ನಾಗೇಂದ್ರ ಅವರು ಮತ್ತೆ ಸಚಿವ ಸಂಪುಟ ಸೇರಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಸ್ತೆ ಅಪಘಾತದಲ್ಲಿ ಗಾಯಗೊಂಡ ರೈತನಿಗೆ ನೆರವಾಗಿ ಮಾನವೀಯತೆ ಮೆರೆದ ಎಂ.ಎಸ್.ಸಿದ್ದಪ್ಪ

ಬಳ್ಳಾರಿ ನ 01. ಭಾನುವಾರ ಬೆಳಗಿನ ಜಾವ ಸುಮಾರು 5:30 ರಿಂದ 6:00 ಗಂಟೆಯ ಸಮಯದಲ್ಲಿ ತೆಕ್ಕಲಕೋಟೆ ಪಟ್ಟಣದ ದೇವಿನಗರ ಕ್ಯಾಂಪ್ ಸಮೀಪದ ರಾಷ್ಟ್ರೀಯ ಹೆದ್ದಾರಿ ಓಊ-150 ರಸ್ತೆಯಲ್ಲಿ ರೈತ ದೇವಿ ನಗರ ನಿವಾಸಿಯಾದ ಎರ್ರಂಗಳಿ ಸಿದ್ದಯ್ಯ ಅವರು ತಮ್ಮ ಎತ್ತುಗಳ ಬಂಡಿಯೊಂದಿಗೆ ಜಮೀನಿಗೆ ತೆರಳುತ್ತಿದ್ದ ಸಂದರ್ಭದಲ್ಲಿ ಖಖಎ ಖಿಡಿಚಿತಜಟ ಖಾಸಗಿ ಬಸ್ ಡಿಕ್ಕಿ ಹೊಡೆದು ರಸ್ತೆ ಅಪಘಾತ ಸಂಭವಿಸಿರುವ ಸುದ್ದಿ ತಿಳಿದ ಕೂಡಲೇ ಎಂ.ಎಸ್ ಸಿದ್ದಪ್ಪನವರು ಘಟನಾ ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿದರು.

ಈ ದುರ್ಘಟನೆಯಲ್ಲಿ ರೈತ ಎರ್ರಂಗಳಿ ಸಿದ್ದಯ್ಯ ಹಾಗೂ ಅವರ ಎತ್ತುಗಳಿಗೆ ತೀವ್ರ ಗಾಯಗಳಾಗಿರುವುದು ನೋವಿನ ಸಂಗತಿ ಅವರು ಬೇಗ ಚೇತರಿಸಿಕೊಳ್ಳಲು ಬೇಕೆಂದು ದೇವರಲ್ಲಿ ಪ್ರಾರ್ಥನೆ ಸಲ್ಲಿಸಿದರು.

ಗಾಯಗೊಂಡ ರೈತರನ್ನು ಆಸ್ಪತ್ರೆಗೆ ದಾಖಲಿಸುವಲ್ಲಿ ನೆರವಾಗಿ, ಹೆಚ್ಚಿನ ಚಿಕಿತ್ಸೆಗಾಗಿ ಬಳ್ಳಾರಿ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ಕಳುಹಿಸಿಕೊಟ್ಟರು.

ಕಷ್ಟದ ಸಮಯದಲ್ಲಿ ನಮ್ಮ ಕೈಲಾದ ಸಹಾಯ ಮಾಡುವುದು ನಮ್ಮೆಲ್ಲರ ಮಾನವೀಯ



ಕರ್ತವ್ಯ. ಜನರ ಸಂಕಷ್ಟದಲ್ಲಿ ಅವರೊಂದಿಗೆ ನಿಲ್ಲುವುದೇ ನಿಜವಾದ ಸಮಾಜಸೇವೆ ಎಂಬುದು ನನ್ನ ನಂಬಿಕೆ ಎಂದರು.

ಗಾಯಗೊಂಡಿರುವ ರೈತ ಯರಂಗಳ ಸಿದ್ದಯ್ಯ ಅವರು ಆದಷ್ಟು ಬೇಗ ಸಂಪೂರ್ಣ ಗುಣಮುಖರಾಗಲಿ ಹಾಗೂ ಗಾಯಗೊಂಡಿರುವ ಮೂಕ ಪ್ರಾಣಿಗಳಾದ ಎತ್ತುಗಳು ಕೂಡ ಶೀಘ್ರ ಚೇತರಿಸಿಕೊಳ್ಳಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಿದರು.

ಜನರ ಸಂಕಷ್ಟಕ್ಕೆ ಸ್ಪಂದಿಸುವುದೇ ನನ್ನ ಮೊದಲ ಆದ್ಯತೆ. ಮಾನವೀಯತೆಯೇ ಮಹಾಧರ್ಮ ಎಂದು ತಿಳಿಸಿದರು.

ಭಾಲ್ಕಿ ಎಟಿಎಂ ಕಳವು ಪ್ರಕರಣ

ನಾಲ್ವರ ಅಂತಾರಾಜ್ಯ ಕಳ್ಳರ ಬಂಧನ ಲಕ್ಷಾಂತರ ಮೌಲ್ಯದ ಸೊತ್ತು ವಶ



ಬೀದರ್, ನ. 1: ಜಿಲ್ಲೆಯ ಭಾಲ್ಕಿಯ ಹಿರೇಮಠ್ ಸಂಸ್ಥಾನದ ಕಾಂಪ್ಲೆಕ್ಸ್‌ನಲ್ಲಿರುವ ಎಟಿಎಂ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿ ನಾಲ್ವರು ಅಂತರಾಜ್ಯ ಆರೋಪಿಗಳನ್ನು ಬಂಧಿಸಲಾಗಿದ್ದು, 12 ಲಕ್ಷ ರೂ. ನಗದು ಸೇರಿದಂತೆ ಒಟ್ಟು 32 ಲಕ್ಷ ರೂ. ಮೌಲ್ಯದ ಸೊತ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿಂದು, ಹರ್ಯಾಣ ರಾಜ್ಯದವರಾದ ಆಸು (40), ಆಸಿಫ್ (25), ಅನೀಷ್ (47) ಹಾಗೂ ರಾಜಸ್ಥಾನ ರಾಜ್ಯದ ಭರತಪುರ್ ಜಿಲ್ಲೆಯ ರಾಹುಲ್ (23) ಬಂಧಿತ ಆರೋಪಿಗಳಾಗಿದ್ದಾರೆ. ಕಳೆದ ಅ.25ರಂದು ಮಧ್ಯರಾತ್ರಿ ಭಾಲ್ಕಿಯ ಹಿರೇಮಠ್ ಸಂಸ್ಥಾನ ಮಠದ ಕಾಂಪ್ಲೆಕ್ಸ್ ನಲ್ಲಿರುವ ಎಟಿಎಂ ಒಳಗಡೆ ಪ್ರವೇಶಿಸಿದ ಕಳ್ಳರು ಗ್ಯಾಸ್ ಕಟರ್ ಬಳಸಿ 23 ಲಕ್ಷ 86 ರೂ. ಇರುವ ಎಟಿಎಂ ನಗದು ಬಾಕ್ಸ್ ಕಳವು ಮಾಡಿದ್ದರು. ಪ್ರಕರಣವನ್ನು ಕೇವಲ ಐದು ದಿನಗಳಲ್ಲಿ ಭೇದಿಸಿದ್ದು, ಆರೋಪಿಗಳನ್ನು ಬಂಧಿಸಲಾಗಿದೆ ಎಂದರು.

ಆರೋಪಿಗಳನ್ನು ಪತ್ತೆಹಚ್ಚಲು ನಾಲ್ಕು ತಂಡಗಳು ರಚಿಸಲಾಗಿತ್ತು. ಹಾಗೆಯೇ ಎಐ ಕ್ಯಾಮೆರಾದಿಂದ ಪರಿಶೀಲಿಸಿದಾಗ ಆರೋಪಿಗಳು ತೆಲಂಗಾಣದ ಹೈದರಾಬಾದ್ ಗೆ ಹೋಗಿರುವ ಬಗ್ಗೆ ಖಚಿತಪಡಿಸಿಕೊಂಡು ಅ.30ರಂದು ಹೈದ್ರಾಬಾದ್ ನ ಶಾಹಿನ್ ನಗರದಲ್ಲಿ ಅವರನ್ನು ಬಂಧಿಸಲಾಗಿದೆ. ಆರೋಪಿಗಳಿಂದ 12 ಲಕ್ಷ ರೂ.ನಗದು, 20 ಲಕ್ಷ ರೂ. ಮೌಲ್ಯದ ಒಂದು ಕಾರು, ಸ್ಪ್ರೇ ಬಾಟಲ್, ಗ್ಯಾಸ್ ಕಟರ್ ಪೈಪ್, ಕಟಿಂಗ್ ಪ್ಲೇಯರ್, 2 ಮೊಬೈಲ್, 11 ವಿವಿಧ ರಾಜ್ಯಗಳ ನಂಬರ್ ಪ್ಲೇಟ್, ಗ್ಯಾಸ್ ಸಿಲಿಂಡರ್, ಆಕ್ಸಿಜನ್ ಸಿಲಿಂಡರ್ ಸೇರಿದಂತೆ ಹಲವು ವಸ್ತುಗಳು ವಶಕ್ಕೆ ಪಡೆಯಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯಕ್ಕೆ ಆಗ್ರಹಿಸಿ ಪ್ರತಿಭಟನೆ: ಹೋರಾಟಗಾರರ ಬಂಧನ

ಕಲಬುರಗಿ, ನ. 1: ಕನ್ನಡ ರಾಜ್ಯೋತ್ಸವದ ಸಂಭ್ರಮದ ನಡುವೆಯೇ ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕವನ್ನು ಪ್ರತ್ಯೇಕ ರಾಜ್ಯವನ್ನಾಗಿ ಘೋಷಿಸಬೇಕೆಂಬ ಕೂಗು ಮತ್ತೆ ಮೊಳಗಿದೆ.

ನಿರಂತರ ಮಲತಾಯಿ ಧೋರಣೆಯಿಂದ ಈ ಭಾಗದಲ್ಲಿ ನಿರುದ್ಯೋಗ ಮತ್ತು ಬಡತನ ತಾಂಡವವಾಡುವಂತೆ ಮಾಡಲಾಗಿದೆ. ರಾಜ್ಯ ಸರ್ಕಾರ ಮಾತ್ರವಲ್ಲದೇ ಸ್ಥಳೀಯ ಚುನಾಯಿತ ಪ್ರತಿನಿಧಿಗಳೂ ಕೂಡ ಈ ಭಾಗದ ಹಿಂದುಳಿಯುವಿಕೆಗೆ ಕಾರಣವಾಗಿದ್ದಾರೆ ಎಂದು ಆರೋಪಿಸಲಾಯಿತು.

ಪ್ರತ್ಯೇಕ ರಾಜ್ಯದ ಬೇಡಿಕೆಯನ್ನು ಮುಂದಿಟ್ಟುಕೊಂಡು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಕಾರ್ಯಕರ್ತರು ನಗರದ ಮುಖ್ಯ ರಸ್ತೆಯಲ್ಲಿ ಪ್ರತಿಭಟನೆ ನಡೆಸಿದ್ದು,



ಪ್ರತ್ಯೇಕ ಧ್ವಜಾರೋಹಣಕ್ಕೆ ಯತ್ನಿಸಿದಾಗ ಪೊಲೀಸರು ಅವಕಾಶ ನೀಡದೇ ಧ್ವಜದೊಂದಿಗೆ ಘೋಷಣೆ ಕೂಗುತ್ತ ಆಗಮಿಸಿದ್ದ ಹತ್ತು ಜನ ಹೋರಾಟಗಾರರನ್ನು ಬಂಧಿಸಿದರು.

ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಮುಖಂಡ ಎಂ.ಎಸ್. ಪಾಟೀಲ್ ನರಿಬೋಳ್ ನೇತೃತ್ವದಲ್ಲಿ ಈ ಪ್ರತಿಭಟನೆ ನಡೆಯಿತು. ಈ ವೇಳೆ ಪ್ರತ್ಯೇಕ ರಾಜ್ಯದ ಪರವಾಗಿ ಘೋಷಣೆಗಳನ್ನು ಕೂಗಿದ ಹೋರಾಟಗಾರರು, ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕ ರಾಜ್ಯದ ಮಾನ್ಯತೆ ನೀಡಬೇಕೆಂದು ಆಗ್ರಹಿಸಿದರು.

ಪ್ರತಿಭಟನಾಕಾರರು ಪ್ರತ್ಯೇಕ ಧ್ವಜಾರೋಹಣಕ್ಕೆ ಮುಂದಾದ ಹಿನ್ನೆಲೆಯಲ್ಲಿ 10ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಸರ್ಕಾರದ ವಿರುದ್ಧ ಆಕ್ರೋಶ: ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ವಿಚಾರದಲ್ಲಿ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿದೆ ಎಂದು ಹೋರಾಟಗಾರರು ಆರೋಪಿಸಿದರು. ಸಂವಿಧಾನದ 371(ಜೆ) ಕಲಂ ಅಡಿಯಲ್ಲಿ ವಿಶೇಷ ಸ್ಥಾನಮಾನ ದೊರೆತಿದ್ದರೂ, ಈ ಭಾಗದಲ್ಲಿ ನಿರೀಕ್ಷಿತ ಮಟ್ಟದ ಅಭಿವೃದ್ಧಿ ಆಗಿಲ್ಲ. ಮುಖ್ಯವಾಗಿ ಖಾಲಿ ಹುದ್ದೆಗಳ ನೇಮಕಾತಿ ಮಾಡದೇ ಅಭಿವೃದ್ಧಿಯಾಗದಂತೆ ಷಡ್ಯಂತ್ರ ರಚಿಸಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಶಿಕ್ಷಣ, ಉದ್ಯೋಗ, ಆರೋಗ್ಯ, ಮೂಲಸೌಕರ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಲ್ಯಾಣ ಕರ್ನಾಟಕ ಇನ್ನೂ ಹಿಂದುಳಿದಿದೆ. ವಿಶೇಷ ಸ್ಥಾನಮಾನದ ಸೌಲಭ್ಯಗಳು ಸಮರ್ಪಕವಾಗಿ ಜನರಿಗೆ ತಲುಪುತ್ತಿಲ್ಲ. ಹೀಗಾಗಿ ಈ ಭಾಗದ ಸಮಗ್ರ ಅಭಿವೃದ್ಧಿಗಾಗಿ ಪ್ರತ್ಯೇಕ ರಾಜ್ಯ ರಚನೆ ಅಗತ್ಯವಾಗಿದೆ ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಕಲಬುರಗಿ, ರಾಯಚೂರು ಜಿಲ್ಲೆಗಳ ಸಮಗ್ರ ಅಭಿವೃದ್ಧಿಗೆ ಬದ್ಧ: ಡಾ. ಅಜಯ್ ಸಿಂಗ್

ರಾಯಚೂರು, ನ. 1: ಕಲಬುರಗಿ ಮತ್ತು ರಾಯಚೂರು ಜಿಲ್ಲೆಗಳನ್ನು ನಾನು ಬೇರೆ ಎಂದು ಭಾವಿಸಿಲ್ಲ. ರಾಯಚೂರು ಜಿಲ್ಲಾ ಉಸ್ತುವಾರಿ ಆಗಿರುವುದರಿಂದ ಇದೂ ಕುಡ ನನ್ನ ಜಿಲ್ಲೆಯೆಂದೇ ಭಾವಿಸಿ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸುವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಅಜಯ್ ಸಿಂಗ್ ಹೇಳಿದರು.

ಜಿಲ್ಲೆಯ ಅಂಬಾಮಠದ ಅಂಬಾದೇವಿ ದೇವಸ್ಥಾನದ ನೂತನ ಶಿಲಾ ಮಂಟಪ ಲೋಕಾರ್ಪಣೆ ಮತ್ತು ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮಕ್ಕೆ ಆಗಮಿಸಿದ್ದ ಅವರು ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಎರಡೂವರೆ ತಿಂಗಳಲ್ಲಿ ಜಿಲ್ಲೆಗೆ 8–10 ಬಾರಿ ಬಂದು ವಿವಿಧ ಸಮಸ್ಯೆಗಳ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದೇನೆ. ನೀರಾವರಿ, ಆಹಾರ ನಾಗರಿಕ, ಗೃಹ, ಕಂದಾಯ, ಸಮಾಜ ಕಲ್ಯಾಣ ಸಚಿವರ ಸಹಕಾರದೊಂದಿಗೆ ಪ್ರಗತಿಗೆ ಪ್ರಯತ್ನಿಸುತ್ತಿದ್ದೇನೆ ಎಂದರು.

ಬಿಜೆಪಿ ಮುಖಂಡರು ತಾವೇ ವಿಧಾನ ಪರಿಷತ್ ಚುನಾವಣೆ ಫಲಿತಾಂಶವನ್ನು 2028ರ ಚುನಾವಣೆ ದಿಕ್ಸೂಚಿ ಎಂದು ಹೇಳಿಕೊಳ್ಳುವುದರಲ್ಲಿ ಅರ್ಥವಿಲ್ಲ. ಪುಟ್ಟಣನವರು ಕೇವಲ 900 ಮತಗಳಿಂದ ಪರಾಭವಗೊಂಡಿದ್ದಾರೆ. ಉಳಿದೆಲ್ಲ ಕ್ಷೇತ್ರಗಳಲ್ಲಿ ಅವರೇ ಅಧಿಕಾರದಲ್ಲಿದ್ದಾರೆ. ಇದರಲ್ಲಿ ವಿಶೇಷವೇನಿದೆ. ಉತ್ತರ ಪ್ರದೇಶದಲ್ಲಿ 11 ರಲ್ಲಿ 5 ಸ್ಥಾನಗಳನ್ನು ಇಂಡಿಯಾ ಒಕ್ಕೂಟ ಜಯ ಸಾಧಿಸಿದೆ. ಪ್ರಧಾನಿ ಮೋದಿಯವರ ಸ್ವಕ್ಷೇತ್ರ ವಾರಣಾಸಿಯಲ್ಲಿ ಇಂಡಿಯಾ ಭಾಗಿದಾರ




ಸಮಾಜವಾದಿ ಪಕ್ಷ ಜಯ ಸಾಧಿಸಿದೆ. ಕಳೆದ ಬಾರಿ ಸ್ವಾಯತ್ತ ಸಂಸ್ಥೆಗಳನ್ನು ಕೈಯಲ್ಲಿಟ್ಟುಕೊಂಡು ಸದಾ ಅಧಿಕಾರದಲ್ಲಿರಬೇಕು ಎಂದು ಹಂಬಲಿಸುತ್ತಿದ್ದಾರೆ ಎಂದು ಹೇಳಿದರು.

ಎಸ್‌ಐಆರ್ ಮೂಲಕ ತಮಗೆ ವಿರೋಧ ವ್ಯಕ್ತಪಡಿಸುವ ಎಲ್ಲ ಮತಗಳನ್ನು ತೆಗೆದು ಹಾಕುವ ಸಂಚು ನಡೆಸಿದ್ದಾರೆ. ಚುನಾವಣಾ ಆಯೋಗ ಕೈಗೊಂಡ 14 ತೀರ್ಮಾನಗಳಲ್ಲಿ ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ ಏಕಪಕ್ಷೀಯವಾಗಿ ತೀರ್ಮಾನ ಕೈಗೊಂಡಿದ್ದಾರೆ. ರಾಹುಲ್ ಗಾಂಧಿ ಅವರು ಈ ಮತಗಳ್ಳತನದ ವಿರುದ್ಧವಾಗಿ ನಿರಂತರವಾಗಿ ಹೋರಾಟ ನಡೆಸುತ್ತಿದ್ದಾರೆ. ದೇಶದ ಪ್ರತಿ ಜಿಲ್ಲೆಗಳಿಂದಲೂ ಜನ ಹೋರಾಟದಲ್ಲಿ ಭಾಗವಹಿಸಲಿದ್ದಾರೆ ಎಂದರು.



ಭಾನುವಾರ ಹುಬ್ಬಳ್ಳಿಯ ಚನ್ನಮ್ಮ ವೃತ್ತದಲ್ಲಿ ಆಟೋ ಚಾಲಕರಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಹಿರಿಯ ಆರೋಗ್ಯ ಶಿಕ್ಷಕಿ ತಾರಾ ಸೇವಾ ನಿವೃತ್ತಿ: ಬೀಳ್ಕೊಡುಗೆ



ಕಲಬುರಗಿ, ನ.01– ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಿರಿಯ ಆರೋಗ್ಯ ಶಿಕ್ಷಕಿಯಾಗಿ ಕಳೆದ 30 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದ ಶ್ರೀಮತಿ ತಾರಾ ಡಿ. ಅವರು ಶನಿವಾರ (ಅ. 31ರಂದು) ಸೇವಾ ನಿವೃತ್ತಿ ಹೊಂದಿದ್ದಾರೆ.

ಕಲಬುರಗಿ ನಗರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಿರಿಯ ಆರೋಗ್ಯ ಶಿಕ್ಷಕಿಯಾಗಿ ಕಾರ್ಯನಿರ್ವಹಿಸಿದ್ದ ತಾರಾ ಡಿ. ಅವರು 30 ವರ್ಷಗಳಿಂದ ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ತಮ್ಮ ಸೇವಾವಧಿಯಲ್ಲಿ ಆಳಂದ ತಾಲೂಕಿನ ಅಂಬಲಗಾ, ಜಿಮ್ಸ್ ಆಸ್ಪತ್ರೆ, ದೇವಲಗಾಣಗಾಪುರ ಹಾಗೂ ಕಲಬುರಗಿ ಟ ನಗರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಿರಿಯ ಆರೋಗ್ಯ ಶಿಕ್ಷಕಿಯಾಗಿ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದರು. ಮೂಲತಃ ಬೀದರ್ ಜಿಲ್ಲೆಯ ಚಿದ್ರಿ ಗ್ರಾಮದವರು. ಇವರ ಪತಿ ಕಾಶಿನಾಥ್ ಗಂಗಾಣೆ ಪೊಲೀಸ್ ಇಲಾಖೆಯಲ್ಲಿ ಕಾರ್ಯನಿರ್ವಹಿಸಿದ್ದರು.

ಸೇವಾ ನಿವೃತ್ತಿ ಹೊಂದಿದ ತಾರಾ ಡಿ. ಅವರನ್ನು ಕಡೇಚೂರ್ ಗ್ರೂಪ್ ಆಫ್ ಹೋಟೆಲ್ಸ್ ವತಿಯಿಂದ ಉದ್ಯಮಿಗಳು ಹೃತ್ಪೂರ್ವಕವಾಗಿ ಅಭಿನಂದಿಸಿದರು. ಆರೋಗ್ಯ ಇಲಾಖೆಯಲ್ಲಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ ಇವರ ಕರ್ತವ್ಯ ನಿರ್ವಹಣೆಯ ಕ್ರಮ ಇತರರಿಗೆ ಮಾದರಿಯಾಗಲಿ. ನಿವೃತ್ತ ಜೀವನ ಸುಖಮಯವಾಗಲಿ ಎಂದು ಹಿರಿಯ ಉದ್ಯಮಿ, ಮಹಾದೇವ ಗುತ್ತೇದಾರ್ ಹೇಳಿದರು.

ಕುಡಿಯುವ ನೀರಿನ ಸಮಸ್ಯೆ: ದದ್ದಲ್ ಅಸಮಾಧಾನ

ರಾಯಚೂರು, ನ. 1: ಗ್ರಾಮ ಪಂಚಾಯಿತಿಗಳಿಗೆ ನೇಮಕಗೊಂಡಿರುವ ಆಡಳಿತಾಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸುತ್ತಿಲ್ಲ. ಇದರಿಂದ ಕುಡಿಯುವ ನೀರು ಸೇರಿದಂತೆ ಹಲವು ಸಮಸ್ಯೆಗಳು ಉಲ್ಬಣಿಸುತ್ತಿವೆ ಎಂದು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅಸಮಾಧಾನ ವ್ಯಕ್ತಪಡಿಸಿದರು.

ಕೂಡಲೇ ಗ್ರಾಮಗಳಿಗೆ ಭೇಟಿ ನೀಡಿ ನೀರಿನ ಸಮಸ್ಯೆ ಕುರಿತು ಸಮಗ್ರ ವರದಿ ಸಲ್ಲಿಸಬೇಕು. ಬರದ ನಡುವೆಯೇ ಬೇಸಿಗೆ ಸಮೀಪಿಸುತ್ತಿದ್ದು, ಈಗಾಗಲೇ ಹಲವು ಗ್ರಾಮಗಳಲ್ಲಿ ಖಾಸಗಿ ಕೊಳವೆಬಾವಿ ಗಳನ್ನು ಬಾಡಿಗೆಗೆ ಪಡೆದು ಕುಡಿಯುವ ನೀರು ಪೂರೈಸಲಾಗುತ್ತಿದೆ. ಗಣಮೂರು, ಆತ್ಮೂರು, ಕಲವಲದೊಡ್ಡಿ, ಜುಲಮ ಗೇರಾ, ಸಿಂಗನೋಡಿ ಸೇರಿದಂತೆ ಹಲವು ಗ್ರಾಮಗಳಲ್ಲಿ ನೀರಿನ ಸಮಸ್ಯೆ ಎದುರಾಗಿದೆ. ಎಷ್ಟು ಗ್ರಾಮಗಳಿಗೆ ಭೇಟಿ ನೀಡಿ ಸಮಸ್ಯೆ ಆಲಿಸಿದ್ದೀರಿ ಎಂಬ ಶಾಸಕರ ಪ್ರಶ್ನೆಗೆ ಆಡಳಿತಾಧಿಕಾರಿ ಗಳು ಸಮರ್ಪಕ ಉತ್ತರ ನೀಡದೆ ತಡವರಿಸಿದರು. ಗ್ರಾ.ಪಂಗಳಿಗೆ ಭೇಟಿ ನೀಡಿ ಸಭೆ ನಡೆಸಬೇಕು. ನೀರಿನ ಸಮಸ್ಯೆ ಇರುವ ಗ್ರಾಮಗಳನ್ನು ಗುರುತಿಸಿ, ಅಗತ್ಯವಿರುವ ಕಡೆ ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು. ಮುಖ್ಯಮಂತ್ರಿ ಅವರು ಪ್ರತಿ ಗ್ರಾಮ ಪಂಚಾಯಿತಿಗೆ ರೂ.1 ಕೋಟಿ ಅನುದಾನ ನೀಡುವುದಾಗಿ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಕುಡಿಯುವ ನೀರು ಸೇರಿದಂತೆ ಗ್ರಾಮಗಳ ವಿವಿಧ ಸಮಸ್ಯೆಗಳ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ಎರಡು–ಮೂರು ದಿನಗಳಲ್ಲಿ ಸಲ್ಲಿಸಬೇಕು. ನಿರ್ಲಕ್ಷ್ಯ ವಹಿಸಿದರೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಹಾಗೂ ಆಡಳಿತಾಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ರೈತರಿಂದ ಹೆದ್ದಾರಿ ಸಂಚಾರ ತಡೆದು ಬೃಹತ್ ಹೋರಾಟ



ಬೀದರ, ನ. 1: ಪ್ರತಿ ಟನ್ ಕಬ್ಬಿಗೆ 5500 ಬೆಂಬಲ ನಿಗದಿಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದಿಂದ ಜಿಲ್ಲೆಯ ಹುಮನಾಬಾದ ಪಟ್ಟಣದ ಹೊರವಲಯದ ರಾಮ್ ಮತ್ತು ರಾಜ್ ಕಾಲೇಜು ಹತ್ತಿರದ ಹೈದರಾಬಾದ–ಪುಣೆ ರಾಷ್ಟ್ರೀಯ ಹೆದ್ದಾರಿ–65ರ ಸಂಚಾರ ತಡೆದು ಬೃಹತ್ ಪ್ರತಿಭಟನೆ ನಡೆಯಿತು.

ಕರ್ನಾಟಕ ರಾಜ್ಯ ರೈತಸಂಘ ಹಾಗೂ ಹಸಿರು ಸೇನೆ ನೀಡಿದ ಕರ್ನಾಟಕ ಬಂದ್ ಕರೆಗೆ ಬೆಂಬಲಿಸಿ ಈ ಪ್ರತಿಭಟನೆ ಜರುಗಿತು. ಸುಮಾರು ಅರ್ಧಗಂಟೆಗೂ ಹೆಚ್ಚು ಕಾಲ ಮುಂಬೈ ಹೈದರಾಬಾದ್ ಹೆದ್ದಾರಿ ಬಂದ್ ಮಾಡಿದ ನೂರಾರು ರೈತರು ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತ ಆಕ್ರೋಶ ವ್ಯಕ್ತಪಡಿಸಿದರು.

ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಜಗದೀಶ್ ಚೌರ್ ಅವರಿಗೆ ಸಲ್ಲಿಸಲಾಯಿತು. ನಂತರ ಸಂಘದ ಪ್ರಮುಖರು ಮಾತನಾಡಿ, 'ರೈತರ ಬಗ್ಗೆ ನಿರ್ಲಕ್ಷ್ಯ ಮಾಡದೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಧ್ಯಪ್ರವೇಶಿಸಿ ತಕ್ಷಣ ಪ್ರತಿ ಟನ್ ಕಬ್ಬಿಗೆ ರೂ.5500 ಬೆಂಬಲ ಬೆಲೆ ನೀಗದಿ ಪಡಿಸಬೇಕು. ಬೀದರ್ ಜಿಲ್ಲೆಯ ಜೀವನಾಡಿ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯುನ್ನು ಪುನರಾರಂಭಿಸಬೇಕು. ರಾಜ್ಯದಲ್ಲಿನ ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು. ಪ್ರತಿ ಕಬ್ಬಿನ್ ಕಾರ್ಖಾನೆಗಳಿಗೆ ಡಿಜಿಟಲ್ ತೂಕ ಅಳವಡಿಸಬೇಕು' ಎಂದು ಒತ್ತಾಯಿಸಿದರು.

ಸರ್ದಾರ್ ಪಟೇಲ್ ಪ್ರತಿಮೆ ಸ್ಥಾಪನೆ ವಿವಾದ: ಪ್ರತಿಭಟನೆ

ಬೀದರ್, ನ. 1: ಸ್ವಾತಂತ್ರ್ಯದ ನಂತರ ದೇಶದ 565 ಸಂಸ್ಥಾನಗಳನ್ನು ಒಗ್ಗೂಡಿಸಿ ಭಾರತವನ್ನು ಅಖಂಡ ರಾಷ್ಟ್ರವನ್ನಾಗಿ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದ ಅಂದಿನ ಉಪಪ್ರಧಾನಿಯೂ ಆಗಿದ್ದ ಗೃಹ ಸಚಿವ ಸರ್ದಾರ್ ವಲ್ಲಭಭಾಯಿ ಪಟೇಲರು ಐತಿಹಾಸಿಕ ಪಾತ್ರ ವಹಿಸಿದ್ದಾರೆ. ಆದರೆ ಇಂತಹ ಮಹಾನ್ ನಾಯಕನ ಪುತ್ಥಳಿ ಸ್ಥಾಪನೆಗೆ ಸರ್ಕಾರಿ ಅಧಿಕಾರಿಗಳೇ ಅಡ್ಡಿಪಡಿಸಿರುವುದು ನಾಚಿಕೇಗೇಡಿನ ಸಂಗತಿ ಎಂದು ಸರ್ದಾರ್ ವಲ್ಲಭಭಾಯಿ ಪಟೇಲ್ ಪ್ರತಿಷ್ಠಾನದ ಅಧ್ಯಕ್ಷ ಶಿವಶರಣಪ್ಪ ವಾಲಿ ಬೇಸರ ವ್ಯಕ್ತಪಡಿಸಿದರು.

ಪಟೇಲರ 152ನೇ ಜಯಂತಿ ಹಾಗೂ 13ನೇ ರಾಷ್ಟ್ರೀಯ ಏಕತಾ ಪ್ರತಿಜ್ಞಾ ಸ್ವೀಕಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಕಳೆದ ಎರಡು ದಶಕಗಳಿಂದ ನಗರದಲ್ಲಿ ಪಟೇಲರ ಪುತ್ಥಳಿ ಸ್ಥಾಪನೆಗಾಗಿ ನಿರಂತರ ಹೋರಾಟ ನಡೆಸಲಾಗುತ್ತಿದೆ. ಈ ಸಂದರ್ಭದಲ್ಲಿ ಹಲವು ಅಡೆತಡೆಗಳನ್ನು ಎದುರಿಸಬೇಕಾಯಿತು. ಕೆಲ ಅಧಿಕಾರಿಗಳು ವಿನಾಕಾರಣ ಪುತ್ಥಳಿ ಸ್ಥಾಪನೆ ಕಾರ್ಯಕ್ಕೆ ಅಡ್ಡಿಪಡಿಸಿದರು. ಆದರೆ



ನ್ಯಾಯಾಲಯದ ನೆರವಿನಿಂದ ಇದೀಗ ಪುತ್ಥಳಿ ಸ್ಥಾಪನೆ ಕಾರ್ಯ ಅಂತಿಮ ಹಂತ ತಲುಪಿದೆ. ಶೀಘ್ರದಲ್ಲೇ ನಗರದ ಶಿವನಗರ ಸಿಗ್ನಲ್ ಬಳಿ ಪಟೇಲರ ಪುತ್ಥಳಿ ಪ್ರತಿಷ್ಠಾಪನೆ ಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಮಾತನಾಡಿ, 'ಸ್ವಾತಂತ್ರ್ಯಾ ನಂತರ ಸಾಮ, ದಾನ, ದಂಡ, ಭೇದ ನೀತಿಗಳ ಮೂಲಕ ಸಂಸ್ಥಾನಗಳನ್ನು ಒಗ್ಗೂಡಿಸಿ ದೇಶದ ಏಕತೆಯನ್ನು ಸಾಕಾರಗೊಳಿಸಿದ ಕೀರ್ತಿ ಪಟೇಲರಿಗೆ ಸಲ್ಲುತ್ತದೆ ಎಂದರು.

ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಮಾತನಾಡಿ, ಹಲವು ಅಡೆತಡೆಗಳ ನಡುವೆಯೂ ಶಿವಶರಣಪ್ಪ ವಾಲಿ ಅವರು ಕಳೆದ 27 ವರ್ಷಗಳಿಂದ ಪಟೇಲರ ಜಯಂತಿಯನ್ನು ನಿರಂತರವಾಗಿ ಆಚರಿಸಿಕೊಂಡು ಬರುತ್ತಿರುವುದು ಶ್ಲಾಘನೀಯ ಎಂದರು.

ವಿಧಾನ ಪರಿಷತ್ ಮಾಜಿ ಸದಸ್ಯ ಅರವಿಂದ ಅರಳಿ ಮಾತನಾಡಿ, ಭಾರತೀಯರೆಂದು ಹೆಮ್ಮೆಯಿಂದ ಹೇಳಿಕೊಳ್ಳಲು ಸರ್ದಾರ್ ಪಟೇಲರ ಕೊಡುಗೆ ಅಪಾರ. ಹೈದರಾಬಾದ್ ಸಂಸ್ಥಾನವನ್ನು ಭಾರತ ಒಕ್ಕೂಟಕ್ಕೆ ಸೇರಿಸುವಲ್ಲಿ ಅವರು ಕೈಗೊಂಡ ದಿಟ್ಟ ನಿರ್ಧಾರಗಳ ಬಗ್ಗೆ ಯುವಪೀಳಿಗೆಗೆ ತಿಳಿಸಬೇಕಿದೆ ಎಂದು ಹೇಳಿದರು.

ಚನ್ನಬಸವಾನಂದ ಸ್ವಾಮೀಜಿ, ಬಿಜೆಪಿ ಮುಖಂಡ ಈಶ್ವರಸಿಂಗ್ ಠಾಕೂರ್, 'ಬುಡಾ' ಅಧ್ಯಕ್ಷ ವಿನೋದ ಅಪ್ಪೆ, ಮಾಜಿ ಬುಡಾ ಅಧ್ಯಕ್ಷ ಬಾಬು ವಾಲಿ, ಮಾಜಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಬಿ.ಜಿ.ಶೆಟಗಾರ್, ಶಕುಂತಲಾ ಬೆಲ್ದಾಳೆ, ರೇವಣಸಿದ್ದಪ್ಪ ಜಲಾದೆ, ದೀಪಕ್ ವಾಲಿ, ಆದಿಶ್ ವಾಲಿ, ಕರ್ನಲ್ ಶರಣಪ್ಪ ಸಿಕೆನಪುರ, ಬಸವರಾಜ ಧನ್ನೂರ, ಫೆರ್ನಾಂಡಿಸ್ ಹಿಪ್ಪಳಗಾವ, ಸುರೇಶ ಚನ್ನಶೆಟ್ಟಿ, ವಿಜಯ ಕುಮಾರ್ ಸೋನಾರೆ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಭೂಮರಡ್ಡಿ ಮಹಾವಿದ್ಯಾಲಯ, ಬಸವೇಶ್ವರ ಶಿಕ್ಷಣ ಸಂಸ್ಥೆ, ಜ್ಞಾನಸುಧಾ ಮಹಾವಿದ್ಯಾಲಯ, ಸರಸ್ವತಿ ಪ್ರೌಢಶಾಲೆ, ನ್ಯಾಷನಲ್ ಇಂಗ್ಲಿಷ್ ಮೀಡಿಯಂ ಹಾಗೂ ಸೈನಿಕ ಶಾಲೆಯ ವಿದ್ಯಾರ್ಥಿಗಳು ರಾಷ್ಟ್ರೀಯ ಏಕತಾ ಪ್ರತಿಜ್ಞೆ ಸ್ವೀಕರಿಸಿದರು.

ಶ್ರೀ ಭುವನೇಶ್ವರಿ ಕನ್ನಡ ಸಂಘದಿಂದ ಕನ್ನಡ ರಾಜ್ಯೋತ್ಸವ ಸಂಭ್ರಮಾಚರಣೆ



ಬೆಂಗಳೂರು/ಬಳ್ಳಾರಿ, ನ.01: ರಘುರಾಮ್ ಅವರ ಅಧ್ಯಕ್ಷತೆ ಹಾಗೂ ಮಾರ್ಗದರ್ಶನದಲ್ಲಿ ಚಂದಾ ಪುರದ ಸೂರ್ಯ ಎಲೆಗನ್ಸ್‌ನ ಶ್ರೀ ಭುವನೇಶ್ವರಿ ಕನ್ನಡ ಸಂಘದ ವತಿಯಿಂದ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮ ಹಾಗೂ ಸಡಗರದಿಂದ ಆಚರಿಸಲಾಯಿತು.

ಕಾರ್ಯಕ್ರಮವು ಶ್ರೀ ಭುವನೇಶ್ವರಿ ದೇವಿಯ ಪೂಜೆ, ಧ್ವಜಾರೋಹಣ, ನಾಡಗೀತೆ ಹಾಗೂ ರಾಷ್ಟ್ರಗೀತೆ ಯೊಂದಿಗೆ ಬಳಿಕ ಸಂಘದ ಉಪಾಧ್ಯಕ್ಷ ಸರ್ಪಭೂಷಣ ಸ್ವಾಗತ ಭಾಷಣ ಮಾಡಿದರು. ಶ ಬಿ.ಎಂ. ರವಿ, ರಾಜಮ್ಮ ಹಾಗೂ ತಂಡದವರು ನಾಡಗೀತೆ ಮತ್ತು ರೈತಗೀತೆಯನ್ನು ಪ್ರಸ್ತುತಪಡಿಸಿದರು. ಸಂಘದ ಕಾರ್ಯದರ್ಶಿ ನರಸಿಂಹಮೂರ್ತಿ ವಿಶೇಷ ಭಾಷಣ ಮಾಡಿ ಕನ್ನಡ ನಾಡು, ನುಡಿ, ಭಾಷೆ, ನೆಲ ಮತ್ತು ಜಲದ ಮಹತ್ವವನ್ನು ವಿವರಿಸಿದರು.

ನಂತರ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಅದ್ದೂರಿಯಾಗಿ ಜರುಗಿದವು. ಈ ಸಂದರ್ಭದಲ್ಲಿ ಐಡಿ ಸಂಸ್ಥೆಯ ವಿವೇಕ್ ಸೌಂದರರಾಜ್ ಅವರು ಉಡುಗೊರೆ ಹ್ಯಾಂಪರ್‌ಗಳನ್ನು ವಿತರಿಸಿದರು.

ಕನ್ನಡ ಭಾಷೆ ಮತ್ತು ನಾಡಿನ ಬಗ್ಗೆ ಅಪಾರ ಅಭಿಮಾನ ಹೊಂದಿರುವ 85 ವರ್ಷದ ಕನ್ನಡ ಪ್ರೇಮಿ ಅಬ್ದುಲ್ ರಹೀಮ್ ಹಾಗೂ ಉದ್ಯಮಿ ವೆಂಕಟೇಶ್ ಗಾದ ಅವರನ್ನು ಆತ್ಮೀಯ ವಾಗಿ ಸನ್ಮಾನಿಸಲಾಯಿತು.

ಕನ್ನಡ ಚೈತನ್ಯ ವೇದಿಕೆಯಿಂದ ಕನ್ನಡ ಉಳಿಸಿ ಬೆಳೆಸುವ ಕಾರ್ಯ ಸಮರ್ಪಕವಾಗಿ ನಡೆಯುತ್ತಿದೆ– ಸೋಮಶೇಖರ ರೆಡ್ಡಿ



ಬಳ್ಳಾರಿ ನ 01– ಗಡಿನಾಡಿನಲ್ಲಿ ಕನ್ನಡ ಉಳಿಸಿ ಬೆಳೆಸುವ ಕಾರ್ಯವನ್ನು ಕನ್ನಡ ಚೈತನ್ಯ ವೇದಿಕೆ ಕಳೆದ 25 ವರ್ಷಗಳಿಂದ ಸಮರ್ಪಕವಾಗಿ ನಿರ್ವಹಿಸುತ್ತಿದೆ ಎಂದು ಮಾಜಿ ಶಾಸಕ ಜಿ ಸೋಮಶೇಖರ ರೆಡ್ಡಿ ತಿಳಿಸಿದರು.

ಕನ್ನಡ ಚೈತನ್ಯ ವೇದಿಕೆಯ ಕಚೇರಿಯಲ್ಲಿ ಹಮ್ಮಿಕೊಂಡಿದ್ದ 71ನೇ ಕರ್ನಾಟಕ ರಾಜ್ಯೋತ್ಸವವನ್ನು ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಕನ್ನಡ ನೆಲ ಜಲ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾರ್ಯ ಎಲ್ಲ ಕನ್ನಡಿಗರ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಕನ್ನಡ ಚೈತನ್ಯ ವೇದಿಕೆಯ ಅಧ್ಯಕ್ಷ ಬಿ ಎಸ್ ಪ್ರಭುಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಬಳ್ಳಾರಿ ಜಿಲ್ಲಾ ಅಧ್ಯಕ್ಷರಾದ ಡಾ. ನಿಷ್ಠಿ ರುದ್ರಪ್ಪ ಕಾರ್ಯಕ್ರಮಕ್ಕೆ ಶುಭ ಕೋರಿದರು. ವೇದಿಕೆಯಲ್ಲಿ ಮಹಾನಗರ ಪಾಲಿಕೆ ಸದಸ್ಯರಾದ ಕೆಎಸ್ ಅಶೋಕ್. ಕಿಟ್ಟು .ಮಹಿಳಾ ಅಧ್ಯಕ್ಷರಾದ ಜ್ಯೋತಿ ಪ್ರಕಾಶ್ ಉಪಸ್ಥಿತರಿದ್ದರು.

ಕನ್ನಡ ಚೈತನ್ಯ ವೇದಿಕೆಯಿಂದ ವಿವಿಧ ವೇಷಭೂಷಣಗಳ ಪ್ರದರ್ಶನ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ನಂತರ ಕನ್ನಡ ಭುವನೇಶ್ವರಿಯ ಮೆರವಣಿಗೆಯನ್ನು ಭವ್ಯವಾಗಿ ನೆರವೇರಿಸಲಾಯಿತು.

ಈ ಕಾರ್ಯಕ್ರಮಕ್ಕೆ ಕನ್ನಡ ಚೈತನ್ಯ ವೇದಿಕೆಯ ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ಜ್ಯೋತಿ ಪ್ರಕಾಶ್ ಹಾಗೂ ನೂರಾರು ಜನ ಕನ್ನಡ ಅಭಿಮಾನಿಗಳು ಭಾಗ ವಹಿಸಿದ್ದರು.

ಕಲಬುರಗಿಯನ್ನು ಸುಸ್ಥಿರ, ಉದ್ಯೋಗ ಸೃಷ್ಟಿಯ ನಗರ ಮಾಡಲು ಸಂಕಲ್ಪ: ಪ್ರಿಯಾಂಕ್ ಖರ್ಗೆ

ಕಲಬುರಗಿ, ನ 1: ಕಲಬುರಗಿಯನ್ನು ಸ್ಮಾರ್ಟ್ ನಗರದ ಜೊತೆಗೆ ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿ ಹೊಂದಿದ ನಗರವನ್ನಾಗಿ ರೂಪಿಸುವ ಸಂಕಲ್ಪ ಮಾಡಿದ್ದು, ನಗರದ ಅಭಿವೃದ್ಧಿಗೆ ನೂತನ ನೀಲನಕ್ಷೆ ಸಿದ್ಧಪಡಿಸಲಾಗಿದೆ. ವಿದೇಶಿ ಬಂಡವಾಳ ಆಕರ್ಷಣೆ, ಉದ್ಯೋಗ ಸೃಷ್ಟಿ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ ಎಂದು ಗೃಹ, ಐಟಿ–ಬಿಟಿ, ಇ–ಆಡಳಿತ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಇತ್ತೀಚೆಗೆ ದಸರಾ ಮಹೋತ್ಸವಕ್ಕೆ 40ಕ್ಕೂ ಹೆಚ್ಚು ವಿದೇಶಿ ರಾಯಭಾರಿಗಳನ್ನು ಆಹ್ವಾನಿಸಲಾಗಿತ್ತು. ಈ ಸಂದರ್ಭದಲ್ಲಿ ಅವರೊಂದಿಗೆ ಸಂವಾದ ನಡೆಸುವ ಅವಕಾಶ ದೊರೆಕಿತು. ಕರ್ನಾಟಕದ ಕಲೆ, ಸಾಹಿತ್ಯ, ಆಹಾರ ಮತ್ತು ಸಂಸ್ಕೃತಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಕನ್ನಡ ಭಾಷೆಗೆ ಸುಮಾರು ಎರಡು ಸಾವಿರ ವರ್ಷಗಳ ಇತಿಹಾಸ ಇರುವುದನ್ನು ತಿಳಿದು ಪ್ರತಿನಿಧಿಗಳು ಅಚ್ಚರಿ ವ್ಯಕ್ತಪಡಿಸಿದರು. ಕನ್ನಡ ಸಾಹಿತ್ಯ ಪರಂಪರೆ, ಇತಿಹಾಸ ಹಾಗೂ ವೈವಿಧ್ಯತೆಯ ಬಗ್ಗೆ ತಿಳಿದುಕೊಂಡು ಸಂತಸಪಟ್ಟರು. ಯುವಜನರಿಗೆ ಅಗತ್ಯವಿರುವ ನೀತಿ–ನಿಯಮಗಳನ್ನು ರೂಪಿಸಿ, ಅವರ ಭವಿಷ್ಯಕ್ಕೆ ಅವಕಾಶಗಳನ್ನು ಕಲ್ಪಿಸುವ ಸಾಮರ್ಥ್ಯ ಕರ್ನಾಟಕಕ್ಕಿದೆ. ಯುವಜನರೇ ನಾಡಿನ ನಿಜವಾದ ಆಸ್ತಿ. ಕಲಬುರಗಿಯ ಅಭಿವೃದ್ಧಿಗೆ ಯುವಕರಿಗೆ ಗುಣಮಟ್ಟದ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಉದ್ಯೋಗಾವಕಾಶಗಳ ಸೃಷ್ಟಿ ನಮ್ಮ ನಮ್ಮ ಆದ್ಯತೆಯಗಿದೆ ಕಲಬುರಗಿಯ ಸಮಗ್ರ ಅಭಿವೃದ್ಧಿಗೆ ಕಳೆದ ವರ್ಷವೇ ನೀಲನಕ್ಷೆ ಘೋಷಿಸಿದ್ದೆ. ಇದೀಗ ನಗರಕ್ಕೆ ಮಾಸ್ಟರ್ ಪ್ಲ್ಯಾನ್ ಸಿದ್ಧಪಡಿಸಲಾಗಿದ್ದು, ಸ್ಮಾರ್ಟ್ ಸಿಟಿ ಮಾದರಿಯಲ್ಲಿ ವಿದೇಶಿ ಬಂಡವಾಳ ಆಕರ್ಷಿಸುವುದು, ಉದ್ಯೋಗ ಸೃಷ್ಟಿಸುವುದು ಹಾಗೂ ಮೂಲಸೌಕರ್ಯ ಅಭಿವೃದ್ಧಿ ಉದ್ದೇಶದೊಂದಿಗೆ ಮುಂದಿನ ಎರಡು ವರ್ಷಗಳಲ್ಲಿ ಯೋಜನೆಗಳ ಫಲಿತಾಂಶ ಕಾಣುವ ವಿಶ್ವಾಸ ವ್ಯಕ್ತಪಡಿಸಿದರು. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಯುವಕರಿಗೆ ನೆರವಾಗುವ ಉದ್ದೇಶದಿಂದ ಈಗಾಗಲೇ ಪ್ರಬುದ್ಧ ಅಕಾಡೆಮಿ ಸ್ಥಾಪಿಸಲಾಗಿದೆ. ಜೊತೆಗೆ ವಿಭಿನ್ನ ರೀತಿಯಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಉದ್ದೇಶದಿಂದ ನೆಕ್ಸ್ ಫೌಂಡೇಶನ್ ಸ್ಥಾಪಿಸಲಾಗಿದೆ. ಖಾಸಗಿ ಸಹಭಾಗಿತ್ವದ ಮೂಲಕ ಅಭಿವೃದ್ಧಿ ಕಾರ್ಯಗಳನ್ನು ಹೇಗೆ ಪರಿಣಾಮಕಾರಿಯಾಗಿ ಕೈಗೊಳ್ಳಬಹುದು ಎಂಬುದಕ್ಕೆ ಈ ಸಂಸ್ಥೆ ಮಾದರಿಯಾಗಲಿದೆ ಎಂದರು.

ಕಲಬುರಗಿಯ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ. ಈ ಕಾರ್ಯ ಕೇವಲ ಜನಪ್ರತಿನಿಧಿಗಳ ಜವಾಬ್ದಾರಿಯಾಗದೆ ಅಧಿಕಾರಿಗಳು, ಶಿಕ್ಷಕರು, ಪತ್ರಕರ್ತರು ಹಾಗೂ ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಸಾಗಬೇಕು. ಯುವಜನರನ್ನು ಸಂಘಟಿಸಿ, ಅವರಲ್ಲಿ ಕೌಶಲ್ಯ ಮತ್ತು ಸಾಮರ್ಥ್ಯ ಬೆಳೆಸುವ ಮೂಲಕ ಅಭಿವೃದ್ಧಿಯ ಪಯಣದಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.


ಟನ್ ಕಬ್ಬಿಗೆ 5,500 ಬೆಲೆ ನಿಗದಿಗೆ ಆಗ್ರಹ: ಕೆಪಿಆರ್ ಸಕ್ಕರೆ ಕಾರ್ಖಾನೆಯ ಗೋದಾಮಿಗೆ ಬೀಗ ಹಾಕಿ ಪ್ರತಿಭಟಿಸಿದ ರೈತರು

ಕಲಬುರಗಿ, ನ. 1: ಜಿಲ್ಲೆಯಲ್ಲಿ ಕಬ್ಬು ಬೆಳೆಗಾರರ ಹೋರಾಟ ದಿನದಿಂದ ದಿನಕ್ಕೆ ತೀವ್ರ ಸ್ವರೂಪ ಪಡೆದುಕೊಳ್ಳುಜತ್ತಿದ್ದು, ಪ್ರತಿ ಟನ್ ಕಬ್ಬಿಗೆ ಸೂಕ್ತ ಬೆಂಬಲ ಬೆಲೆ ನಿಗದಿಪಡಿಸುವಂತೆ ಆಗ್ರಹಿಸಿ ಅಫಜಲಪುರ ತಾಲ್ಲೂಕಿನ ರೈತರು ಕೆಪಿಆರ್ ಸಕ್ಕರೆ ಕಾರ್ಖಾನೆ ಗೋದಾಮಿಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು.

ಜಿಲ್ಲೆಯ ಅಫಜಲಪುರ ತಾಲೂಕಿನ ಚಿಣಮಗೇರ ಗ್ರಾಮದ ಕೆಪಿಆರ್ ಸಕ್ಕರೆ ಕಾರ್ಖಾನೆಯ ಆವರಣದಲ್ಲಿ ಜಮಾಯಿಸಿದ ರೈತರು, ಕಾರ್ಖಾನೆಯ ಸಕ್ಕರೆ ಗೋದಾಮಿಗೆ ಮುತ್ತಿಗೆ ಹಾಕಿ, ನಮಗೆ ಬೆಂಬಲ ಬೆಲೆ ದೊರೆಯುವವರೆಗೆ ನಿಮ್ಮ ಸಕ್ಕರೆ ಮಾರಾಟಕ್ಕೆ ಅವಕಾಶ ಕೊಡುವುದಿಲ್ಲ ಎಂದು ಗೋದಾಮಿಗೆ ಬೀಗ ಜಡಿದು ಆಕ್ರೋಶ ವ್ಯಕ್ತಪಡಿಸಿ, ಈ ವೇಳೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಟನ್ ಕಬ್ಬಿಗೆ 5,500 ಬೆಲೆ ನಿಗದಿಪಡಿಸಬೇಕು ಹಾಗೂ ಕಬ್ಬಿಗೆ ಕನಿಷ್ಠ ಬೆಂಬಲ ಬೆಲೆ ಜಾರಿಗೊಳಿಸಬೇಕು ಎಂಬುದು ರೈತರ ಪ್ರಮುಖ ಬೇಡಿಕೆಯಾಗಿದೆ. ಕಬ್ಬು ಬೆಳೆ ಬೆಳೆಯಲು ತಗಲುತ್ತಿರುವ ವೆಚ್ಚ ಹೆಚ್ಚಾಗಿದ್ದು, ಪ್ರಸ್ತುತ ದೊರೆಯುತ್ತಿರುವ ಬೆಲೆಯಿಂದ ರೈತರಿಗೆ ಸೂಕ್ತ ಆದಾಯ ಸಿಗುತ್ತಿಲ್ಲ ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು.

ಕಬ್ಬಿಗೆ ನ್ಯಾಯಯುತ ಬೆಲೆ ನಿಗದಿಪಡಿಸುವ ವರೆಗೂ ಸಕ್ಕರೆ ಮಾರಾಟವನ್ನು ಸ್ಥಗಿತಗೊಳಿಸಬೇಕು. ಸರ್ಕಾರ ಕೂಡಲೇ ರೈತರ ಬೇಡಿಕೆಗಳಿಗೆ ಸ್ಪಂದಿಸಿ ಪ್ರತಿ ಟನ್ ಕಬ್ಬಿಗೆ 5,500 ಬೆಲೆ ನಿಗದಿಪಡಿಸಬೇಕು. ಇಲ್ಲದಿದ್ದರೆ ಹೋರಾಟ ವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ರೈತರು ಎಚ್ಚರಿಕೆ ನೀಡಿದರು.



ಕಬ್ಬು ಬೆಳೆಗಾರರ ಬೇಡಿಕೆ ಈಡೇರಿಸು ವಂತೆ ಸರ್ಕಾರದ ಮೇಲೆ ಒತ್ತಡ ಹೇರಲು ರೈತರು ಸಕ್ಕರೆ ಕಾರ್ಖಾನೆಯ ಗೋದಾಮಿಗೆ ಬೀಗ ಹಾಕುವ ಮೂಲಕ ಪ್ರತಿಭಟನೆ ನಡೆಸಿದ್ದು, ಸ್ಥಳದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು.

ಕಲಬುರಗಿಯಲ್ಲಿ ರಸ್ತೆ ತಡೆ

ಟನ್ ಕಬ್ಬಿಗೆ 5,500 ರೂ. ಬೆಂಬಲ ಬೆಲೆ ನಿಗದಿಪಡಿಸುವುದು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ನೇತೃತ್ವದಲ್ಲಿ ರೈತರು ನಗರದ ರಾಮ ಮಂದಿರ ವೃತ್ತದ ಬಳಿ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು. ರೈತರೊಂದಿಗೆ ನಡೆಸಿದ ಸಭೆ ವಿಫಲವಾದ ಹಿನ್ನೆಲೆಯಲ್ಲಿ ರೈತರು ಮತ್ತೆ ರಸ್ತೆಗಿಳಿದು ಹೋರಾಟ ನಡೆಸಿದರು. ಕಬ್ಬಿಗೆ ರಾಜ್ಯಾದ್ಯಂತ ಏಕರೂಪದ ದರ ನಿಗದಿಪಡಿಸಬೇಕು. ಎಲ್ಲ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿಪಡಿಸುವ ಕಾನೂನು ಜಾರಿಗೆ ತರಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಸಕ್ಕರೆಗೆ ಕೆ.ಜಿ.ಗೆ 60 ರೂ., ಕಬ್ಬಿಗೆ ಟನ್‌ಗೆ 5,500 ರೂ., ತೊಗರಿಗೆ ಕ್ವಿಂಟಲ್‌ಗೆ 15,000 ರೂ., ಹತ್ತಿಗೆ 15,000 ರೂ. ಮೆಣಸಿನಕಾಯಿಗೆ 30,000 ರೂ. ಹಾಗೂ ಭತ್ತಕ್ಕೆ ಕ್ವಿಂಟಲ್‌ಗೆ 5,000 ರೂ. ದರ ನಿಗದಿಪಡಿಸಬೇಕು ಎಂದು ರೈತರು ಆಗ್ರಹಿಸಿದರು.

ಇತರ ಬೆಳೆಗಳಿಗೂ ಡಾ.ಎಂ.ಎಸ್. ಸ್ವಾಮಿನಾಥನ್ ಆಯೋಗದ ಶಿಫಾರಸುಗಳಂತೆ ಬೆಲೆ ನಿಗದಿಪಡಿಸಬೇಕು ಎಂದು ಒತ್ತಾಯಿಸಿದರು. ರೈತರ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು. ರೈತ ಸಂಘದ ಜಿಲ್ಲಾಧ್ಯಕ್ಷ ಮಹಾಂತಗೌಡ ನಂದಿಹಳ್ಳಿ, ರಾಜ್ಯ ಕಾರ್ಯದರ್ಶಿ ಬಸವರಾಜ ಸಿ.ಕೋರಿ, ಹಿರಿಯ ರೈತ ಹೋರಾಟಗಾರ ಉಮಾಪತಿ ಪಾಟೀಲ ನಂದೂರ, ಸಾಮಾಜಿಕ ಹೋರಾಟಗಾರ ಸಿದ್ದು ಎಸ್.ಹಿರೇಮಠ, ಮಲ್ಲಿಕಾರ್ಜುನ, ಕರೆಪ್ಪ ಕಾರಗುಂಡ, ಯುವ ಘಟಕದ ಜಿಲ್ಲಾಧ್ಯಕ್ಷ ಸಿದ್ದು ಎಸ್.ಎಲ್. ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಕರ್ನಾಟಕದಲ್ಲಿ ಕಬ್ಬಿಗೆ ಎಂಎಸ್‌ಪಿ (ಕನಿಷ್ಠ ಬೆಂಬಲ ಬೆಲೆ) ಮತ್ತು ಸೂಕ್ತ ದರ ನಿಗದಿಪಡಿಸುವಂತೆ ಒತ್ತಾಯಿಸಿ ಅಕ್ಟೋಬರ್ 2026ರಲ್ಲಿ ರೈತರ ಪ್ರತಿಭಟನೆಗಳು ತೀವ್ರಗೊಂಡಿವೆ. ಬೆಳಗಾವಿ, ಗದಗ (ಮುಳಗುಂದ ನಾಕಾ), ಲೋಕಾಪುರ (ಬಾಗಲಕೋಟೆ), ಹುಬ್ಬಳ್ಳಿ ಮತ್ತು ಮಂಡ್ಯ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ರೈತರು ರಸ್ತೆ ತಡೆ, ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿ ಬಂದ್ ಹಾಗೂ ಬಸ್ ತಡೆ ನಡೆಸಿದ್ದಾರೆ.

ವಿವಿಧ ಜಿಲ್ಲೆಗಳಲ್ಲಿ ವಿಜೃಂಭಣೆಯಿಂದ ನೆರವೇರಿದ 71ನೇ ಕನ್ನಡ ರಾಜ್ಯೋತ್ಸವದ ದೃಶ್ಯಾವಳಿ



ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆದ ಕನ್ನಡ ರಾಜ್ಯೋತ್ಸವಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭಾಗಿ.



ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಮೈಸೂರಿನಲ್ಲಿ ಭಾನುವಾರ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ವಿವಿಧ ಜಿಲ್ಲೆಗಳಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳ ದೃಶ್ಯ









ಕಲಬುರಗಿಯಲ್ಲಿ ಕನ್ನಡ ರಾಜ್ಯೋತ್ಸವ ಮೆರವಣಿಗೆಗೆ ಸಚಿವ ಪ್ರಿಯಾಂಕ್ ಖರ್ಗೆ ಭಾನುವಾರ ಚಾಲನೆ ನೀಡಿದರು.



ಬೆಳಗಾವಿಯಲ್ಲಿ ಭಾನುವಾರ ಸಾಂಸ್ಕೃತಿಕ ಮೆರವಣಿಗೆ ಮತ್ತು ಮೆರವಣಿಗೆಯೊಂದಿಗೆ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು. ಸಚಿವ ಸತೀಶ ಜಾರಕಿಹೊಳಿ ಮೆರವಣಿಗೆಗೆ ಚಾಲನೆ ನೀಡಿದರು.



ಭಾನುವಾರ ಧಾರವಾಡದ ಆರ್.ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಸಚಿವ ಸಂತೋಷ್ ಲಾಡ್ ಕನ್ನಡ ರಾಜ್ಯೋತ್ಸವ ಆಚರಣೆಯಲ್ಲಿ ವಂದನೆ ಸ್ವೀಕರಿಸಿದರು.



ಭಾನುವಾರ ಕೊಪ್ಪಳದಲ್ಲಿ ಸಚಿವ ಶಿವರಾಜ ತಂಗಡಗಿ ರಾಜ್ಯೋತ್ಸವ ಆಚರಣೆಯಲ್ಲಿ ಪಾಲ್ಗೊಂಡರು.





ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಸಮಾಜ ಕಲ್ಯಾಣ ಇಲಾಖೆ

ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಒಂದು ಉದ್ಯಮ) (BJR-LIDKAR)

50 ಅಡ್‌ಕರ್ 1976-2026

"ಚರ್ಮೋದ್ಯಮದ ಬೆಳವಣಿಗೆ - ಚರ್ಮಕುಶಲಕರ್ಮಿಗಳ ಪ್ರಗತಿಯೇ ನಮ್ಮ ಸಂಕಲ್ಪ"

ಪರಿಶಿಷ್ಟ ಜಾತಿಯ ಚರ್ಮ ಕುಶಲಕರ್ಮಿಗಳ ಅಭಿವೃದ್ಧಿಯ ಸದಾವಕಾಶ

ಕೆಳಕಂಡ ಯೋಜನೆಗಳಿಗೆ ಅರ್ಜಿ ಆಹ್ವಾನ



ಡಾ.ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಶ್ರೀ ಕೆ.ಹೆಚ್. ಮುನಿಯಪ್ಪ, ಮಾನ್ಯ ಸಮಾಜ ಕಲ್ಯಾಣ ಸಚಿವರು ನಿಗಮದ ಕಾರ್ಯಕ್ರಮಕ್ಕೆ ಆಗಮಿಸಿದಾಗ ಶ್ರೀ ಮುಂಡರಗಿ ನಾಗರಾಜ, ಅಧ್ಯಕ್ಷರು, ಜಿಜೆಆರ್ - ಅಡ್‌ಕರ್, ಸ್ವಾಗತ ಕೋರಿದರು.

▼ ತರಬೇತಿ ಕಾರ್ಯಕ್ರಮ

ಕೌಶಲ್ಯಾಭಿವೃದ್ಧಿ ಮತ್ತು ಆದಾಯಗಳಿಕೆ ತರಬೇತಿ



▼ ಸ್ವಯಂ ಉದ್ಯೋಗ ಯೋಜನೆಗಳು

1. ಸ್ವಾವಲಂಬಿ / ಸಂಚಾರಿ ಮಾರಾಟ ಮಳಿಗೆ
2. ನೇರ ಸಾಲ ಯೋಜನೆ
3. ಚರ್ಮಶಿಲ್ಪ ಯೋಜನೆ
4. ಮಹಿಳಾ ಕುಶಲಕರ್ಮಿಗಳಿಗೆ "ಕಾಯಕ ಸ್ಫೂರ್ತಿ" ಯೋಜನೆ
5. "ಪಾದುಕೆ ಕುಟೀರ"
6. ಮಾರುಕಟ್ಟೆ ಸಹಾಯ ಯೋಜನೆ

▼ ವಸತಿ ಕಾರ್ಯಾಗಾರ

ಡಾ. ಬಾಬು ಜಗಜೀವನ ರಾಂ ವಸತಿ ಕಾರ್ಯಾಗಾರ ಯೋಜನೆ

ಫಲಾಪೇಕ್ಷಿಗಳು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ಲಿಂಕ್ http://Sevasindhu.karnataka.gov.in ಮೂಲಕ ಸಲ್ಲಿಸುವುದು.

ವಿಶೇಷ ಸೂಚನೆ :

1. 2023-24, 2024-25 ಮತ್ತು 2025-26 ಸಾಲಿನಲ್ಲಿ ಈಗಾಗಲೇ ನಿಗಮದ ಯೋಜನೆಗಳಿಗೆ ಅರ್ಜಿ ಸಲ್ಲಿಸಿರುವವರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.
2. ಮಂಡಳಿ ವಿವೇಚನಾ ಕೋಟಾ ಅಥವಾ ಸರ್ಕಾರದ ಸಾಂಸ್ಥಿಕ ಕೋಟಾದಡಿ ಸ್ವೀಕರಿಸುವ ಅರ್ಜಿಗಳನ್ನು ಸಹ ಸೇವಾಸಿಂಧು ಪೋರ್ಟಲ್ ಮೂಲಕವೇ ಸಲ್ಲಿಸುವುದು.
3. ನಿಗದಿತ ದಿನಾಂಕದೊಳಗೆ ಅರ್ಜಿ ಸಲ್ಲಿಸುವುದು. ನಂತರ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

ಪೋರ್ಟಲ್‌ನಲ್ಲಿ ಅರ್ಜಿಗಳನ್ನು ದಿನಾಂಕ : 29-10-2026 ರ ಮಧ್ಯಾಹ್ನ 12.00 ಗಂಟೆಯಿಂದ ಸ್ವೀಕರಿಸಲು ಪ್ರಾರಂಭಿಸಲಾಗುವುದು

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 28-11-2026

ಹೆಚ್ಚಿನ ಮಾಹಿತಿಗಾಗಿ ನಿಗಮದ ಎಲ್ಲಾ ಜಿಲ್ಲಾ ಸಂಯೋಜಕರುಗಳ ಕಛೇರಿ ಅಥವಾ ನಿಗಮದ ವೆಬ್‌ಸೈಟ್ http://lidkar.com ನ್ನು ಸಂಪರ್ಕಿಸುವುದು.

ಅಡ್‌ಕರ್ ನಂಬಿಕೆ. ನಿರಂತರ.

ಕಲ್ಯಾಣಮಿತ್ರ ಏಕೀಕೃತ ಎಸ್.ಸಿ / ಎಸ್.ಟಿ 24X7 ಸಹಾಯವಾಣಿ 9482300400 ಸಂಪರ್ಕಿಸುವುದು.



ವಿಶೇಷ ರಿಯಾಯಿತಿ 30%-50%
ದಿನಾಂಕ : 13-11-2026 ವರೆಗೆ
ಆಯ್ದ ಉತ್ಪನ್ನಗಳ ಮೇಲೆ

ಹೊಸ ಸ್ಪರ್ಶ ಹೊಸತನದೊಂದಿಗೆ ಅಡ್‌ಕರ್ ಅಪ್ಪಟ ಚರ್ಮೋತ್ಪನ್ನಗಳಿಗೆ
50 ವರ್ಷಗಳ ನಂಬಿಕೆ ನಿರಂತರ, ಪರಂಪರೆಯಿಂದ ಪ್ರಗತಿಯಡೆಗೆ

ಅಡ್‌ಕರ್ ಉತ್ಪನ್ನಗಳನ್ನು ಖರೀದಿಸಿ, ಚರ್ಮಕುಶಲಕರ್ಮಿಗಳನ್ನು ಪ್ರೋತ್ಸಾಹಿಸಿ

www.lidkar.com, shop.lidkar.com

ಬೆಂಗಳೂರು ವಸಂತನಗರ ನೆಲಮಹಡಿಯಲ್ಲಿ ಮಾತ್ರ

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು" –ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಡಾ. ಹೆಚ್. ನಟರಾಜ್
ವ್ಯವಸ್ಥಾಪಕ ನಿರ್ದೇಶಕರು, ಬಿ.ಜೆ.ಆರ್ - ಅಡ್‌ಕರ್

ನಾಗರಾಜ ಎನ್.ಎಂ., ಭಾ.ಆ.ಸೇ.,
ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ

ಕೆ.ಪಿ. ಮೋಹನ್‌ರಾಜ್, ಭಾ.ಆ.ಸೇ.,
ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ